22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ರಾಷ್ಟ್ರ ರಾಜಧಾನಿಯ ಕನ್ನಡ ಧ್ವನಿ · ನಿಖರ ನಿರ್ಭೀತ ನಿರಂತರ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 308 | ನವದೆಹಲಿ | ಬೆಲೆ ₹10 | ಮೇ 15, 2025, ಗುರುವಾರ



22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಮೇ 15, 2025, ಗುರುವಾರ

## ಒಳಪುಟಗಳಲ್ಲಿ

ಶಿರಾ ಸೇರಿ 4 ಕಡೆ ರೈಲ್ವೆ ನಿಲ್ದಾಣ, ರೈಲ್ವೆ ಸಚಿವ ವಿ.ಸೋಮಣ್ಣ ಜೊತೆ ಸಭೆ: ಟಿ.ಬಿ.ಜಯಚಂದ್ರ – ಪು.4

# ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ಪ್ರಮಾಣವಚನ



ನವದೆಹಲಿ, ಮೇ 14: ನ್ಯಾ.ಭೂಷಣ್ ರಾಮಕೃಷ್ಣ ಗವಾಯಿ ಬುಧವಾರ ಸುಪ್ರೀಂ ಕೋರ್ಟ್‌ನ 52ನೇ ಮುಖ್ಯ ನ್ಯಾಯಮೂರ್ತಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು.

ರಾಷ್ಟ್ರಪತಿ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಗವಾಯಿ ಅವರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರಮಾಣ ವಚನ ಬೋಧಿಸಿದರು. ಮಂಗಳವಾರ ನ್ಯಾ.ಸಂಜೀವ ಖನ್ನಾ ಅವರ ನಿವೃತ್ತಿ ಬಳಿಕ ಇಂದು ನ್ಯಾ.ಬಿ.ಆರ್ ಗವಾಯಿ ಅವರು ಮುಖ್ಯ ನ್ಯಾಯಮೂರ್ತಿ ಹುದ್ದೆಯನ್ನು ಅಲಂಕರಿಸಿದ್ದಾರೆ.

52ನೇ ಮುಖ್ಯ ನ್ಯಾಯಮೂರ್ತಿಯಾಗಿರುವ ಬಿ.ಆರ್.ಗವಾಯಿ ಅವರು 6 ತಿಂಗಳಿಗೂ ಹೆಚ್ಚಿನ ಅವಧಿ ಅಧಿಕಾರದಲ್ಲಿರಲಿದ್ದು, ಇದೇ ನ.23ರಂದು ನಿವೃತ್ತಿ ಹೊಂದಲಿದ್ದಾರೆ. ಜೊತೆಗೆ ದೇಶದ ಅತ್ಯುನ್ನತ ನ್ಯಾಯಾಂಗ ಹುದ್ದೆಗೆ ಏರಿದ ಮೊದಲ ಬೌದ್ಧ ಮತ್ತು ಪರಿಶಿಷ್ಟ ಜಾತಿಯಿಂದ ಆಯ್ಕೆಯಾದ ಎರಡನೇ ನ್ಯಾಯಾಧೀಶರಾದರು ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಸುಪ್ರೀಂ ಕೋರ್ಟ್‌ನ ನ್ಯಾಯಾಧೀಶರಾಗಿ, ಮುಖ್ಯ ನ್ಯಾಯಮೂರ್ತಿ ಗವಾಯಿ ಅವರು ಹಲವು ಮಹತ್ವದ ತೀರ್ಪುಗಳನ್ನು ನೀಡಿದ್ದಾರೆ. ಆ ಪೈಕಿ 2016ರ ನೋಟು ರದ್ದತಿ, ಚುನಾವಣಾ ಬಾಂಡ್ ಯೋಜನೆಯ ತೀರ್ಪು ಸೇರಿದಂತೆ ಒಟ್ಟು 300 ತೀರ್ಪುಗಳನ್ನು ನೀಡಿದ್ದಾರೆ.



ರಕ್ಷಣಾ ಪಡೆಗಳ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್, ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ, ನೌಕಾಪಡೆಯ ಅಡ್ಮಿರಲ್ ದಿನೇಶ್ ಕೆ. ತ್ರಿಪಾಠಿ ಮತ್ತು ವಾಯುಪಡೆಯ ಮುಖ್ಯಸ್ಥ ಏರ್ ಚೀಫ್ ಮಾರ್ಷಲ್ ಎ.ಪಿ.ಸಿಂಗ್ ಅವರು ಬುಧವಾರ ನವದೆಹಲಿಯಲ್ಲಿ ರಾಷ್ಟ್ರಪತಿ ದ್ರೌಪದಿಮುರ್ಮು ಅವರನ್ನು ಭೇಟಿಯಾಗಿ ಆಪರೇಷನ್ ಸಿಂಧೂರ್ ಬಗ್ಗೆ ವಿವರಿಸಿದರು.

# ಮತ್ತೆ ರಾಜಭವನ ಅಂಗಳ ತಲುಪಿದ ತಿದ್ದುಪಡಿ ವಿಧೇಯಕ

ಬೆಂಗಳೂರು, ಮೇ 14: ಕರ್ನಾಟಕದಲ್ಲಿ ರಾಜ್ಯ ಸರ್ಕಾರ ಮತ್ತು ರಾಜಭವನದ ನಡುವಿನ ವಿಧೇಯಕಗಳ ಅನುಮೋದನೆ ಜಟಾಪಟಿ ಮುಂದುವರಿದಿದೆ. ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ವಿವರಣೆ ಕೇಳಿ ವಾಪಸ್ ಕಳುಹಿಸಿದ್ದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯ (ತಿದ್ದುಪಡಿ) ಮಸೂದೆ ಸೇರಿದಂತೆ ಒಟ್ಟು ಆರು ಪ್ರಮುಖ ತಿದ್ದುಪಡಿ ವಿಧೇಯಕಗಳನ್ನು ರಾಜ್ಯ ಸರ್ಕಾರ ಸ್ಪಷ್ಟನೆಯೊಂದಿಗೆ ಮತ್ತೆ ರಾಜಭವನಕ್ಕೆ ರವಾನಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ವಿವಿಧ 6 ಪ್ರಮುಖ ಮಸೂದೆಗಳನ್ನು ಮತ್ತೊಮ್ಮೆ ರಾಜ್ಯಪಾಲರಿಗೆ ಕಳುಹಿಸಿದೆ. ಈ ಆರು ಪ್ರಮುಖ ಮಸೂದೆಗಳ ಪೈಕಿ ಮೂರು ಮಸೂದೆಗಳಿಗೆ ಒಂದು ವರ್ಷದಿಂದ ರಾಜ್ಯಪಾಲರ ಒಪ್ಪಿಗೆ ಬಾಕಿ ಉಳಿದಿವೆ. ಹೀಗಾಗಿ ಸಕಲ ಸ್ಪಷ್ಟನೆಯೊಂದಿಗೆ ಮತ್ತೊಮ್ಮೆ ಮಸೂದೆ ಗಳನ್ನು ರಾಜಭವನಕ್ಕೆ ರವಾನಿಸಿರುವ ರಾಜ್ಯ ಸರ್ಕಾರ ಈ ಬಾರಿಯಾದರೂ ರಾಜ್ಯಪಾಲರು ಅನುಮೋದನೆ ನೀಡಬಹುದು ಎನ್ನುವ ನಿರೀಕ್ಷೆಯಲ್ಲಿದೆ. ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯ ತಿದ್ದುಪಡಿ ವಿಧೇಯಕ –2024, ಮೈಸೂರು ಅಭಿವೃದ್ಧಿ ಪ್ರಾಧಿಕಾರ ವಿಧೇಯಕ –2024, ಕರ್ನಾಟಕ ಲೋಕಸೇವಾ ಆಯೋಗ ಕಾರ್ಯ ನಿರ್ವಹಣೆ ಮತ್ತು ಇತರ ಪ್ರಕಾರ್ಯಗಳು ತಿದ್ದುಪಡಿ ವಿಧೇಯಕ –2024, ಗದಗ–ಬೆಟಗೇರಿ ವ್ಯಾಪಾರ, ಸಾಂಸ್ಕೃತಿಕ ಮತ್ತು ಪ್ರದರ್ಶನ ಪ್ರಾಧಿಕಾರ ವಿಧೇಯಕ –2024, ಕರ್ನಾಟಕ ಸೌಹಾರ್ದ ಸಹಕಾರಿ ತಿದ್ದುಪಡಿ ವಿಧೇಯಕ –2024 ಹಾಗೂ ಕರ್ನಾಟಕ ಸಹಕಾರ ಸಂಘಗಳ ತಿದ್ದುಪಡಿ ವಿಧೇಯಕ –2024ಕ್ಕೆ ಅನುಮೋದನೆ ನೀಡುವಂತೆ ರಾಜ್ಯ ಸರ್ಕಾರ ರಾಜ್ಯಪಾಲರಿಗೆ ಸಕಲ ಸ್ಪಷ್ಟನೆಯೊಂದಿಗೆ ಮಸೂದೆ ಗಳನ್ನು ಸಲ್ಲಿಕೆ ಮಾಡಿದೆ.

# ಜೈಶಂಕರ್, ಜೆ.ಪಿ.ನಡ್ಡಾ ಸೇರಿ 25 ಪ್ರಮುಖರಿಗೆ ಭದ್ರತೆ ಹೆಚ್ಚಳ

ನವದೆಹಲಿ, ಮೇ 14: ಆಪರೇಷನ್ ಸಿಂಧೂರದ ಬಳಿಕ ವಿದೇಶಾಂಗ ಸಚಿವ ಎಸ್.ಜೈಶಂಕರ್‌ಗೆ ಸೇರಿ 25 ಪ್ರಮುಖರಿಗೆ ಭದ್ರತೆ ಹೆಚ್ಚಿಸಲಾಗಿದ್ದು, ಬುಲೆಟ್ ಪ್ರೂಫ್ ಕಾರು, ಕಮಾಂಡೋ ಸೆಕ್ಯೂರಿಟಿಯನ್ನು ನೀಡಲಾಗಿದೆ.

ಏ.22ರಂದು ನಡೆದ ಪಹಲ್ಗಾಮ್ ದಾಳಿಯ ಬಳಿಕ ಭಾರತ ಹಾಗೂ ಪಾಕಿಸ್ತಾನದ ನಡುವಿನ ಉದ್ವಿಗ್ನತೆ ಜೋರಾಗಿದ್ದು, ಕದನ ವಿರಾಮ ಘೋಷಣೆಯಾದ ಬಳಿಕ ವಿದೇಶಾಂಗ ಸಚಿವಾಲಯದ ವಿನಂತಿ ಮೇರೆಗೆ 25 ಪ್ರಮುಖರಿಗೆ ನೀಡುವ ಭದ್ರತೆಯನ್ನು ಹೆಚ್ಚಿಸಲಾಗಿದೆ.

ದೆಹಲಿ ಪೊಲೀಸ್ ಆಯುಕ್ತ ಸಂಜಯ್ ಅರೋರಾ ಅವರು ಹಿರಿಯ ಅಧಿಕಾರಿಗಳೊಂದಿಗೆ ಭಾನುವಾರ ನಡೆಸಿದ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದ್ದು, 25 ವಿಐಪಿಗಳ ಪಟ್ಟಿಯನ್ನು ತಯಾರಿಸಲಾಗಿದೆ. ಪಟ್ಟಿಯಲ್ಲಿ ವಿದೇಶಾಂಗ ಸಚಿವ ಎಸ್.ಜೈಶಂಕರ್, ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ, ಜೆಪಿ ನಡ್ಡಾ, ಭೂಪೇಂದರ್ ಯಾದವ್, ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ, ಬಿಜೆಪಿ ಸಂಸದ ನಿಶಿಕಾಂತ್ ದುಬೆ, ಸುಧಾಂಶು ತ್ರಿವೇದಿ ಹಾಗೂ ಬಿಜೆಪಿಯ ಪ್ರಮುಖ ನಾಯಕ ಮುರಳಿ ಮನೋಹರ್ ಜೋಶಿ ಅವರ ಹೆಸರಿದೆ ಎಂದು ಮೂಲಗಳು ತಿಳಿಸಿವೆ.

ಈಗಾಗಲೇ Z ಸೆಕ್ಯೂರಿಟಿ ಹೊಂದಿರುವ ಜೈಶಂಕರ್ ಅವರಿಗೆ ಮತ್ತೆ ಭದ್ರತೆ ಹೆಚ್ಚಿಸಲಾಗಿದ್ದು, ಒಂದು ಬುಲೆಟ್ ಪ್ರೂಫ್ ಕಾರು, 4–6 ಕಮಾಂಡೋ ಸೇರಿ 22 ಸಿಬ್ಬಂದಿ, ಭದ್ರತೆಗೆ ಬೆಂಗಾವಲು ವಾಹನಗಳು, 33 ಸಿಆರ್‌ಪಿಎಫ್ ಕಮಾಂಡೋ ಹಾಗೂ ದಿನದ 24/7 ಭದ್ರತೆ ನೀಡಲಾಗಿದೆ. ಜೊತೆಗೆ ದೆಹಲಿಯಲ್ಲಿರುವ ಸರ್ಕಾರಿ ನಿವಾಸಕ್ಕೆ ಬಿಗಿ ಭದ್ರತೆ ಒದಗಿಸಲಾಗಿದೆ. ಇದಕ್ಕೂ ಮುನ್ನ ಕಳೆದ ವರ್ಷ ಅಕ್ಟೋಬರ್‌ನಲ್ಲಿ ಜೈಶಂಕರ್ ಅವರ ಭದ್ರತೆಯನ್ನು Y ನಿಂದ Zಗೆ ಹೆಚ್ಚಿಸಲಾಗಿತ್ತು.

ಭದ್ರತೆಗಾಗಿ ಒದಗಿಸುತ್ತಿರುವ ಕಾರುಗಳಲ್ಲಿ ಪ್ರಥಮ ಚಿಕಿತ್ಸಾ ಕಿಟ್ ಇರಿಸುವಂತೆ ಹಾಗೂ ಭದ್ರತಾ ಸಿಬ್ಬಂದಿಗೆ ಫೈರಿಂಗ್ ಹಾಗೂ ವೈದ್ಯಕೀಯ ತುರ್ತು ಪರಿಸ್ಥಿತಿಗಳ ಕುರಿತು ತರಬೇತಿ ನೀಡುವಂತೆ ತಿಳಿಸಲಾಗಿದೆ.

ಮೇ 7ರಂದು ಭಾರತೀಯ ಸೇನೆ ನಡೆಸಿದ ಆಪರೇಷನ್ ಸಿಂಧೂರದಲ್ಲಿ ಪಾಕ್‌ನ 9 ಭಯೋತ್ಪಾದಕ ತಾಣಗಳ ಮೇಲೆ ದಾಳಿ ನಡೆಸಲಾಗಿತ್ತು. ಇದಾದ ಬಳಿಕ ಪಾಕ್ ನಿಯಂತ್ರಣ ರೇಖೆ, ಜಮ್ಮು ಮತ್ತು ಕಾಶ್ಮೀರದಾದ್ಯಂತ ಅಪ್ರಚೋದಿತ ಶೆಲ್ ದಾಳಿ ನಡೆಸಿತು. ಬಳಿಕ ಮೇ 10ರಂದು, ಭಾರತ ಮತ್ತು ಪಾಕಿಸ್ತಾನ ಕದನ ವಿರಾಮ ಘೋಷಿಸಿದ್ದು, ಇದಾದ ಬಳಿಕ ಈ ಬೆಳವಣಿಗೆ ನಡೆದಿದೆ.

# ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರದಿಂದ ನಯಾಪೈಸೆಯೂ ಬಂದಿಲ್ಲ: ಸಿಎಂ ಕಿಡಿ

**ರಾಜ್ಯದ ಸಂಸದರು, ರಾಜ್ಯ ಸಭಾ ಸದಸ್ಯರು ಜವಾಬ್ದಾರಿಯಿಂದ ತಪ್ಪಿಸಿಕೊಳ್ಳಬಾರದು: ಸಿಎಂ**

**ಕೇಂದ್ರದ ಯೋಜನೆಗಳಿಗೆ ಕೇಂದ್ರದಿಂದ ಬಾರದ ಹಣ: ಸಭೆಯಲ್ಲಿ ಸಿಎಂ ಅಸಮಾಧಾನ**

ಬೆಂಗಳೂರು ಮೇ 14: ಕೇಂದ್ರ ಸರ್ಕಾರದಿಂದ ಬರಬೇಕಾದ ಪಿಂಚಣಿ ಎರಡು ವರ್ಷದಿಂದ ರಾಜ್ಯಕ್ಕೆ ಕೊಟ್ಟಿಲ್ಲ. ಕೇಂದ್ರ ಪುರಸ್ಕೃತ ಯೋಜನೆಗಳಿಗೆ ಕೇಂದ್ರದಿಂದ ಹಣ ಬಾರದೇ ಇರುವುದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಸಮಾಧಾನ ವ್ಯಕ್ತಪಡಿಸಿದರು.

ವಿಧಾನಸೌಧದ ಸಮ್ಮೇಳನಾ ಕೊಠಡಿಯಲ್ಲಿ ತಮ್ಮ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ಮಟ್ಟದ ದಿಶಾ ಸಮಿತಿ ಸಭೆಯಲ್ಲಿ ಮಾತನಾಡಿ, ರಾಜ್ಯ ಸರ್ಕಾರವೇ ಬಹುತೇಕ ಹಣ ಕೊಡುವ ಯೋಜನೆಗಳಿಗೆ ಪ್ರಧಾನಿ ಮತ್ತು ಕೇಂದ್ರದ ಹೆಸರಿದೆ. ಆದರೂ ಚೂರು, ಪಾರು ಶೇ. ಕೇಂದ್ರದ ಹಣವೂ ಬರುತ್ತಿಲ್ಲ. ಈ ನಿರಂತರ ಅನ್ಯಾಯ ಪ್ರಶ್ನಿಸಬೇಕಲ್ಲವಾ ನೀವು ಎಂದರು. ಕೇಂದ್ರ ಸರ್ಕಾರಕ್ಕೆ , ಕೇಂದ್ರದ ಮಂತ್ರಿಗಳಿಗೆ ಮತ್ತು ಪ್ರಧಾನ ಮಂತ್ರಿಯವರಿಗೆ ರಾಜ್ಯ ಸರ್ಕಾರದಿಂದ ಮೇಲಿಂದ ಮೇಲೆ ಬರೆದ ಪತ್ರಗಳ ಮಾಹಿತಿ ನೀಡಿದ ಸಿಎಂ , ಪತ್ರವನ್ನು ಸಭೆಯಲ್ಲಿ ಓದಿ ಸಂಸದರ ಗಮನ ಸೆಳೆದರು.

15ನೇ ಹಣಕಾಸು ಆಯೋಗದಲ್ಲಿ 5495 ಕೋಟಿ ರೂಪಾಯಿ ವಿಶೇಷ ಅನುದಾನ ಕೊಡಬೇಕು, ಕೆರೆ ಮತ್ತು ಪೆರಿಫೆರಲ್ ರಿಂಗ್ ರಸ್ತೆಗೆ ಕೊಡಬೇಕಾದ ಹಣ ಸೇರಿ ಒಟ್ಟು 11495 ಕೋಟಿ ರೂಪಾಯಿ ಕೇಂದ್ರದಿಂದ ಬರಬೇಕಿತ್ತು. ಏನನ್ನೂ ಕೊಡ್ತಾ ಇಲ್ಲ.

ನಾವು ರಾಜ್ಯದಿಂದ 4.5 ಲಕ್ಷ ಕೋಟಿ ತೆರಿಗೆ ಕೊಟ್ಟರೂ ರಾಜ್ಯಕ್ಕೆ ಸಣ್ಣ ನೆರವೂ ಕೇಂದ್ರದಿಂದ ಬರುವುದಿಲ್ಲ, ಕೇಂದ್ರ ಪುರಸ್ಕೃತ ಯೋಜನೆಗಳಿಗೂ ಹಣ ಕೊಡುವುದಿಲ್ಲ, ಆದರೆ ಅಭಿವೃದ್ಧಿಗೆ ರಾಜ್ಯ ಸರ್ಕಾರದ ಬಳಿ ಹಣ ಇಲ್ಲ ಅಂತ ನೀವೇ ಹೊರಗೆ ಆರೋಪ ಮಾತಾಡ್ತೀರಿ ಎಂದು ಸಿಎಂ ಟೀಕಿಸಿದರು.



ಕೇಂದ್ರ ವಲಯ ಮತ್ತು ಕೇಂದ್ರ ಪುರಸ್ಕೃತ ಯೋಜನೆಗಳ ಪರಿಶೀಲನೆಗಾಗಿ ರಾಜ್ಯಮಟ್ಟದ ದಿಶಾ ಸಮಿತಿ ಸಭೆಯನ್ನು ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಬುಧವಾರ ನಡೆಸಲಾಯಿತು.

ನಾನೇ ಎರಡು ಬಾರಿ ಭೇಟಿ ನಿರ್ಮಲಾ ಸೀತಾರಾಮನ್ ಅವರಿಗೆ ಭೇಟಿ ಮಾಡಿ ಮನವಿ ಮಾಡಿದರೂ ಕೊಡಲಿಲ್ಲ. ರಾಜ್ಯದ ಸಂಸದರು ಒಟ್ಟಾಗಿ ಇದನ್ನು ಕೊಡಿಸಲು ಯತ್ನಿಸಬೇಕು. ಇಷ್ಟು ದಿನಗಳೊಳಗೆ ನೀವು ಕೊಡಿಸಬೇಕಿತ್ತು. ಜವಾಬ್ದಾರಿಯಿಂದ ತಪ್ಪಿಸಿಕೊಳ್ಳಲು ಪ್ರಯತ್ನಿಸಬೇಡಿ ಎಂದು ಸಿಎಂ ತಿಳಿಸಿದರು.

ರಾಜ್ಯ ಸರ್ಕಾರ ನಿರಂತರವಾಗಿ ಒಟ್ಟು 5665 ಕೋಟಿ ಪಿಂಚಣಿ ಕೊಡುತ್ತಲೇ ಬರುತ್ತದೆ. ಆದರೆ, 559 ಕೋಟಿ ಮಾತ್ರ ಕೇಂದ್ರ ಸರ್ಕಾರ ಕೊಡುತ್ತದೆ. ಈ ಸಣ್ಣ ಮೊತ್ತವನ್ನೂ ಕೇಂದ್ರ ಸರ್ಕಾರಕ್ಕೆ ಕೊಡಲು ಸಾಧ್ಯವಾಗುತ್ತಿಲ್ಲ. ಇದನ್ನೂ ಎರಡು ವರ್ಷಗಳಿಂದ ಬಾಕಿ ಉಳಿಸಿಕೊಂಡಿದೆ ಕೇಂದ್ರ. ಇದು ಏಕೆ ಎಂದು ಪ್ರಶ್ನಿಸಿದರು.

# ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಜೊತೆ ಇವಿ ಕ್ಷೇತ್ರದ ಖಾಸಗಿ ಪಾಲುದಾರರ ಭೇಟಿ

**ವೇಗವರ್ಧಿತ ಎಲೆಕ್ಟ್ರಿಕ್ ವಾಹನ ಪರಿವರ್ತನೆಗೆ ಕೇಂದ್ರ ಸರಕಾರ ಬದ್ಧ**

**ಭಾರತ ಜಾಗತಿಕ ಇವಿ ಹಬ್ ಆಗಿ ಪರಿವರ್ತನೆ; ಕೇಂದ್ರ ಸಚಿರ ಎಚ್.ಡಿ.ಕೆ.**




ನವದೆಹಲಿ, ಮೇ 14: ರಾಷ್ಟ್ರದ ಭೂಸಾರಿಗೆ ವಲಯದಲ್ಲಿ ವಾಯು ಮಾಲಿನ್ಯವನ್ನು ಗಣನೀಯವಾಗಿ ತಗ್ಗಿಸಿ ವಿದ್ಯುತ್ ಚಾಲಿತ ವಾಹನಗಳನ್ನು ಹೆಚ್ಚು ಉತ್ತೇಜಿಸುವ ನೀತಿ ಕುರಿತಂತೆ ಚರ್ಚಿಸಲು ಕೇಂದ್ರದ ಬೃಹತ್ ಕೈಗಾರಿಕೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಇವಿ ಕ್ಷೇತ್ರದ ಖಾಸಗಿ ಪಾಲುದಾರರು ಭೇಟಿ ಮಾಡಿ ಮಹತ್ವದ ಮಾತುಕತೆ ನಡೆಸಿದರು.

ಭಾರತದಲ್ಲಿ ಸ್ವಚ್ಛ, ಮಾಲಿನ್ಯರಹಿತ ಚಲನಶೀಲತೆಯ ಪರಿವರ್ತನೆಯನ್ನು ವೇಗಗೊಳಿಸುವುದು ಮತ್ತು ವಿದ್ಯುತ್ ಚಾಲಿತ ವಾಹನ (ಇವಿ) ಅಳವಡಿಕೆಯನ್ನು ಹೆಚ್ಚಿಸುವ ಬಗ್ಗೆ ಭಾರತದ ಆಟೋಮೋಟಿವ್ ವಲಯದ ಪ್ರಮುಖರು ಸಚಿವಾಲಯದ ಕಚೇರಿಯಲ್ಲಿ ಸಚಿವರನ್ನು ಭೇಟಿಯಾಗಿ ಸಮಾಲೋಚನೆ ನಡೆಸಿದರು.

ಭಾರತದಲ್ಲಿ ವೇಗವಾಗಿ ಬೆಳೆಯುತ್ತಿರುವ ವಿದ್ಯುತ್ ಚಾಲಿತ ವಾಹನ ಕ್ಷೇತ್ರಕ್ಕೆ ಇನ್ನೂ ಹೆಚ್ಚಿನ ಶಕ್ತಿ ತುಂಬುವುದು. ಇಂಥ ವಾಹನಗಳನ್ನು ಹೆಚ್ಚು ಬಳಕೆ ಮಾಡುವುದು, ಮಾಲಿನ್ಯಮುಕ್ತ ಪ್ರಚಾರಕ್ಕಾಗಿ ವ್ಯೂಹಾತ್ಮಕ ಕಾರ್ಯತಂತ್ರಗಳು ಹಾಗೂ ಸ್ಥಳೀಯ ಉತ್ಪಾದನಾ ವ್ಯವಸ್ಥೆಯನ್ನು ಬಲಪಡಿಸುವ ಮಾರ್ಗೋಪಾಯಗಳ ಕುರಿತು ಸಚಿವರು ಉದ್ಯಮ ಪ್ರತಿನಿಧಿಗಳು ಸಚಿವರ ಗಮನ ಸೆಳೆದರು.

ಸ್ವಚ್ಛ ಚಲನಶೀಲತೆ ಇವತ್ತಿನ ತುರ್ತು ಅಗತ್ಯ. ನಗರ ಪ್ರದೇಶಗಳಲ್ಲಿ ಮೂಲಸೌಕರ್ಯ ವನ್ನು ಎಲೆಕ್ಟ್ರಿಕ್ ವಾಹನ ಕ್ಷೇತ್ರಕ್ಕೆ ಅನುಗುಣ ವಾಗಿ ಪರಿವರ್ತಿಸುವುದು ಮತ್ತು ಇಂಗಾಲ ಹೊರಸೂಸುವಿಕೆಯನ್ನು ಕಡಿಮೆ ಮಾಡುವಲ್ಲಿ ಕ್ಷಿಪ್ರಗತಿಯ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ. 5 ಟ್ರಿಲಿಯನ್ ಡಾಲರ್ ಆರ್ಥಿಕತೆಯ ಗುರಿಯನ್ನು ಮುಟ್ಟಲು ಆಟೋಮೊಬೈಲ್ ಕ್ಷೇತ್ರವನ್ನು ಮಾಲಿನ್ಯಮುಕ್ತ, ಸ್ವಾವಲಂಭಿ ಕ್ಷೇತ್ರವನ್ನಾಗಿ ರೂಪಿಸುವುದು ಪ್ರಧಾನಿ ನರೇಂದ್ರ ಮೋದಿಯವರ ಕನಸು.

ಈ ನಿಟ್ಟಿನಲ್ಲಿ ಉದ್ಯಮದ ಖಾಸಗಿ ಪಾಲುದಾರರು ನಿರ್ಣಾಯಕ ಹೆಜ್ಜೆಗಳನ್ನು ಇಡಬೇಕಾಗುತ್ತದೆ ಎಂಬ ಅಂಶವನ್ನು ಸಚಿವ ಕುಮಾರಸ್ವಾಮಿ ಅವರು ಒತ್ತಿ ಹೇಳಿದರು.

ಇಂಗಾಲದ ಶೂನ್ಯ ಹೊರಸೂಸುವಿಕೆ ಗುರಿ ಸಾಧಿಸುವ ಹಿನ್ನೆಲೆಯಲ್ಲಿ ಮೇಕ್ ಇನ್ ಇಂಡಿಯಾ ಮತ್ತು ಆತ್ಮನಿರ್ಭರ ಭಾರತ್ ಕಾರ್ಯಕ್ರಮಗಳ ಅಡಿಯಲ್ಲಿ ವೇಗವಾಗಿ ಕೆಲಸ ಮಾಡುವ ಬದ್ಧತೆಯನ್ನು ಬೃಹತ್ ಕೈಗಾರಿಕೆ ಸಚಿವಾಲಯ ಹೊಂದಿದೆ ಎಂದು ತಿಳಿಸಿದ ಸಚಿವರು; ಜಾಗತಿಕ ಸ್ಪರ್ಧಾತ್ಮಕತೆಗೆ ತಕ್ಕಂತೆ ಸ್ಥಳೀಯ ಇವಿ ಕ್ಷೇತ್ರದ ಅಗತ್ಯಗಳನ್ನು ಪೂರೈಸುವ ರೀತಿಯಲ್ಲಿ ವಿದ್ಯುತ್ ಚಾಲಿತ ವಾಹನ ತಯಾರಿಕೆಗೆ ಅನುಕೂಲವಾಗುವ ಪೂರಕ ವ್ಯವಸ್ಥೆಯನ್ನು ಒದಗಿಸುವ ದಿಕ್ಕಿನಲ್ಲಿಯೇ ಕೇಂದ್ರವು ತನ್ನೆಲ್ಲಾ ನೀತಿಗಳನ್ನು ರೂಪಿಸಿದೆ ಎಂದರು.

ಇದೇ ವೇಳೆ FAME I & II, ಆಟೋ PLI, ACC PLI, ಮತ್ತು PM ಇ–ಡ್ರೈವ್‌ನಂತಹ ಯೋಜನೆಗಳ ಅಡಿಯಲ್ಲಿ ಸಾಧಿಸಲಾದ ಪ್ರಗತಿಯನ್ನು ಖಾಸಗಿ ಪಾಲುದಾರರು ಶ್ಲಾಘಿಸಿದರು. ಈ ಉಪಕ್ರಮಗಳು ಭಾರತವು ಜಾಗತಿಕ ಮಟ್ಟದ ವಿದ್ಯುತ್ ಚಾಲಿತ ವಾಹನ ಉತ್ಪಾದನೆ ಮತ್ತು ನಾವೀನ್ಯತಾ ಕೇಂದ್ರವಾಗಿ ಹೊರಹೊಮ್ಮಲು ಬಲವಾದ ಅಡಿಪಾಯವನ್ನು ಹಾಕಿವೆ ಎಂದು ಅಭಿಪ್ರಾಯಪಟ್ಟರು. ಅಲ್ಲದೆ, ಖಾಸಗಿ ಪಾಲುದಾರರ ಸಲಹೆಗಳನ್ನು ಆಲಿಸಿದ ಸಚಿವರು, ಅವುಗಳನ್ನು ಅಳವಡಿಸಿಕೊಳ್ಳುವ ಬಗ್ಗೆ ವಿಸ್ತೃತ ಚರ್ಚೆ ನಡೆಸಲಾಗುವುದು ಎಂದರು.

# 27 ಕೋಟಿ ವೆಚ್ಚದ ನವಲಗುಂದ ಬೈಪಾಸ್ ರಸ್ತೆಗೆ ಕೇಂದ್ರ ಅಸ್ತು



* 10.575 ಕಿ.ಮೀ. ರಸ್ತೆ ನಿರ್ಮಾಣಕ್ಕೆ ಕೇಂದ್ರದಿಂದ ಅನುಮೋದನೆ
* ಕಾಮಗಾರಿಗೆ ಶೀಘ್ರ ಟೆಂಡರ್ ಪ್ರತಿಕ್ರಿಯೆ: ಸಚಿವ ಪ್ರಲ್ಹಾದ ಜೋಶಿ

ನವದೆಹಲಿ, ಮೇ 14: ಸವದತ್ತಿ ಯಲ್ಲಮ್ಮನಗುಡ್ಡ ಸೇರಿದಂತೆ ವಿವಿಧ ಸುಕ್ಷೇತ್ರಗಳಿಗೆ ಸಂಪರ್ಕ ಕಲ್ಪಿಸುವ ನವಲಗುಂದ ಬೈಪಾಸ್ ರಸ್ತೆ 327 ಕೋಟಿ ವೆಚ್ಚದ ಕಾಮಗಾರಿಗೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ ಎಂದು ಕೇಂದ್ರ ಆಹಾರ ಮತ್ತು ನಾಗರೀಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ.

ನವಲಗುಂದ ಬೈಪಾಸ್ ರಸ್ತೆ ನಿರ್ಮಾಣಕ್ಕಾಗಿ ಈ ಹಿಂದೆಯೇ ಕೇಂದ್ರ ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರಿಗೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಅದರಂತೆ ಇದೀಗ ಕಾಮಗಾರಿಗೆ ಅನುಮೋದನೆ ದೊರಕಿದೆ. ರಾಜ್ಯ ಸರ್ಕಾರ ಟೆಂಡರ್ ಕರೆದು ಕಾರ್ಯಾರಂಭ ಮಾಡುವ ಹಂತ ತಲುಪಿದೆ ಎಂದು ತಿಳಿಸಿದ್ದಾರೆ.

ಈ ಬೈಪಾಸ್ ಸಂಬಂಧ ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಸಚಿವಾಲಯಕ್ಕೆ ಸಲ್ಲಿಸಿದ್ದ ಜೋಡಣೆ (alignment) ಮತ್ತು ಆಕಖ (ವಿವರವಾದ ಯೋಜನಾ ವರದಿ) ಅನ್ನು ಅಲೈನ್‌ಮೆಂಟ್ ಅಪ್ರೂವಲ್ ಕಮಿಟಿ (Alignment Approval Committee (AAC) ಅನುಮೋದನೆ ನೀಡಿದೆ. ನವಲಗುಂದ ಪಟ್ಟಣಕ್ಕೆ 10.575 ಕಿ.ಮೀ. ವಿಸ್ತೀರ್ಣದ ಬೈಪಾಸ್ ರಸ್ತೆ ನಿರ್ಮಾಣವಾಗಲಿದೆ ಎಂದು ಹೇಳಿದ್ದಾರೆ.

ಬೆಣ್ಣೆಹಳ್ಳ ಮತ್ತು ಅದನ್ನು ಸೇರುವ ಸಣ್ಣ ನಾಲಾಗಳು ಮಳೆಗಾಲದಲ್ಲಿ ತುಂಬಿ ಹರಿದು ಪ್ರವಾಹ ಪರಿಸ್ಥಿತಿ ಎದುರಾಗುತ್ತಿತ್ತು. ಇದರಿಂದ ಅಪಾರ ಕೃಷಿ ಭೂಮಿಯಲ್ಲಿ ಬೆಳೆ ಹಾನಿ ಸಂಭವಿಸುತ್ತಿತ್ತು ಮತ್ತು ಅನೇಕ ಕಡೆ ಸಂಪರ್ಕ ಕಡಿತಗೊಳ್ಳುತ್ತಿತ್ತು. ಇದನ್ನೆಲ್ಲ ಗಮನಿಸಿ ಶಾಶ್ವತ ಪರಿಹಾರ ಎನ್ನುವಂತೆ ಬೈಪಾಸ್ ರಸ್ತೆ ನಿರ್ಮಾಣಕ್ಕೆ ಕೇಂದ್ರ ಸರ್ಕಾರದ ಮಟ್ಟದಲ್ಲಿ ನಡೆಸಿದ ಪ್ರಯತ್ನಕ್ಕೆ ಇದೀಗ ಫಲ ಸಿಕ್ಕಿದೆ. ಅಲೈನ್‌ಮೆಂಟ್ ಅಪ್ರೂವಲ್ ಕಮಿಟಿ ಅನುಮತಿ ನೀಡಿದೆ ಎಂದು ಸಚಿವ ಜೋಶಿ ತಿಳಿಸಿದ್ದಾರೆ.

ಹೆದ್ದಾರಿಯು ನವಲಗುಂದ ಪಟ್ಟಣದ ಮಧ್ಯ ಭಾಗದಿಂದ ಹಾದು ಹೋಗುವ ಕಾರಣ ಟ್ರಾಫಿಕ್ ಸಮಸ್ಯೆಗಳಿಂದಾಗಿ ಪಟ್ಟಣಿಗರು ರೋಸಿ ಹೋಗಿದ್ದರು. ಹೀಗಾಗಿ ಬೈಪಾಸ್ ರಸ್ತೆ ನಿರ್ಮಾಣಕ್ಕೆ ಬಹು ವರ್ಷಗಳಿಂದಲೂ ಇದ್ದ ಬೇಡಿಕೆಗೆ ಪ್ರಧಾನಿ ನರೇಂದ್ರ ಮೋದಿ ಅವರ ಮಾರ್ಗದರ್ಶನದಂತೆ ಹೆದ್ದಾರಿ ಸಚಿವ ನಿತಿನ ಗಡ್ಕರಿ ಅವರು ಸ್ಪಂದಿಸಿದ್ದಾರೆ. ಈ ಮೂಲಕ ಜನರ ಆಶಯ ಸಾಕಾರಗೊಂಡಿದೆ ಎಂದು ಸಚಿವರು ಸಂತಸ ವ್ಯಕ್ತಪಡಿಸಿದ್ದಾರೆ.

ಉತ್ತರ ಕರ್ನಾಟಕದ ಆರಾಧ್ಯ ದೈವ ಸವದತ್ತಿ ಯಲ್ಲಮ್ಮ ದೇವಸ್ಥಾನ ಸೇರಿದಂತೆ ವಿವಿಧ ಐತಿಹಾಸಿಕ, ಧಾರ್ಮಿಕ ನಗರಗಳಿಗೆ ಸಂಪರ್ಕ ಜೋಡಿಸುತ್ತದೆ ನವಲಗುಂದ ಪಟ್ಟಣ. ಹೀಗಾಗಿ ಈ ಮೂಲಕ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಚಾರ ದಟ್ಟಣೆ ಅಧಿಕವಾಗಿರುತ್ತದೆ. ಬೈಪಾಸ್ ರಸ್ತೆ ನಿರ್ಮಾಣದಿಂದ ಪ್ರಯಾಣಿಕರು ಮತ್ತು ಸ್ಥಳೀಯ ನಿವಾಸಿಗಳಿಗೂ ಅನುಕೂಲವಾಗಲಿದೆ ಎಂದಿದ್ದಾರೆ.

ಕಳೆದ 10 ವರ್ಷಗಳ ಅವಧಿಯಲ್ಲಿ ಧಾರವಾಡ ಲೋಕಸಭಾ ಕ್ಷೇತ್ರದ ಸಂಪೂರ್ಣ ಚಿತ್ರಣವೇ ಬದಲಾಗಿದೆ. ಆ ಮಟ್ಟದ ಅಭಿವೃದ್ಧಿ ಕಾರ್ಯಗಳನ್ನು ನಡೆಸಲಾಗಿದೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರು ಹೆದ್ದಾರಿಗಳ ಅಭಿವೃದ್ಧಿಗೆ ಸದಾ ಅಗತ್ಯ ನೆರವು ನೀಡುತ್ತಿದ್ದಾರೆಂದು ಈರ್ವರಿಗೂ ಜೋಶಿ ಅಭಿನಂದನೆ ಸಲ್ಲಿಸಿದ್ದಾರೆ.

ಶೀಘ್ರ ಕಾಮಗಾರಿಗೆ ಒತ್ತಾಯ: ನವಲಗುಂದ ಬೈಪಾಸ್ ನಿರ್ಮಾಣ ಸಂಬಂಧ ಈಗಾಗಲೇ ಡಿಪಿಆರ್ ಸಿದ್ಧಗೊಂಡಿದ್ದು, ರಾಜ್ಯ ಸರ್ಕಾರ ಶೀಘ್ರವೇ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಿ ಕಾಮಗಾರಿಗಳಿಗೆ ತ್ವರಿತ ಚಾಲನೆ ನೀಡಬೇಕೆಂದು ಸಚಿವ ಪ್ರಲ್ಹಾದ ಜೋಶಿ ಒತ್ತಾಯಿಸಿದ್ದಾರೆ.

ಹುಬ್ಬಳ್ಳಿ–ಕುಷ್ಟಗಿ ನೂತನ ಎಕ್ಸ್‌ಪ್ರೆಸ್ ರೈಲ್ವೆಗೆ ಅನುಮೋದನೆ: ಹುಬ್ಬಳ್ಳಿ–ಕುಷ್ಟಗಿ ಮಧ್ಯೆ ನೂತನ ಎಕ್ಸ್‌ಪ್ರೆಸ್ ರೈಲ್ವೆ ಸಂಚಾರಕ್ಕೆ ಕೇಂದ್ರ ರೈಲ್ವೆ ಇಲಾಖೆ ಅನುಮೋದನೆ ನೀಡಿದೆ. ಈ ಹಿಂದೆಯೇ ಪ್ರಧಾನಿ ನರೇಂದ್ರ ಮೋದಿ ಮತ್ತು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರಲ್ಲಿ ಮನವಿ ಮಾಡಿದ್ದೆ. ಇದೀಗ ಸ್ಪಂದಿಸಿದ್ದಾರೆ ಎಂದು ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ.

ನಾಳೆ(ಮೇ 15) ಬೆಳಗ್ಗೆ 10.30ಕ್ಕೆ ಕೇಂದ್ರ ರೈಲ್ವೆ ರಾಜ್ಯ ಖಾತೆ ಸಚಿವ ವಿ. ಸೋಮಣ್ಣ ಅವರು ಕುಷ್ಟಗಿಯಿಂದ ಹುಬ್ಬಳ್ಳಿಗೆ ಸಂಚರಿಸುವ ನೂತನ ಎಕ್ಸ್‌ಪ್ರೆಸ್ ರೈಲಿಗೆ ಚಾಲನೆ ನೀಡಲಿದ್ದಾರೆ. ಹುಬ್ಬಳ್ಳಿ–ಕುಷ್ಟಗಿ ಎಕ್ಸ್‌ಪ್ರೆಸ್ ರೈಲು ಪ್ರತಿನಿತ್ಯ ಸಂಚರಿಸಲಿದೆ ಎಂದಿದ್ದಾರೆ

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,A/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363



ಕರ್ನಾಟಕ ಸರ್ಕಾರ



**ಶ್ರೀ ಸಿದ್ದರಾಮಯ್ಯ**
ಸನ್ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ

**ಶ್ರೀ ಡಿ.ಕೆ. ಶಿವಕುಮಾರ್**
ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ
ಬೆಂಗಳೂರು ನಗರಾಭಿವೃದ್ಧಿ ಸಚಿವರು
ಕರ್ನಾಟಕ ಸರ್ಕಾರ

# ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ-2024 ಅನುಷ್ಠಾನ

ದಿನಾಂಕ: 15.05.2025, ಗುರುವಾರ

## ಬೆಂಗಳೂರಿನ ಸಮಗ್ರ ಅಭಿವೃದ್ಧಿಗಾಗಿ

# ಕ್ರಾಂತಿಕಾರಿ ಹೆಜ್ಜೆ



- ಗ್ರೇಟರ್ ಬೆಂಗಳೂರು ಪ್ರದೇಶದಲ್ಲಿ ಪರಿಣಾಮಕಾರಿಯಾದ ಸಮನ್ವಯ, ಸಹಭಾಗಿತ್ವ ಮತ್ತು ಸ್ಪಂದನಶೀಲ ಆಡಳಿತ
- ನಗರ ಪ್ರದೇಶಗಳ ಸಮಗ್ರ ಅಭಿವೃದ್ಧಿಗಾಗಿ ಎಲ್ಲಾ ಸಾರ್ವಜನಿಕ ಸೇವಾ ಸಂಸ್ಥೆಗಳನ್ನು ಸಂಯೋಜಿಸುವ ಆಡಳಿತ ವ್ಯವಸ್ಥೆ
- ಗ್ರೇಟರ್ ಬೆಂಗಳೂರು ಪ್ರದೇಶವನ್ನು ಯೋಜನಾಬದ್ಧವಾಗಿ ರೂಪಿಸುವ ಉದ್ದೇಶ
- ಆಡಳಿತ ವ್ಯವಸ್ಥೆಯನ್ನು ಮತ್ತಷ್ಟು ವಿಕೇಂದ್ರೀಕರಣಗೊಳಿಸಿ ನಾಗರಿಕರ ಪಾಲ್ಗೊಳ್ಳುವಿಕೆ ಹೆಚ್ಚಿಸುವುದು
- ನಗರದ ಗುಣಮಟ್ಟ ವೃದ್ಧಿಸಿ, ಹೂಡಿಕೆಯನ್ನು ಆಕರ್ಷಿಸುವುದು ಮತ್ತು ಉದ್ಯೋಗಾವಕಾಶ ಸೃಷ್ಟಿಸುವುದು

ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು ಪ್ರತಿಯೊಬ್ಬ ಭಾರತೀಯರ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

ಪ್ರಕಟಣೆ: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ನಿತ್ಯ ಪಂಚಾಂಗ 15.05.2025 ಗುರುವಾರ



ಶ್ರೀ ವಿಶ್ವಾವಸು ನಾಮ ಸಂವತ್ಸರ, ಉತ್ತರಾಯಣ ವಸಂತ ಋತು ಚಾಂದ್ರಮಾನ, ವೈಶಾಖ ಬಹುಳ ತದಿಗೆ, ಜ್ಯೇಷ್ಠ ನಕ್ಷತ್ರ, ಸ್ನಾನದ್ಯಯನ, ಹಟ್ಟಯಂಗಡಿ ವರ್ಧಂತಿ, ಮೂಡಬಿದ್ರೆ ವೀರಮಾರುತಿ ಜಯಂತಿ, ಅಂತರರಾಷ್ಟ್ರೀಯ ಕುಟುಂಬ ದಿನ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 –12.00 | 1.30 – 3.00 |
| ಮಂಗಳ | 3.00 – 4.30 | 9.00 –10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 –12.00 |
| ಗುರು | 1.30 – 3.00 | 6.00 – 7.30 | 9.00 –10.30 |
| ಶುಕ್ರ | 10.30 –12.00 | 3.00 – 4.30 | 7.30 – 9.00 |
| ಶನಿ | 9.00 –10.30 | 1.30 – 3.00 | 6.00 – 7.30 |

# ಮುಖ್ಯಮಂತ್ರಿ ಅಧ್ಯಕ್ಷತೆಯಲ್ಲಿ ರಾಜ್ಯಮಟ್ಟದ ದಿಶಾ ಸಮಿತಿ ಸಭೆ

## ಕೇಂದ್ರ ಪುರಸ್ಕೃತ ಯೋಜನೆಗಳಿಗೆ ಬಾಕಿಯಿರುವ ಕೇಂದ್ರದ ಪಾಲು ಬಿಡುಗಡೆಯಾಗಿಲ್ಲ

**ರಾಜ್ಯದ ಸಂಸದರು, ರಾಜ್ಯಸಭಾ ಸದಸ್ಯರು ಕೇಂದ್ರದ ಅನುದಾನ ತರಲು ಪ್ರಯತ್ನಿಸಲಿ– ಮುಖ್ಯಮಂತ್ರಿ ಸಿದ್ದರಾಮಯ್ಯ**



**ಬೆಂಗಳೂರು, ಮೇ 14:** ಕೇಂದ್ರ ಪುರಸ್ಕೃತ ಯೋಜನೆಗಳಿಗೆ ಬಾಕಿಯಿರುವ ಸುಮಾರು 4195 ಕೋಟಿ ರೂ. ಗಳ ಕೇಂದ್ರದ ಪಾಲು ಬಿಡುಗಡೆಯಾಗಿಲ್ಲ. ಈ ದಿಸೆಯಲ್ಲಿ ರಾಜ್ಯದ ಸಂಸದರು, ರಾಜ್ಯಸಭಾ ಸದಸ್ಯರು ಕೇಂದ್ರವನ್ನು ಒತ್ತಾಯಿಸಿ ಬಾಕಿ ಅನುದಾನವನ್ನು ತರಲು ಪ್ರಯತ್ನಿಸಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ವಿಧಾನಸೌಧದಲ್ಲಿ ಮಾಧ್ಯಮದವರೊಂದಿಗೆ ತಿಳಿಸಿದರು. ಕೇಂದ್ರ ಪುರಸ್ಕೃತ ಯೋಜನೆಗಳಿಗೆ ಬಾಕಿಯಿರುವ ಅನುದಾನವನ್ನು ಒದಗಿಸುವಂತೆ ಪ್ರಧಾನಮಂತ್ರಿಯವರನ್ನು, ಕೇಂದ್ರ ವಿತ್ತಸಚಿವರನ್ನೂ ಈಗಾಗಲೇ ಭೇಟಿ ಮಾಡಿ ಮನವಿ ಸಲ್ಲಿಸಿದ್ದರ ಬಗ್ಗೆ ಮುಖ್ಯಮಂತ್ರಿಗಳು ವಿವರಿಸಿದರು. ಕೇಂದ್ರ ಪುರಸ್ಕೃತ ಯೋಜನೆಗಳ ಪ್ರಗತಿ ಪರಿಶೀಲಿಸಲು ರಚಿಸಲಾದ ಮುಖ್ಯಮಂತ್ರಿಗಳ ಅಧ್ಯಕ್ಷತೆಯ ರಾಜ್ಯ ಮಟ್ಟದ ದಿಶಾ ಸಮಿತಿ ಸಭೆಯನ್ನು ಇಂದು ನಡೆಸಲಾಗಿದೆ. ಸುಮಾರು 67 ಕೇಂದ್ರ ಪುರಸ್ಕೃತ ಯೋಜನೆಗಳಿದ್ದು, ಅವುಗಳ ಪ್ರಗತಿಪರಿಶೀಲನೆ ನಡೆಸಲಾಗಿದೆ. ಕೇಂದ್ರ ಪುರಸ್ಕೃತ ಯೋಜನೆಗಳಲ್ಲಿ ಕೇಂದ್ರ ಹಾಗೂ ರಾಜ್ಯದ ಪಾಲು 50:50, 60:40, 70:30 ರಷ್ಟಿರುತ್ತದೆ.

ಕರ್ನಾಟಕದಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳಿಗೆ 46859 ಕೋಟಿ ಖರ್ಚು ಮಾಡಲಾಗುತ್ತಿದೆ. 2024–25ರ ಸಾಲಿನಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳಡಿ ರಾಜ್ಯದ ಅನುದಾನ 24960 ಕೋಟಿ ರೂಪಾಯಿಗಳು, ಕೇಂದ್ರದ ಅನುದಾನ 22758ಕೋಟಿ ರೂಪಾಯಿಗಳಿದ್ದು ಕೇಂದ್ರದಿಂದ 18561ಕೋಟಿ ಮಾತ್ರ ಬಿಡುಗಡೆ ಆಗಿದೆ 4195 ಕೋಟಿ ರೂಪಾಯಿಗಳು ಬಿಡುಗಡೆ ಆಗಿರುವುದಿಲ್ಲ ಎಂದರು.

**ಬಾಕಿ ಅನುದಾನ ಬಿಡುಗಡೆಗೆ ಕೇಂದ್ರಕ್ಕೆ ಪತ್ರ:**

ಅಭಿವೃದ್ಧಿ ಯೋಜನೆಗಳಿಗೆ ಸೂಕ್ತ ಅನುದಾನ ನೀಡದೇ, ಕೇಂದ್ರ ಸರ್ಕಾರ ದ್ವೇಷದ ರಾಜಕಾರಣವನ್ನು ಮಾಡುತ್ತಿದೆಯೇ ಎಂಬ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿ, ಕೇಂದ್ರ ಪುರಸ್ಕೃತ ಯೋಜನೆಗಳಿಗೆ ಕೇಂದ್ರ ತನ್ನ ಪಾಲನ್ನು ನೀಡಲೇಬೇಕು. ಕೇಂದ್ರದ ಪಾಲು ನೀಡಲು ರಾಜ್ಯ ಸರ್ಕಾರ ಪತ್ರ ಬರೆದಿದೆ ಎಂದರು

**ಶೇ.100 ರಷ್ಟು ಪ್ರಗತಿ ಸಾಧಿಸಲು ಅಧಿಕಾರಿಗಳಿಗೆ ಸೂಚನೆ:**

ರಾಜ್ಯದ ಪಾಲು ಹೆಚ್ಚಿರುವ ಕೇಂದ್ರ ಪುರಸ್ಕೃತ ಯೋಜನೆಗಳಡಿ ಶೇ. 83 ರಷ್ಟು ಅನುದಾನ ಖರ್ಚಾಗಿದ್ದು, ಕೇಂದ್ರದಿಂದ ತಡವಾಗಿ ಅನುದಾನ ಬಿಡುಗಡೆಯೂ ಸೇರಿದಂತೆ ಹಲವು ಸಮಸ್ಯೆಗಳನ್ನು ವಿಷಯಗಳನ್ನು ಅಧಿಕಾರಿಗಳು ವಿವರಿಸಿದ್ದಾರೆ. ಆದ್ದರಿಂದ 2025–26 ರ ಸಾಲಿನಿಂದ ಶೇ.100 ರಷ್ಟು ಅನುದಾನವನ್ನು ಖರ್ಚು ಮಾಡಬೇಕಂದು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಈ ನಿಟ್ಟಿನಲ್ಲಿ ನಿಗದಿತ ಸಮಯದಲ್ಲಿ ಅನುದಾನ ಬಿಡುಗಡೆ ಮಾಡಲು ಕೇಂದ್ರವನ್ನು ಕೋರುವಂತೆ ಅಧಿಕಾರಿಗಳು ಹಾಗೂ ಸಮಿತಿಯ ಸದಸ್ಯರಿಗೂ ಸೂಚಿಸಲಾಗಿದೆ ಎಂದರು.

* ಕೇಂದ್ರದಿಂದ ಇನ್ನೂ ನರೇಗಾ ಹಣ ಬಾರದ ಅಂಕಿ ಅಂಶಗಳನ್ನು ಅಧಿಕಾರಿಗಳು ಸಭೆಯ ಗಮನಕ್ಕೆ ತಂದರು
* ಜಿಲ್ಲಾ ಮಟ್ಟದಲ್ಲಿ ದಿಶಾ ಸಭೆಗಳು ನಿಗಧಿತವಾಗಿ ನಡೆಯಬೇಕು ಎಂದು ಸೂಚನೆ ನೀಡಿದ ಮುಖ್ಯಮಂತ್ರಿಗಳು ಸಂಸದರೂ ಈ ಬಗ್ಗೆ ಆಸಕ್ತಿ ವಹಿಸಬೇಕು ಎಂದರು.
* ಮೂರು ತಿಂಗಳ ಒಳಗೆ ನರೇಗಾ ಕ್ರಿಯಾ ಯೋಜನೆ ಕಡ್ಡಾಯವಾಗಿ ಸಿದ್ದಪಡಿಸಬೇಕು. ಏನೇ ಕಾರಣದಿಂದ ಹಿಂದಿನ ಕ್ರಿಯಾ ಯೋಜನೆ ಆಗಿದ್ದರೆ ಅದನ್ನು ಮುಂದಿನ ಕ್ರಿಯಾ ಯೋಜನೆಯಲ್ಲಿ ಸೇರ್ಪಡೆಗೊಳಿಸಿ ಎಂದು ಸಿಎಂ ಸೂಚನೆ ನೀಡಿದರು.
* ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರಿನ ಯೋಜನೆಗಾಗಿ ಕೇಂದ್ರದಿಂದ ಬರಬೇಕಾಗಿದ್ದ ಎರಡು ವರ್ಷದ ಪಾಲು 10000 ಬಾಕಿ ಕೋಟಿಯಷ್ಟು ಬಾಕಿ ಉಳಿದಿದೆ. ಹೀಗೆ ಬಾಕಿ ಉಳಿಸಿಕೊಂಡಿರುವುದರಿಂದ ಬಹಳ ಸಮಸ್ಯೆ ಆಗುತ್ತಿದೆ ಎಂದು ಅಧಿಕಾರಿಗಳು ಆತಂಕ ವ್ಯಕ್ತಪಡಿಸಿದರು.
* 23–24 ರ ಸಾಲಿನಲ್ಲಿ 7656 ಕೋಟಿ, 24–25 ರ ಸಾಲಿನಲ್ಲಿ 3233 ಕೋಟಿ ಹಣವನ್ನು ಕೇಂದ್ರ ಜಲಜೀವನ್ ಮಿಷನ್ ಯೋಜನೆಯಲ್ಲಿ ಬಾಕಿ ಉಳಿಸಿಕೊಂಡಿದೆ ಎಂದು ಅಧಿಕಾರಿಗಳು ಅಂಕಿ ಅಂಶ ಮುಂದಿಟ್ಟರು.

# ಶಿರಾ ಸೇರಿ 4 ಕಡೆ ರೈಲ್ವೆ ನಿಲ್ದಾಣ, ಸಚಿವ ವಿ. ಸೋಮಣ್ಣ ಜೊತೆ ಟಿ.ಬಿ.ಜಯಚಂದ್ರ ಮಹತ್ವದ ಸಭೆ



**ಬೆಂಗಳೂರು/ನವದೆಹಲಿ, ಮೇ 14:** ಉದ್ದೇಶಿತ ತುಮಕೂರು–ಚಿತ್ರದುರ್ಗ–ದಾವಣಗೆರೆ ಬ್ರಾಡ್ ಗೇಜ್ ರೈಲ್ವೆ ಮಾರ್ಗದಲ್ಲಿ ತಿಮ್ಮರಾಜನಹಳ್ಳಿಯಿಂದ ತಾವರೆಕೆರೆಯವರೆಗೆ ರೂ 498 ಕೋಟಿ ವೆಚ್ಚದ ಕಾಮಗಾರಿಗೆ ಒಪ್ಪಂದ ಏರ್ಪಟ್ಟಿದ್ದು, ಶಿರಾ ಸೇರಿದಂತೆ ನಾಲ್ಕು ಕಡೆಗಳಲ್ಲಿ ನಿಲ್ದಾಣಗಳು ನಿರ್ಮಾಣವಾಗಲಿವೆ ಎಂದು ದೆಹಲಿಯಲ್ಲಿ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ ಟಿ.ವಿ.ಜಯಚಂದ್ರ ಹೇಳಿದ್ದಾರೆ.

ಒಟ್ಟು 41 ಕಿ.ಮೀ. ಉದ್ದದ ಈ ಕಾಮಗಾರಿಗೆ ಫರೀದಾಬಾದ್ ನ ಮೆಸರ್ಸ್ ಕೆ.ಆರ್.ಸಿ.ಆಲ್ಫಿಸ್ ಜಾಯಿಂಟ್ ವೆಂಚರ್ ಎಂಬ ಏಜೆನ್ಸಿಯೊಂದಿಗೆ ಒಪ್ಪಂದವಾಗಿದ್ದು, ಜೋಗಿಹಳ್ಳಿ, ಚಿಕ್ಕನಹಳ್ಳಿ, ಶಿರಾ ಮತ್ತು ತಾವರೆಕೆರೆಯಲ್ಲಿ ರೈಲ್ವೆ ನಿಲ್ದಾಣಗಳು ನಿರ್ಮಾಣವಾಗಲಿವೆ. ಒಟ್ಟು 11 ದೊಡ್ಡ ಸೇತುವೆಗಳು, 55 ಕಿರುಸೇತುವೆ–ಕಲ್ವರ್ಟ್‌ಗಳು, 35 ಓವರ್ ಬ್ರಿಜ್ ಹಾಗೂ 35 ಅಂಡರ್ ಬ್ರಿಜ್‌ಗಳು ಕಾಮಗಾರಿಯ ಭಾಗವಾಗಿರುತ್ತವೆ ಎಂದು ಜಯಚಂದ್ರ ವಿವರಿಸಿದ್ದಾರೆ.

ಈ ರೈಲು ಮಾರ್ಗವು ಶಿರಾ ವಿಧಾನಸಭಾ ಕ್ಷೇತ್ರದಲ್ಲಿ ಸೀಬಿಯಿಂದ ಆರಂಭವಾಗಿ ಧರ್ಮಪುರದ ಮೂಲಕ 41 ಕಿ.ಮೀ. ಉದ್ದಕ್ಕೆ ಹಾದುಹೋಗುತ್ತದೆ. ಇದರಿಂದ ಶಿರಾ ತಾಲ್ಲೂಕಿನಲ್ಲಿ ಶೇಂಗಾ, ತೆಂಗಿನಕಾಯಿ, ಅಡಿಕೆ, ಹುಣಸೆಹಣ್ಣು, ತರಕಾರಿ ಮತ್ತು ದವಸ ಧಾನ್ಯಗಳನ್ನು ಬೆಳೆಯುವ ರೈತರಿಗೆ ಉತ್ಪನ್ನಗಳ ಸಾಗಣೆ ಹಾಗೂ ವ್ಯಾಪಾರ ವಹಿವಾಟಿಗೆ ಹೆಚ್ಚಿನ ಅನುಕೂಲವಾಗುತ್ತದೆ. ಜೊತೆಗೆ, ಈ ಭಾಗದ ಜನಸಾಮಾನ್ಯರಿಗೆ ದಾವಣಗೆರೆ ಮತ್ತು ಬೆಂಗಳೂರಿಗೆ ಹೋಗುವುದು ಇನ್ನಷ್ಟು ಸುಲಭವಾಗುತ್ತದೆ ಎಂದು ಜಯಚಂದ್ರ ಹೇಳಿದ್ದಾರೆ.

ಈ ಯೋಜನೆಗೆ ಸಂಬಂಧಿಸಿದಂತೆ ಮುಂದಿನ ಎರಡು ವಾರಗಳಲ್ಲಿ ರೈಲ್ವೆ ಖಾತೆ ರಾಜ್ಯ ಸಚಿವರಾದ ವಿ. ಸೋಮಣ್ಣ ಅವರೊಂದಿಗೆ ಶಿರಾದಲ್ಲಿ ತಾವು ಸಭೆ ನಡೆಸುವುದಾಗಿ ತಿಳಿಸಿದ್ದಾರೆ. ಶಿರಾ ಆಸುಪಾಸಿನಲ್ಲಿ ಈಗ ಐದು ರಾಷ್ಟ್ರೀಯ ಹೆದ್ದಾರಿಗಳಿದ್ದು, ಜೊತೆಗೆ ಈ ರೈಲ್ವೆ ಮಾರ್ಗವೂ ಬಳಕೆಗೆ ಸಿದ್ಧಗೊಂಡರೆ ಅತ್ಯುತ್ತಮ ಉತ್ತಮ ಸಂಪರ್ಕ ವ್ಯವಸ್ಥೆ ದೊರೆಯುತ್ತದೆ ಎಂದಿದ್ದಾರೆ.

# ಎನ್‌ಎಮ್‌-ಚಿಪ್ ವಿನ್ಯಾಸ ಕೇಂದ್ರಗಳಿಗೆ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಚಾಲನೆ




**ಬೆಂಗಳೂರು, ಮೇ 14:** ಬೆಂಗಳೂರು ಹಾಗೂ ನೋಯಿಡಾದಲ್ಲಿ ಅತ್ಯಾಧುನಿಕ ಭಾರತದ ಪ್ರಥಮ ಮೂರು ಎನ್‌ಎಮ್–ಚಿಪ್ ವಿನ್ಯಾಸ ಕೇಂದ್ರಗಳನ್ನು ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಉದ್ಘಾಟಿಸಿದರು.

ಭಾರತದಲ್ಲಿ ಮೊದಲ ಬಾರಿಗೆ ಮೂರು ನ್ಯಾನೋ ಮೀಟರ್ ಆಧುನಿಕ ಚಿಪ್ ವಿನ್ಯಾಸಗೊಳಿಸುವ ಈ ಕೇಂದ್ರಗಳು ಜಾಗತಿಕ ಸೆಮಿ ಕಂಡಕ್ಟರ್ ನಾವಿನ್ಯ ವಲಯದಲ್ಲಿ ಭಾರತ ಮೈಲಿಗಲ್ಲು ಸ್ಥಾಪಿಸುವ ಮೂಲಕ ತನ್ನ ಸ್ಥಾನವನ್ನು ಭದ್ರಪಡಿಸಿಕೊಳ್ಳಲಿದೆ ಎಂದರು.

ಉತ್ತರ ಪ್ರದೇಶದಲ್ಲೂ ಸೆಮಿಕಂಡಕ್ಟರ್ ವಿನ್ಯಾಸ ಕೇಂದ್ರವನ್ನು ಆರಂಭಿಸಲಾಗುವುದು. ಇದು ದೇಶದ ಪ್ರತಿಭೆಗಳಿಗೆ ಪ್ಯಾನ್ ಇಂಡಿಯಾ ಪರಿಸರ ವ್ಯವಸ್ಥೆಯಲ್ಲಿ ಉಜ್ವಲ ಅವಕಾಶ ಒದಗಿಸಲಿದೆ. ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿ ಮೂಲಕ ಸಮಗ್ರ ಸೆಮಿಕಂಡಕ್ಟರ್ ಪರಿಸರ ವ್ಯವಸ್ಥೆಯನ್ನು ದೇಶದಲ್ಲಿ ಸ್ಥಾಪಿಸಲಾಗುತ್ತಿದೆ ಎಂದು ಹೇಳಿದರು. ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ಸಂಕೀರ್ಣದಾಯಕ ಅಧ್ಯಯನ ಕೌಶಲ್ಯವನ್ನು ಅಭಿವೃದ್ಧಿಪಡಿಸಲು ಸೆಮಿಕಂಡಕ್ಟರ್ ಕಲಿಕಾ ಕಿಟ್ ಒದಗಿಸಲಾಗುವುದು. 270ಕ್ಕೂ ಅಧಿಕ ಶಿಕ್ಷಣ ಸಂಸ್ಥೆಗಳು ಈಗಾಗಲೇ ವಿದ್ಯುನ್ಮಾನ ವಿನ್ಯಾಸ ಸ್ವಯಂ ಚಾಲಿತ ತಂತ್ರಾಂಶ ಸಾಧನಗಳನ್ನು ಪಡೆದುಕೊಂಡಿವೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು.

# ಬಾಯಲ್ಲಿ ಸಾಮಾಜಿಕ ನ್ಯಾಯ ಹೇಳೋದು, ಸಾಮಾಜಿಕ ನ್ಯಾಯದ ವಿರೋಧಿಗಳ ಜೊತೆ ಹೋಗಿ ಸೇರುವುದು ಸರಿಯಲ್ಲ: ಸಿಎಂ



**ಬೆಂಗಳೂರು ಮೇ 14 :** ಬಾಯಲ್ಲಿ ಸಾಮಾಜಿಕ ನ್ಯಾಯ ಹೇಳೋದು, ಸಾಮಾಜಿಕ ನ್ಯಾಯದ ವಿರೋಧಿಗಳ ಜೊತೆ ಹೋಗಿ ಸೇರೋದು ಸರಿಯಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಭಿಪ್ರಾಯಪಟ್ಟರು.

ಕಾವೇರಿ ನಿವಾಸದಲ್ಲಿ ಹಿರಿಯ ಪತ್ರಕರ್ತ ಡಾ.ಎಂ.ಎಸ್.ಮಣಿ ಅವರ ಒಳಕೋವೆ ಕೃತಿ ಬಿಡುಗಡೆಗೊಳಿಸಿ, ಐದು ಮಂದಿ ಸಾಧಕರಿಗೆ ವಿ.ಪಿ.ಸಿಂಗ್ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದರು.

ಸಾಮಾಜಿಕ ನ್ಯಾಯದ ಬಗ್ಗೆ ಬದ್ಧತೆ ಇರಬೇಕು. ತೋರಿಕೆ ಇರಬಾರದು. ಇವತ್ತಿನ ಸಂದರ್ಭದಲ್ಲಿ ಸಾಮಾಜಿಕ ನ್ಯಾಯದ ಬಗ್ಗೆ ಭಾಷಣ ಮಾಡುವವರು, ಮಾತಾಡುವವರು ಬಹಳ ಮಂದಿ ಸಿಗ್ತಾರೆ. ಆದರೆ ಬದ್ಧತೆ ಇರುವವರು ಕಡಿಮೆ ಎಂದರು.

ಇವತ್ತಿನ ವ್ಯವಸ್ಥೆ ಸುಧಾರಣೆಗೆ ವಿರುದ್ಧವಾದದ್ದು. ವ್ಯವಸ್ಥೆ ಜೊತೆ ರಾಜಿ ಮಾಡಿಕೊಂಡರೆ ಏನಾಗತ್ತೆ, ರಾಜಿ ಮಾಡಿಕೊಳ್ಳದಿದ್ದರೆ ಏನಾಗುತ್ತದೆ ಎನ್ನುವ ಅರಿವು ನನಗೆ ಇದೆ ಎಂದರು. ಈ ಅರಿವು ಎಲ್ಲರಿಗೂ ಇರಬೇಕು. ಜಾತಿ ವ್ಯವಸ್ಥೆಗೆ ಚಲನೆ ಇಲ್ಲ, ವರ್ಗ ವ್ಯವಸ್ಥೆಗೆ ಚಲನೆ ಇದೆ. ಅದಕ್ಕೇ ಬುದ್ಧ, ಬಸವ ಅಂಬೇಡ್ಕರ್ ಎಷ್ಟು ಹೋರಾಡಿದರೂ ಜಾತಿ ಹೋಗಿಲ್ಲ. ಜಾತಿ ಎನ್ನುವುದು ಸಾಮಾಜಿಕ ವಾಸ್ತವ. ಸಾಮಾಜಿಕ ನ್ಯಾಯದ ಪರವಾದ ನಿಜವಾದ ಬದ್ಧತೆ ಇಟ್ಟುಕೊಂಡು ಕೆಲಸ ಮಾಡುವವರು ಹೆಚ್ಚೆಚ್ಚು ಬರಬೇಕು ಎಂದರು.

ಡಾ.ಎಂ.ಎಸ್.ಮಣಿ ಸಾಮಾಜಿಕ ನ್ಯಾಯದ ಪರವಾಗಿ ಬದ್ಧತೆ ಉಳ್ಳವರು. ಇವರು ಇನ್ನೂ ಹೆಚ್ಚಿನ ಸಾಧನೆ ಮಾಡಲಿ ಎಂದು ಹಾರೈಸಿದರು.

ಇದೇ ಸಂದರ್ಭದಲ್ಲಿ ನಾನಾ ಕ್ಷೇತ್ರಗಳ ಐದು ಮಂದಿ ಸಾಧಕರಿಗೆ ಮಾಜಿ ಪ್ರಧಾನಿ ವಿ.ಪಿ.ಸಿಂಗ್ ಹೆಸರಿನ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಐವತ್ತು ವರ್ಷಗಳ ಕಾಲ ಪತ್ರಿಕಾ ವೃತ್ತಿಯ ಕುರಿತಾದ ನಾನಾ ಕ್ಷೇತ್ರಗಳಲ್ಲಿ ಶ್ರಮಿಸಿದ ಕೊಪ್ಪಳ ವಿಶ್ವವಿದ್ಯಾಲಯ ಕುಲಪತಿ ಪ್ರೊ ಬಿ.ಕೆ.ರವಿ ಅವರ ಪತ್ರಿಕಾ ವೃತ್ತಿಯ 50 ಸಂಭ್ರಮದ ಹಿನ್ನಲೆ ಜೀವಮಾನದ ಸಾಧನೆಗಾಗಿ ಮುಖ್ಯಮಂತ್ರಿಗಳು ಸನ್ಮಾನಿಸಿದರು.

**ವಿ.ಪಿ.ಸಿಂಗ್ ಪ್ರಶಸ್ತಿ ಪುರಸ್ಕೃತರು...**

1. ಡಾ.ಷರೀಫಾ, ಲೇಖಕಿ ಸಾಹಿತಿ.
2. ಡಾ.ನಳಿನಾಕ್ಷಿ ಸಣ್ಣಪ್ಪ ಸಮಾಜ ಸೇವಕರು. ಲೇಖಕಿ.
3. ನಾಗವೇಣಿ, ರಾಷ್ಟ್ರೀಯ ಯುವ ಪ್ರಶಸ್ತಿ ವಿಜೇತರು.
4. ಸಂಗಮ್ ದೇವ್, ಹಿರಿಯ ಪತ್ರಕರ್ತರು.
5. ಶಿವಲಿಂಗಪ್ಪ ಸಂಪಾದಕರು, ಕರ್ನಾಟಕ ಸಂಧ್ಯಾಕಾಲ.

# ದಸರಾ ಹಿನ್ನೆಲೆ ಅ.2ರಂದು ಕಾವೇರಿ ಆರತಿ ಆಯೋಜನೆ: ಡಾ. ರಾಮ್ ಪ್ರಸಾತ್



* ಕಾವೇರಿ ಆರತಿ ಕುರಿತಂತೆ ರಚಿಸಲಾದ ಉನ್ನತ ಮಟ್ಟದ ಸಭೆಯಲ್ಲಿ ಶಾಸಕರಾದ ರಮೇಶ್ ಬಾಬು, ಬಂಡಿಗೌಡ ಮತ್ತು ದಿನೇಶ್ ಗೂಳಿಗೌಡ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಈ ಬಗ್ಗೆ ತೀರ್ಮಾನ
* ಶಾಶ್ವತ ಕಾವೇರಿ ಆರತಿಗೆ KRS ನಲ್ಲಿ ದಸರಾ ಹಬ್ಬದ ಮೊದಲ ದಿನ ಚಾಲನೆ
* ನದಿ ಮಧ್ಯೆ ತೇಲುವ ವೇದಿಕೆ, ಸಾಂಸ್ಕೃತಿಕ ಕಾರ್ಯಕ್ರಮ, ವಸ್ತುಪ್ರದರ್ಶನ ಆಯೋಜನೆ

**ಬೆಂಗಳೂರು, ಮೇ 14:** ಡಿಸಿಎಂ ಡಿಕೆ ಶಿವಕುಮಾರ್ ಅವರ ನಿರ್ದೇಶನದಂತೆ ಕಾಶಿಯಲ್ಲಿ ನಡೆಯುವ ಗಂಗಾ ಆರತಿಯಂತೆ ಮಂಡ್ಯ ಜಿಲ್ಲೆಯ KRS ನಲ್ಲಿ ಕಾವೇರಿ ಆರತಿಯನ್ನು ಶಾಶ್ವತವಾಗಿ ಮುಂದುವರಿಸುವುದರ ಜತೆಗೆ ಅದನ್ನು ಧಾರ್ಮಿಕ, ಸಾಂಸ್ಕೃತಿಕ ಮತ್ತು ಪ್ರವಾಸೋದ್ಯಮ ಕಾರ್ಯಕ್ರಮವಾಗಿ ಆಯೋಜಿಸಲು ನಿರ್ಧರಿಸಲಾಗಿದೆ. ಇನ್ನು ಕೇವಲ ನೂರು ದಿನಗಳು ಬಾಕಿಯಿದ್ದು ಸಮರೋಪಾದಿ ಯಲ್ಲಿ ಸಂಬಂಧಪಟ್ಟ ಇಲಾಖೆಗಳು ಹಾಗೂ ಅಧಿಕಾರಿಗಳು ಕಾರ್ಯನಿರ್ವಹಿಸಬೇಕಾಗಿದೆ.

ಕಾವೇರಿ ಆರತಿ ಕುರಿತಂತೆ ಸರ್ಕಾರ ರಚಿಸಿರುವ ಉನ್ನತ ಮಟ್ಟದ ಸಮಿತಿ ಬುಧವಾರ ನಡೆಸಿದ ಮೊದಲ ಸಭೆಯಲ್ಲಿ ಈ ಕುರಿತು ವಿಸ್ತೃತ ಚರ್ಚೆ ನಡೆಸಲಾಗಿದೆ. ಸಭೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಮಿತಿಯ ಅಧ್ಯಕ್ಷರೂ ಆದ ಬೆಂಗಳೂರು ಜಲಮಂಡಳಿ ಅಧ್ಯಕ್ಷ ಡಾ.ವಿ.ರಾಮ್ ಪ್ರಸಾತ್ ಮನೋಹರ್, "ಉಪಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್ ಅವರ ಕನಸಿನ ಕಾರ್ಯಕ್ರಮವಾಗಿರುವ ಕಾವೇರಿ ಆರತಿಯನ್ನು ದಸರಾ ಮೊದಲ ದಿನ (ಅ.2) ಆರಂಭಿಸುವ ನಿಟ್ಟಿನಲ್ಲಿ ಸಮರೋಪಾದಿಯಲ್ಲಿ ಕಾರ್ಯ ನಿರ್ವಹಿಸುವ ಅಗತ್ಯವಿದೆ. ಈ ನಿಟ್ಟಿನಲ್ಲಿ ಎಲ್ಲಾ ಇಲಾಖೆಗಳು ಸಂಘಟಿತವಾಗಿ ಕಾರ್ಯ ನಿರ್ವಹಿಸಲಿದ್ದೇವೆ ಎಂದರು.

ಡಿಸಿಎಂ ಡಿಕೆ ಶಿವಕುಮಾರ್ ಅವರ ನಿರ್ದೇಶನದಂತೆ ದಸರಾ ಸಂದರ್ಭದಲ್ಲಿ ಪ್ರತಿನಿತ್ಯ ಮತ್ತು ನಂತರದ ದಿನಗಳಲ್ಲಿ ವಾರಕ್ಕೆ ಮೂರು ದಿನ ಶುಕ್ರವಾರ. ಶನಿವಾರ. ಭಾನುವಾರ ಕಾವೇರಿ ಆರತಿ ನಡೆಸುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿದೆ. ನಾಡಿಗೆ ಅನ್ನ, ನೀರು ನೀಡುವ ಕಾವೇರಿ ತಾಯಿ ಭಾವನಾತ್ಮಕ ವಿಚಾರ, ಇದರ ಜೊತೆಯಲ್ಲಿ ನಾಡಿನ ಸಾಂಸ್ಕೃತಿಕ ಪ್ರವಾಸೋದ್ಯಮ ಅಭಿವೃದ್ಧಿಗೂ ಆದ್ಯತೆ ನೀಡಲಾಗುತ್ತದೆ. ಸ್ಥಳೀಯರಿಗೆ ಉದ್ಯೋಗಕ್ಕೂ ಅವಕಾಶ ಕಲ್ಪಿಸುವುದಕ್ಕೆ ಆದ್ಯತೆ ನೀಡಬೇಕಾಗಿದೆ", ಎಂದು ಹೇಳಿದರು. ಇತ್ತೀಚೆಗೆ ಮಲೆ ಮಹದೇಶ್ವರ ಬೆಟ್ಟದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಕಾವೇರಿ ಆರತಿಗೆ 92ಕೋಟಿ ರೂ. ವೆಚ್ಚ ಮಾಡಲು ಅನುಮೋದನೆ ನೀಡಲಾಗಿದೆ. ಇದರಲ್ಲಿ ಕೇವಲ ಕಾವೇರಿ ಆರತಿ ಮಾತ್ರವಲ್ಲ, ಆರತಿಗೆ ಬರುವವರಿಗೆ ಮೂಲ ಸೌಕರ್ಯ, ರಸ್ತೆಗಳ ಅಭಿವೃದ್ಧಿ, ಲೇಸರ್ ಶೋ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತದೆ", ಎಂದು ತಿಳಿಸಿದರು.

**ನದಿ ಮಧ್ಯೆ ತೇಲುವ ವೇದಿಕೆ:**

ಕಾವೇರಿ ಆರತಿಗೆ ಕೆಆರ್‌ಎಸ್ ಅಣೆಕಟ್ಟಿನ ಬೃಂದಾವನದಲ್ಲಿರುವ ಜಾಗದಲ್ಲಿ ನದಿ ಮಧ್ಯೆ ತೇಲುವ ಸೇತುವೆ ರಚಿಸುವ ನಿಟ್ಟಿನಲ್ಲಿ ವಾಸ್ತುಶಿಲ್ಪಿಗಳಿಗೆ ತಿಳಿಸಲಾಗಿದೆ. ಸುತ್ತಲೂ ಜನರು ಕುಳಿತು ನೋಡಲು ವಿವಿಧ ಅಂತಸ್ತಿನ ಗ್ಯಾಲರಿ ಸಿದ್ಧಪಡಿಸಲಾಗುವುದು. ಗ್ಯಾಲರಿ ಕೆಳಗೆ ಶೌಚಾಲಯ ಮತ್ತು ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಲಾಗುವುದು ಜತೆಗೆ ಆಹಾರದ ವ್ಯವಸ್ಥೆಗೆ ಅಗತ್ಯವಿರುವ ಸ್ಟಾಲ್‌ಗಳನ್ನು ನಿರ್ಮಿಸಲಾಗುವುದು. ಸಂಜೆ 6ರಿಂದ 6.30ರವರೆಗೆ ಸಾಂಸ್ಕೃತಿಕ ಕಾರ್ಯಕ್ರಮ, 6.30ರಿಂದ 7 ಗಂಟೆಯವರೆಗೆ ಕಾವೇರಿ ಆರತಿ, ಬಳಿಕ ದೊಡ್ಡ ಮಟ್ಟದ ಸಾಂಸ್ಕೃತಿಕ ಕಾರ್ಯಕ್ರಮ, ಮ್ಯೂಸಿಕಲ್ ಫೌಂಟೇನ್, ಲೇಸರ್ ಪ್ರದರ್ಶನ, ಪಟಾಕಿ ಪ್ರದರ್ಶನಗಳನ್ನು ಆಯೋಜಿ ಸುವ ಕುರಿತು ಚರ್ಚಿಸಲಾಗಿದೆ. ಉಪಮುಖ್ಯಮಂತ್ರಿಗಳ ಜತೆ ಚರ್ಚಿಸಿ ಇದನ್ನು ಅಂತಿಮಗೊಳಿಸಲಾಗುವುದು, ಎಂದು ಡಾ.ವಿ.ರಾಮ್ ಪ್ರಸಾತ್ ಮನೋಹರ್ ಹೇಳಿದರು.

ಸಾಂಸ್ಕೃತಿಕ ಕಾರ್ಯಕಮದಲ್ಲಿ ಸ್ಥಳೀಯ ಕಲಾವಿದರಿಗೆ ಆದ್ಯತೆ ನೀಡಲಾಗುವುದು. ಇದರ ಜತೆಗೆ ಸ್ಥಳೀಯ ಗುಡಿ ಕೈಗಾರಿಕೆಗಳು, ಸಾವಯವ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟಕ್ಕೆ ವ್ಯವಸ್ಥೆ ಮಾಡಲಾಗುತ್ತದೆ. ಹೋಟೆಲ್ ಉದ್ಯಮದ ಬೆಳವಣಿಗೆಗೂ ಯೋಜನೆ ರೂಪಿಸಲಾಗುತ್ತದೆ. ಒಟ್ಟಾರೆ ಕಾವೇರಿ ಆರತಿಯನ್ನು ಹೊಸ ಪ್ರಯೋಗವಾಗಿ ವಿಭಿನ್ನತೆ ಮತ್ತು ವಿಜೃಂಬಣೆಯಿಂದ ಜನಪರ ಕಾರ್ಯಕ್ರಮವಾಗಿ ರೂಪಿಸಲಾಗುವುದು", ಎಂದರು.

**ಟಿಕೆಟಿಂಗ್ ವ್ಯವಸ್ಥೆ:**

ಕಾವೇರಿ ಆರತಿಯನ್ನು ಶಾಶ್ವತವಾಗಿ ಆಯೋಜಿಸುತ್ತಿರು ವುದರಿಂದ ಸಾಕಷ್ಟು ವೆಚ್ಚ ಮಾಡಬೇಕಾಗುತ್ತದೆ. ಹೀಗಾಗಿ ಟಿಕೆಟಿಂಗ್ ವ್ಯವಸ್ಥೆ ಮಾಡಲಾಗುತ್ತದೆ. ಈ ಕುರಿತು ಉಪಮುಖ್ಯಮಂತ್ರಿ ಜತೆ ಚರ್ಚಿಸಿದ ಬಳಿಕ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು. ಇದರ ಜತೆಗೆ ಒಂದು ಪ್ರದೇಶದಲ್ಲಿ ಜನರು ಉಚಿತವಾಗಿಯೂ ಕಾವೇರಿ ಆರತಿ ವೀಕ್ಷಿಸಲು ಅವಕಾಶ ಮಾಡಿಕೊಡಲಾಗುವುದು, ಎಂದು ತಿಳಿಸಿದರು.

ಕಾವೇರಿ ಆರತಿ ವೀಕ್ಷಿಸಲು ಯಾವುದೇ ಸಮಸ್ಯೆಯಾಗದಂತೆ ಪ್ರತಿ ದಿನ 8ರಿಂದ 10 ಸಾವಿರ ಮಂದಿ ಕುಳಿತು ನೋಡಲು ವ್ಯವಸ್ಥೆ ಮಾಡಲಾಗುವುದು. ಆರಂಭಿಕವಾಗಿ ಮಹಾಕುಂಭ ಮೇಳದಲ್ಲಿ ಮಾಡಿದಂತೆ ಟೆಂಟ್ ವ್ಯವಸ್ಥೆ ಕಲ್ಪಿಸುವ ಬಗ್ಗೆ ಯೋಚಿಸಲಾಗಿದೆ. ಹಂತ ಹಂತವಾಗಿ ಗ್ಯಾಲರಿಯನ್ನು ವಿಸ್ತರಿಸಲು ಅವಕಾಶ ಮಾಡಿಕೊಡಲಾಗುವುದು, ಎಂದರು.

**ವಿಶೇಷ ಪ್ರವಾಸೋದ್ಯಮ ಪ್ಯಾಕೇಜ್:**

ವಿಧಾನಪರಿಷತ್ ಸದಸ್ಯರಾದ ದಿನೇಶ್ ಗೂಳೀಗೌಡ ಅವರು ಮಾತನಾಡಿ, "ಕಾವೇರಿ ಆರತಿ ಕೇವಲ ಒಂದು ಕಾರ್ಯಕ್ರಮವಾಗಿ ಮಾತ್ರ ನಡೆಯುವುದಿಲ್ಲ. ಬದಲಾಗಿ ಮಂಡ್ಯ, ಮೈಸೂರು, ಹಾಸನ, ಕೊಡಗು, ಚಾರಾಜನಗರ ಮತ್ತು ಚಿಕ್ಕಮಗಳೂರು ಜಿಲ್ಲೆಗಳ ಪ್ರವಾಸೋದ್ಯಮ ಅಭಿವೃದ್ಧಿಗೆ ಪೂರಕವಾಗಿರಲಿದೆ. ಅದಕ್ಕಾಗಿ ಧಾರ್ಮಿಕ, ಸಾಂಸ್ಕೃತಿಕ, ಪರಿಸರ, ಅರಣ್ಯ ಮತ್ತಿತರ ಅಂಶಗಳನ್ನು ಒಳಗೊಂಡ ವಿಶೇಷ ಪ್ರವಾಸೋದ್ಯಮ ಪ್ಯಾಕೇಜ್ ರೂಪಿಸುವಂತೆ ಉಪಮುಖ್ಯಮಂತ್ರಿಯವರು ನಿರ್ದೇಶನ ನೀಡಿದ್ದಾರೆ. ಈ ಕುರಿತು ಪ್ರವಾಸೋದ್ಯಮ ಇಲಾಖೆ ಜತೆ ಚರ್ಚಿಸಲಾಗುವುದು", ಎಂದು ಹೇಳಿದರು.

ಸಭೆಯಲ್ಲಿ ಹಾಜರಿದ್ದ ಶ್ರೀರಂಗಪಟ್ಟಣ ಕ್ಷೇತ್ರದ ಶಾಸಕ ರಮೇಶ್ ಬಂಡಿಸಿದ್ದೇಗೌಡ ಮಾತನಾಡಿ, "ಕಾವೇರಿ ಆರತಿ ಮಂಡ್ಯ ಜಿಲ್ಲೆ ಮಾತ್ರವಲ್ಲದೆ, ಸುತ್ತಮುತ್ತಲ ಜಿಲ್ಲೆಗಳಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ಅನುಕೂಲ ಮಾಡಿಕೊಡಲಿದೆ. ಹೀಗಾಗಿ ಸಂಬಂಧಿಸಿದ ಜಿಲ್ಲೆಗಳ ಎಲ್ಲಾ ಜನಪ್ರತಿನಿಧಿಗಳೊಂದಿಗೆ ಸಮಾಲೋಚಿಸಿ ಕಾರ್ಯಕ್ರಮ ರೂಪಿಸಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಮಂಡ್ಯ ಜಿಲ್ಲಾಧಿಕಾರಿಗಳು, ಕಾವೇರಿ ನೀರಾವರಿ ನಿಗಮ, ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು. ಮಂದಿನ ಸಭೆಯನ್ನು ಮಂಡ್ಯದಲ್ಲಿ ಆಯೋಜಿಸಲು ತೀರ್ಮಾನಿಸಲಾಯಿತು.

# ವಿಕ್ರಮ್‌ರಾವ್ ಅವರಿಗೆ ಕೆಯುಡಬ್ಲ್ಯೂಜೆ ಶ್ರದ್ಧಾಂಜಲಿ




**ಬೆಂಗಳೂರು, ಮೇ 14:** ಭಾರತೀಯ ಕಾರ್ಯನಿರತ ಪತ್ರಕರ್ತರ ಒಕ್ಕೂಟಕ್ಕೆ ಸುದೀರ್ಘ ಅವಧಿಗೆ ಅಧ್ಯಕ್ಷರಾಗಿ, ಕ್ರಿಯಾಶೀಲ ಸಂಘಟಕರಾಗಿ ಸೇವೆ ಸಲ್ಲಿಸಿದ್ದ ಕೆ.ವಿಕ್ರಮರಾವ್ ಅವರಿಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಸಂಘದ ಅಧ್ಯಕ್ಷ ಶಿವಾನಂದ ತಗಡೂರು, ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ, ಬೆಂಗಳೂರು ಘಟಕದ ಸತ್ಯನಾರಾಯಣ, ನರೇಂದ್ರ ಪಾರೆಕಟ್, ದೇವರಾಜ್, ಶರಣು, ಹಿರಿಯ ಪತ್ರಕರ್ತರಾದ ರಾಯಚೂರು ವೆಂಕಟಸಿಂಗ್, ಚನ್ನಬಸವ, ಯಾದಗಿರಿ ಸಂಜೀವ ರಾವ್ ಕುಲಕರ್ಣಿ, ಸ್ತ್ರೀಜಾಗೃತಿ ಶೋಭಾ, ಶಶಿಕಲಾ, ಶಂಭುಲಿಂಗ ಮತ್ತಿತರರು ನುಡಿನಮನ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಇಂದಿನಿಂದ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಆಗಿ ಪರಿವರ್ತನೆ

**ಬೆಂಗಳೂರು, ಮೇ.14–** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ನಾಳೆಯಿಂದ(ಮೇ.15) 'ಗ್ರೇಟರ್ ಬೆಂಗಳೂರು ಪ್ರಾಧಿಕಾರ' (ಜಿಬಿಎ) ಆಗಿ ಬದಲಾಗಲಿದ್ದು, ಬೆಂಗಳೂರು ಆಡಳಿತದ ಸಂಪೂರ್ಣ ಚಿತ್ರಣ ಬದಲಾವಣೆ ಆಗಲಿದೆ. ಅಷ್ಟು ಮಾತ್ರವಲ್ಲದೆ ಪಾಲಿಕೆ ಅಧಿಕೃತವಾಗಿ ರದ್ದಾಗಿ ಇತಿಹಾಸದ ಪುಟ ಸೇರಲಿದೆ.

ಬೆಂಗಳೂರಿನ ಆಡಳಿತದಲ್ಲಿ ಮಹತ್ವದ ಬದಲಾವಣೆಯೊಂದಿಗೆ, ರಾಜ್ಯ ಸರ್ಕಾರವು 2024ರ ಗ್ರೇಟರ್ ಬೆಂಗಳೂರು ಆಡಳಿತ ಕಾಯ್ದೆಯನ್ನು ಮೇ 15 ರಿಂದ ಜಾರಿಗೊಳಿಸಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಜಿಬಿಎ ಬೆಂಗಳೂರಿನ ಉನ್ನತ ಮಟ್ಟದ ಯೋಜನೆ ಮತ್ತು ಆಡಳಿತಾತ್ಮಕ ಸಂಸ್ಥೆಯಾಗಿ ಕಾರ್ಯ ನಿರ್ವಹಿಸಲಿದೆ.

ಹಾಲಿ ಬಿಬಿಎಂಪಿಯ 225 ವಾರ್ಡ್ ವ್ಯಾಪ್ತಿ ಯನ್ನೇ ಜಿಬಿಎ ವ್ಯಾಪ್ತಿ ಎಂದು ಅಧಿಸೂಚಿಸಲಾಗಿದೆ. ಹೊಸ ವ್ಯವಸ್ಥೆ ಪೂರ್ಣ ಜಾರಿಗೆ ಬರುವವರೆಗೆ ಹಾಲಿ ಪಾಲಿಕೆ ಪ್ರದೇಶ ವ್ಯಾಪ್ತಿಯಲ್ಲಿಯೇ ಎಂದಿನಂತೆ ಕಾರ್ಯನಿರ್ವಹಿಸ ಲಿದ್ದು, ನಂತರ ಗ್ರೇಟರ್ ಬೆಂಗಳೂರು ಅಧಿಕಾರದ ಅಡಿ ಮೂರರಿಂದ ಐದು ಪಾಲಿಕೆಗಳು ರಚನೆಯಾಗಲಿವೆ. ಬಿಬಿಎಂಪಿ ಆಡಳಿತಾಧಿಕಾರಿಯೇ ಜಿಬಿಎ ಆಡಳಿತಾಧಿಕಾರಿಗಳಾಗಿ, ಬಿಬಿಎಂಪಿ ಮುಖ್ಯ ಆಯುಕ್ತರು ಜಿಬಿಎ ಮುಖ್ಯ ಆಯುಕ್ತರಾಗಿ ನೇಮಕವಾಗಲಿದ್ದಾರೆ. ಹೊಸ ಪಾಲಿಕೆಗಳ ರಚನೆ, ನಿಯಮ ಉಪಬಂಧಗಳ ಸಹಿತ ಇತರ ಕಾರ್ಯ ಚಟುವಟಿಕೆಗಳಿಗೆ ಜಾರಿಗೆ ಕಾಯ್ದೆ ಅವಕಾಶ ಕಲ್ಪಿಸಲಿದೆ.

ಕಾಯ್ದೆ ಜಾರಿಯಾಗಿ 120 ದಿನಗಳಲ್ಲಿ ಮುಖ್ಯಮಂತ್ರಿ ಅಧ್ಯಕ್ಷತೆಯಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚನೆಯಾಗಬೇಕು. ಜಿಬಿಎ ವ್ಯಾಪ್ತಿಯಲ್ಲಿ ತಲಾ 150 ವಾರ್ಡ್ ಮೀರದಂತೆ ಪಾಲಿಕೆ ರಚಿಸಲು ಅವಕಾಶವಿದೆ. ಬಿಬಿಎಂಪಿ ವ್ಯಾಪ್ತಿಯನ್ನು ವಿಸ್ತರಣೆ ಮಾಡಿಕೊಳ್ಳಲು ಅವಕಾಶವಿದೆ.

709 ಚದರ ಕಿ.ಮೀ.ನಿಂದ ಒಂದು ಸಾವಿರ ಚ.ಕಿ.ಮೀ. ಗೆ ಹೊಂದಿಕೊಂಡಿರುವ ಮತ್ತು ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯ ಪ್ರದೇಶ ಜಿಬಿಎ ವ್ಯಾಪ್ತಿಗೆ ಸೇರ್ಪಡೆ ಮಾಡಿಕೊಂಡು ಮೂರು ಅಥವಾ ಐದು ಪಾಲಿಕೆ ರಚಿಸಲು ಸರ್ಕಾರ ಚಿಂತನೆ ನಡೆಸಿದೆ.

ಗ್ರೇಟರ್ ಬೆಂಗಳೂರು ಕಾಯ್ದೆಯಡಿ ಮೂರು ಹಂತದ ಆಡಳಿತ ವ್ಯವಸ್ಥೆ ಜಾರಿಗೆ ಬರಲಿದೆ. ಮೊದಲ ಹಂತದಲ್ಲಿ ಜಿಬಿಎ ಅಡಿಯಲ್ಲಿ ಬೆಂಗಳೂರಿಗೆ ಸಂಬಂಧಿಸಿದ ಎಲ್ಲಾ ಸರ್ಕಾರಿ ಸಂಸ್ಥೆಗಳು ಒಂದುಗೂಡಲಿದೆ. ಎರಡನೇ ಹಂತದಲ್ಲಿ ಪಾಲಿಕೆಗಳು ರಚನೆಯಾಗಿ ಕಾರ್ಯನಿರ್ವಹಿಸಲಿದ್ದು, ಮೂರನೇ ಹಂತದಲ್ಲಿ ಪ್ರತಿ ಪಾಲಿಕೆಗಳಲ್ಲಿ ವಾರ್ಡ್ ಮಟ್ಟದ ಸಮಿತಿ ರಚನೆಯಾಗುತ್ತದೆ. ಎಲ್ಲಾ ಹಂತಗಳು ಸರ್ಕಾರದ ಕಣ್ಗಾವಲಿನಲ್ಲಿ ನಡೆಯುತ್ತದೆ.

**ಜಿಬಿಎ ಸಮಿತಿ ರಚನೆ ಹೇಗಿರುತ್ತೆ?:**



ಪ್ರಾಧಿಕಾರದಲ್ಲಿ ಮುಖ್ಯಮಂತ್ರಿಯವರು ಅಧ್ಯಕ್ಷರಾದರೆ, ಬೆಂಗಳೂರು ಅಭಿವೃದ್ಧಿ ಸಚಿವರು ಉಪಾಧ್ಯಕ್ಷರಾಗಿದ್ದಾರೆ. ಗ್ರೇಟರ್ ಬೆಂಗಳೂರು ವ್ಯಾಪ್ತಿಯ ಶಾಸಕರು– ಸಚಿವರು, ನಗರಾಭಿವೃದ್ಧಿ ಸಚಿವರು, ಪಾಲಿಕೆಗಳ ಮೇಯರ್‌ಗಳು, ಬಿಡಿಎ ಆಯುಕ್ತ, ಬೆಂಗಳೂರು ಜಲಮಂಡಳಿ ಅಧ್ಯಕ್ಷ, ಬಿಎಂಟಿಸಿ, ವ್ಯವಸ್ಥಾಪಕ ನಿರ್ದೇಶಕ, ಬಿಎಂಆರ್‌ಸಿಎಲ್ ವ್ಯವಸ್ಥಾಪಕ ನಿರ್ದೇಶಕ.

ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ, ಕಂದಾಯ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಪೊಲೀಸ್ ಕಮಿಷನರ್, ಬೆಂಗಳೂರು ಮಹಾನಗರ ಭೂಸಾರಿಗೆ ಪ್ರಾಧಿಕಾರದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ಘನತ್ಯಾಜ್ಯ ನಿರ್ವಹಣೆ ನಿಯಮಿತದ ವ್ಯವಸ್ಥಾಪಕ ನಿರ್ದೇಶಕ, ರಾಜ್ಯ ಅಗ್ನಿಶಾಮಕ ಮತ್ತು.

ತುರ್ತುಸೇವೆಗಳ ನಿರ್ದೇಶಕ, ನಗರ ಭೂಸಾರಿಗೆ ನಿರ್ದೇಶನಾಲಯದ ಆಯುಕ್ತ, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಮಹಾನಗರ ಆಯುಕ್ತ ಸದಸ್ಯರಾಗಿರುತ್ತಾರೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತ ಸದಸ್ಯ ಕಾರ್ಯದರ್ಶಿಯಾಗಿರುತ್ತಾರೆ.

**ನಾಳೆಯಿಂದ ಏನಾಗುತ್ತದೆ?**

ಗ್ರೇಟರ್ ಬೆಂಗಳೂರು ಆಡಳಿತ ಕಾಯ್ದೆ, 2024ರ ಪ್ರಕಾರ ಬಿಬಿಎಂಪಿ ಕಾಯ್ದೆ, 2021 ರದ್ದಾಗುತ್ತದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಜಿಬಿಎ ಬೆಂಗಳೂರಿನ ಉನ್ನತ ಮಟ್ಟದ ಯೋಜನೆ ಮತ್ತು ಆಡಳಿತಾತ್ಮಕ ಸಂಸ್ಥೆಯಾಗಿ ಕಾರ್ಯನಿರ್ವಹಿಸಲಿದೆ.

ಪ್ರದೇಶದಲ್ಲಿ ಯಾವುದೇ ಬದಲಾವಣೆ ಇಲ್ಲ: ಹೊಸ ಜಿಬಿಎ ಪ್ರಸ್ತುತ ಬಿಬಿಎಂಪಿ ವ್ಯಾಪ್ತಿಯ 709 ಚದರ ಕಿಲೋಮೀಟರ್ ಪ್ರದೇಶದೊಳಗೇ ಕಾರ್ಯನಿರ್ವಹಿಸಲಿದೆ. ಸದ್ಯಕ್ಕೆ ನಗರದ ಅಧಿಕೃತ ಗಡಿಗಳನ್ನು ವಿಸ್ತರಿಸುವ ಯಾವುದೇ ಪ್ರಸ್ತಾಪವಿಲ್ಲ. ಆದರೆ, ಭವಿಷ್ಯದಲ್ಲಿ ಆನೇಕಲ್, ಪ್ರದೇಶಗಳನ್ನು ಸೇರಿಸುವ ಬಗ್ಗೆ ಚರ್ಚೆಗಳು ನಡೆಯುತ್ತಿವೆ. ಈ ಕಾಯ್ದೆಯು ಗ್ರೇಟರ್ ಬೆಂಗಳೂರು ಪ್ರದೇಶದೊಳಗೆ ಗರಿಷ್ಠ ಏಳು ನಗರ ಪಾಲಿಕೆಗಳನ್ನು ರಚಿಸಲು ಅವಕಾಶ ನೀಡುತ್ತದೆ. ಪ್ರತಿಯೊಂದು ಪಾಲಿಕೆಗೂ ತನ್ನದೇ ಆದ ಮೇಯರ್ ಮತ್ತು ಕೌನ್ಸಿಲ್ ಇರುತ್ತದೆ. ಇದು ಏಕ–ಮೇಯರ್ ವ್ಯವಸ್ಥೆಯನ್ನು ಬದಲಾಯಿಸಲಿದ್ದು, ಉತ್ತಮ ಸ್ಥಳೀಯ ಆಡಳಿತ ಕ್ಕಾಗಿ ನಾಗರಿಕ ಆಡಳಿತವನ್ನು ವಿಕೇಂದ್ರೀಕರಿಸುವ ಗುರಿಯನ್ನು ಹೊಂದಿದೆ.

ಆದರೆ ಪ್ರಸ್ತುತ ಕಾಂಗ್ರೆಸ್ ಸರ್ಕಾರ 25,000 ಜನಸಂಖ್ಯೆಗೆ ಒಂದು ವಾರ್ಡ್‌ನಂತೆ ತಲಾ 125 ವಾರ್ಡ್‌ಗಳಿಗೊಂದರಂತೆ ಬೆಂಗಳೂರು ಉತ್ತರ, ಕೇಂದ್ರ ಹಾಗೂ ಬೆಂಗಳೂರು ದಕ್ಷಿಣ ನಗರಪಾಲಿಕೆಗಳೆಂದು ಮೂರು ನಗರ ಪಾಲಿಕೆಗಳನ್ನು ಸೃಜಿಸಲು ಒಲವು ತೋರಿದೆ ಎಂದು ಮೂಲಗಳು ತಿಳಿಸಿವೆ.

**ಇದೇ ವರ್ಷದೊಳಗೆ ಚುನಾವಣೆ?**

ಗ್ರೇಟರ್ ಬೆಂಗಳೂರು ಕಾಯ್ದೆ ಅಸ್ತಿತ್ವಕ್ಕೆ ಬರುತ್ತಿರುವ ಹಿನ್ನೆಲೆ ಹೊಸ ಪಾಲಿಕೆಗಳನ್ನು ಅಸ್ತಿತ್ವಕ್ಕೆ ತರಲು ಚುನಾವಣೆ ನಡೆಸಬೇಕಾಗುತ್ತದೆ. ಇದಕ್ಕೆ ಅಗತ್ಯವಿರುವ ನಿಯಮ, ಮಾರ್ಗಸೂಚಿ ನಂತರದ ದಿನಗಳಲ್ಲಿ ಹೊರಬಿದ್ದು, ಪ್ರಕ್ರಿಯೆಗೆ ಚಾಲನೆ ಸಿಗಲಿದೆ. ಎಲ್ಲವೂ ನಿಗದಿತ ಸಮಯದೊಳಗೆ ನಡೆದಲ್ಲಿ ಮುಂಬರುವ ಸೆಪ್ಟೆಂಬರ್, ಅಕ್ಟೋಬರ್ ತಿಂಗಳಲ್ಲಿ ಚುನಾವಣೆ ನಡೆಸಲು ಸರ್ಕಾರ ಚಿಂತನೆ ನಡೆಸಿದೆ. ಇಲ್ಲವೇ ಈ ವರ್ಷಾಂತ್ಯದೊಳಗೆ ಎಲೆಕ್ಷನ್ ನಡೆಸಿ ಹಾಲಿ ಬಿಬಿಎಂಪಿ ಅವಧಿ 5 ವರ್ಷ ಚುನಾವಣೆ ಇಲ್ಲದೆ ತೆರೆಮರೆಗೆ ಸಂದ ಅಪವಾದದಿಂದ ಪಾರಾಗಲು ಸರ್ಕಾರ ಆಲೋಚನೆ ನಡೆಸಿದೆ.

# ಸಶಕ್ತ, ಸದೃಢ ಭಾರತವನ್ನು ಅಸ್ಥಿರಗೊಳಿಸುವ ಸಂಚು ದೇಶದ ಒಳ–ಹೊರಗಿನಿಂದ ನಡೆಯುತ್ತಿದೆ: ಪ್ರಲ್ಹಾದ್ ಜೋಶಿ

**ಹುಬ್ಬಳ್ಳಿ, ಮೇ.14–** ಜಗತ್ತಿನ ನಾಲ್ಕನೇ ಅತಿ ದೊಡ್ಡ ಆರ್ಥಿಕ ಶಕ್ತಿಯತ್ತ ಸಾಗಿದ ಸಶಕ್ತ, ಸದೃಢ ಭಾರತವನ್ನು ಅಸ್ಥಿರಗೊಳಿಸುವ ಸಂಚು ದೇಶದ ಒಳಗೆ–ಹೊರಗಿನಿಂದಲೂ ನಡೆಉಯುತ್ತಿದೆ. ಆದರೆ ಭಾರತ ಇದ್ಯಾವುದಕ್ಕೂ ಜಗ್ಗುವದಿಲ್ಲ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಹ್ಲಾದ ಜೋಶಿ ಹೇಳಿದರು.

ಹುಬ್ಬಳ್ಳಿ ನಗರದಲ್ಲಿ ಎಬಿವಿಪಿ ಆಯೋಜಿಸಿದ್ದ 'ಸಂವಿಧಾನ 75 ಬದಲಾಯಿಸಿದ್ದು, ಯಾರು? ಬಲಪಡಿಸಿದ್ದು ಯಾರು' ಅತ್ಯಮೂಲ್ಯ ಕೃತಿ ಬಿಡುಗಡೆ ಕಾರ್ಯಕ್ರಮದಲ್ಲಿ ಮಾತನಾಡಿ, ಭಾರತ ಇಂದು ಆರ್ಥಿಕವಾಗಿ ಬೆಳೆಯುತ್ತಿರುವುದನ್ನು ವಿರೋಧಿಗಳಿಗೆ ಸಹಿಸಿಕೊಳ್ಳಲಾಗುತ್ತಿಲ್ಲ. ಇದರ ಪರಿಣಾಮವೇ ಪಹಲ್ಗಾಮ್‌ನಂತಹ ಭಯೋತ್ಪಾದನೆ ಚಟುವಟಿಕೆ ನಡೆಸಲಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

2008ರಿಂದ 2014ರ ವರೆಗೆ ಆರ್ಥಿಕತೆ ಸೇರಿದಂತೆ ಎಲ್ಲದರಲ್ಲೂ ಅತ್ಯಂತ ದುರ್ಬಲವಾಗಿದ್ದ ಭಾರತ ಇಂದು ಜಗತ್ತಿನಲ್ಲೇ 4ನೇ ಅತಿದೊಡ್ಡ ಆರ್ಥಿಕ ಶಕ್ತಿಯಾಗುತ್ತಿದೆ. ಅಲ್ಲದೇ, 4ನೇ ಅತಿ ದೊಡ್ಡ ಮಿಲಿಟರಿ ಶಕ್ತಿ ಸಹ ಭಾರತದ್ದಾಗಿದೆ. ಪ್ರಧಾನಿ ನರೇಂದ್ರ ಮೋದಿ ಅವರು ದೇಶದ ರಕ್ಷಣೆ ಮತ್ತು ಅಭಿವೃದ್ಧಿಯಲ್ಲಿ ನೈಜ ಪರಿವರ್ತನೆ ತರಲು ಪ್ರಯತ್ನ ಮಾಡುತ್ತಿದ್ದಾರೆ. ಆದರೆ, ಇದನ್ನೆಲ್ಲ ಬುಡಮೇಲು ಮಾಡುವ ಪ್ರಯತ್ನ ನಡೆದಿದೆ ಎಂದು ಆರೋಪಿಸಿದರು.

ಮೋಸ್ಟ್ ವಾಂಟೆಡ್ ಉಗ್ರ ನಿರ್ನಾಮ: ಪಹಲ್ಗಾಮ್ ಭಯೋತ್ಪಾದನೆ ವಿರುದ್ಧದ ಆಪರೇಶನ್ ಸಿಂಧೂರ್ ಕಾರ್ಯಾಚರಣೆಯಲ್ಲಿ ಭಾರತಕ್ಕೆ ಬೇಕಾಗಿದ್ದ ಮೋಸ್ಟ್ ವಾಂಟೆಡ್ ಉಗ್ರರನ್ನು ನಿರ್ನಾಮ ಮಾಡುವಲ್ಲಿ ನಮ್ಮ ಸೇನೆ ಯಶಸ್ವಿಯಾಗಿದೆ. ಇನ್ನು ಮುಂದೆ



ಉಗ್ರರು ಕೆಮ್ಮಿದರೆ ಸಾಕು ಪಾಕಿಸ್ತಾನದ ಒಳ ನುಗ್ಗಿ ತಕ್ಕ ಶಾಸ್ತಿ ಮಾಡುತ್ತೇವೆ. ಸದ್ಯ ಗಡಿಯಲ್ಲೇ ನಿಂತು ಪಾಠ ಕಲಿಸಿದ್ದೇವೆ. ವಿಶ್ವ ಸಂಸ್ಥೆಯನ್ನೂ ಲೆಕ್ಕಿಸದೆ ಪ್ರತಿದಾಳಿ ಮಾಡಿದ್ದೇವೆ ಎಂದು ಹೇಳಿದರು.

ಜಗತ್ತಿನ 4ನೇ ಅತಿದೊಡ್ಡ ಆರ್ಥಿಕ ಶಕ್ತಿಯಾಗುತ್ತಿರುವ ಭಾರತ ಅಭಿವೃದ್ಧಿಗಾಗಿ 100 ಲಕ್ಷ ಕೋಟಿ ಖರ್ಚು ಮಾಡುತ್ತಿದೆ. ಒಮ್ಮೆಗೇ 1500 ವಿಮಾನಗಳಿಗೆ ಆರ್ಡರ್ ಕೊಟ್ಟ ಏಕೈಕ ರಾಷ್ಟ್ರ ಭಾರತವಾಗಿದೆ. ಬಲಿಷ್ಠ ಭಾರತವನ್ನು ಅಸ್ಥಿರಗೊಳಿಸಲೆಂದೇ ಪಾಕಿಸ್ತಾನ ಭಯೋತ್ಪಾದನೆ ಕೃತ್ಯ ನಡೆಸುತ್ತಿದೆ. ಆದರೆ, ಭಾರತ ಬಲಿಷ್ಠವಾಗಿದೆ ಇದ್ಯಾವುದಕ್ಕೂ ಜಗ್ಗುವುದಿಲ್ಲ. ಕೆಮ್ಮಿದರೆ ಸಾಕು ಭಾರತೀಯ ಸೇನೆ ಒಳ ನುಗ್ಗಿ ತಕ್ಕ ಶಾಸ್ತಿ ಮಾಡುತ್ತದೆ ಎಂದು ಜೋಶಿ ಗುಡುಗಿದರು.

ದೇಶದಲ್ಲಿ ಒಂದು ಕಡೆ ಭಯೋತ್ಪಾದನೆ ನಡೆಯುತ್ತಿದ್ದರೆ, ಇನ್ನೊಂದೆಡೆ ಸಮಾಜವನ್ನು ವಿಭಸುವಂತಹ ಪ್ರಯತ್ನ ನಡೆದಿದೆ. ಸಂವಿಧಾನ ಬದಲಾವಣೆ, ಮೀಸಲಾತಿ ಹಿಂಪಡೆಯುತ್ತಾರೆ ಎಂಬ ಕೂಗೆಬ್ಬಿಸುತ್ತಿದ್ದಾರೆ. ಸಶಕ್ತ ಭಾರತದಲ್ಲಿ ಏನು ಸಂದೇಶ ನೀಡಲು ಹೊರಟಿದ್ದಾರೆ ಇವರು ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಕಾಂಗ್ರೆಸ್ಸಿಗರನ್ನು ತರಾಟೆಗೆ ತೆಗೆದುಕೊಂಡರು.

# ಅನಧಿಕೃತ ಕಟ್ಟಡ, ನಿವೇಶನಗಳಿಗೆ ಬಿ–ಖಾತಾ ನೀಡುವ ಅವಧಿ 3 ತಿಂಗಳು ವಿಸ್ತರಣೆ: ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್

**ಬೆಂಗಳೂರು, ಮೇ.14–** ರಾಜ್ಯದ ಮಹಾನಗರ ಪಾಲಿಕೆಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಅನಧಿಕೃತ ಕಟ್ಟಡ ಮತ್ತು ನಿವೇಶನಗಳಿಗೆ ಬಿ–ಖಾತಾ ನೀಡುವ ಅವಧಿಯನ್ನು ಮುಂದಿನ ಮೂರು ತಿಂಗಳವರೆಗೆ ವಿಸ್ತರಿಸಲಾಗಿದೆ ಎಂದು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬಿ. ಎಸ್.ಸುರೇಶ್ ತಿಳಿಸಿದ್ದಾರೆ.

ಈ ಬಗ್ಗೆ ಬೆಂಗಳೂರಿನಲ್ಲಿ ಬುಧವಾರ ಪ್ರತಿಕ್ರಿಯೆ ನೀಡಿರುವ ಅವರು, ಮಹಾನಗರ ಪಾಲಿಕೆಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಅಂದರೆ, ಯಾವುದೇ ಪರವಾನಗಿ, ಭೂಪರಿವರ್ತನೆ ಮಾಡಿಸಿಕೊಳ್ಳದೇ, ನಕ್ಷೆ ಮಂಜೂರಾತಿ ಮಾಡಿಕೊಳ್ಳದೇ ಕಂದಾಯ ನಿವೇಶನಗಳಲ್ಲಿ ಕಟ್ಟಡ ಗಳನ್ನು ಕಟ್ಟಿಕೊಂಡಿದ್ದರೆ ಅಂತಹವರಿಗೆ ಅನುಕೂಲ ಮಾಡಿಕೊಡುವ ಉದ್ದೇಶ ದಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಬಿ–ಖಾತ ನೀಡಿ ಸಕ್ರಮಗೊಳಿಸುವ ಮಹತ್ವದ ನಿರ್ಧಾರ ಕೈಗೊಂಡಿತ್ತು ಎಂದಿದ್ದಾರೆ.

ಇದರನ್ವಯ ನಾಗರಿಕರಿಗೆ ಒಂದು ಬಾರಿಯ ಅವಕಾಶವನ್ನು ನೀಡಲಾಗಿತ್ತು.



> **ಎಲ್ಲಾ ಅರ್ಹ ನಾಗರಿಕರು ಮತ್ತು ಅನಧಿಕೃತ ನಿರ್ಮಾಣಗಳನ್ನು ಹೊಂದಿರುವವರಿಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಬಿ–ಖಾತಾ ವಿತರಣೆಗೆ ಒಂದು ಬಾರಿಯ ಅವಕಾಶವನ್ನು ಕಲ್ಪಿಸಲಾಗಿದೆ. ಈ ಅವಧಿಯನ್ನು ಮುಂದಿನ ಮೂರು ತಿಂಗಳವರೆಗೆ ವಿಸ್ತರಣೆ ಮಾಡುವ ಮಹತ್ವದ ನಿರ್ಧಾರವನ್ನು ಕೈಗೊಳ್ಳಲಾಗಿದೆ. –ಬಿ.ಎಸ್. ಸುರೇಶ್**

ಮನೆಗಳು/ನಿವೇಶನಗಳಿವೆ ಎಂದು ಅಂದಾಜಿಸಲಾಗಿದೆ.

ಸರ್ಕಾರ ಒಂದು ಬಾರಿಯ ಅವಕಾಶ ನೀಡಿದ ನಂತರ ನಾಗರಿಕರು ಉತ್ತಮ ರೀತಿಯಲ್ಲಿ ಪ್ರತಿಕ್ರಿಯೆ ವ್ಯಕ್ತಪಡಿಸಿ ತಮ್ಮ

**ಬಿ-ಖಾತಾ ಅವಧಿ 3 ತಿಂಗಳವರೆಗೆ ವಿಸ್ತರಣೆ**

ನಗರಾಭಿವೃದ್ಧಿ ಸಚಿವ ಬಿ.ಎಸ್.ಸುರೇಶ ಹೇಳಿಕೆ:

ಇದುವರೆಗೆ 10 ಲಕ್ಷ ಅರ್ಜಿ ಸಲ್ಲಿಕೆ
2 ಲಕ್ಷ ಬಿ–ಖಾತಾ ವಿತರಣೆ
ಜಿಪಿಎ, ಅಗ್ರೀಮೆಂಟ್ ದಾರರಿಗೂ ಬಿ–ಖಾತಾ ವಿತರಣೆಗೆ ಚಿಂತನೆ

ಆಸ್ತಿಗಳಿಗೆ ಬಿ–ಖಾತಾ ಪಡೆದುಕೊಳ್ಳುತ್ತಿದ್ದಾರೆ ಎಂದು ಸಚಿವರು ತಿಳಿಸಿದ್ದಾರೆ.

**2 ಲಕ್ಷ ಬಿ–ಖಾತಾ ವಿತರಣೆ**

ಸರ್ಕಾರ ನೀಡಿದ ಅವಕಾಶವನ್ನು ಬಳಸಿಕೊಂಡಿರುವ ಸುಮಾರು 10 ಲಕ್ಷ ಆಸ್ತಿಗಳಿಗೆ ಬಿ–ಖಾತಾ ಕೋರಿ ಅರ್ಜಿ ಸಲ್ಲಿಸಲಾಗಿದ್ದು, ಈ ಪೈಕಿ 2 ಲಕ್ಷ ಆಸ್ತಿಗಳಿಗೆ ಬಿ–ಖಾತೆಗಳನ್ನು ವಿತರಿಸಲಾಗಿದೆ. ಉಳಿದ ಅರ್ಜಿಗಳ ಪರಿಶೀಲನೆ ನಡೆಯುತ್ತಿದ್ದು, ಹಂತಹಂತವಾಗಿ ಬಿ–ಖಾತಾ ವಿತರಿಸಲಾಗುತ್ತಿದೆ ಎಂದು ಅವರು ಹೇಳಿದ್ದಾರೆ.

**ಇನ್ನೂ ಮೂರು ತಿಂಗಳು ವಿಸ್ತರಣೆ**

ಸರ್ಕಾರದ ಈ ನಾಗರಿಕ ಸ್ನೇಹಿ ಸೌಲಭ್ಯವನ್ನು ಇನ್ನೂ ಹೆಚ್ಚಿನ ಜನರಿಗೆ ತಲುಪಿಸಬೇಕೆಂಬ ಉದ್ದೇಶದಿಂದ ಮಹಾನಗರ ಪಾಲಿಕೆಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬಿ–ಖಾತಾ ವಿತರಣೆ ಪ್ರಕ್ರಿಯೆಯನ್ನು ಇನ್ನೂ ಮೂರು ತಿಂಗಳ ಕಾಲ ವಿಸ್ತರಣೆ ಮಾಡಲು ನಿರ್ಧರಿಸಲಾಗಿದೆ ಎಂದು ಸಚಿವ ಬಿ.ಎಸ್.ಸುರೇಶ ತಿಳಿಸಿದ್ದಾರೆ.

## ಜಿಪಿಎ, ಕರಾರುದಾರರಿಗೂ ಸೌಲಭ್ಯ

**ಇನ್ನು ನಿವೇಶನ ಅಥವಾ ಕಟ್ಟಡಗಳನ್ನು ಖರೀದಿಸಲು ಮುಂದಾಗಿ ಜಿಪಿಎ ಅಥವಾ ಅಗ್ರೀಮೆಂಟ್ ಮಾಡಿಕೊಂಡಿರುವ ನಾಗರಿಕರಿಗೂ ಬಿ–ಖಾತಾ ವಿತರಣೆಗೆ ಗಂಭೀರ ಚಿಂತನೆ ನಡೆಸಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ. ಈ ಸಂಬಂಧ ಸದ್ಯದಲ್ಲೇ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ಅಂತಿಮ ನಿರ್ಧಾರ ಕೈಗೊಳ್ಳಲಾಗುತ್ತದೆ. ಇದರಿಂದ ಜಿಪಿಎ ಅಥವಾ ಕರಾರುದಾರರಿಗೂ ಅನುಕೂಲವಾಗಲಿದೆ ಎಂದು ಅವರು ಹೇಳಿದ್ದಾರೆ.**

# ಪಾಕಿಸ್ತಾನಕ್ಕೆ ಸಹಾಯ ಆಗುವಂತೆ ಮಾತನಾಡುವ ಕಾಂಗ್ರೆಸ್ ನಾಯಕರು: ಸಿ.ಟಿ.ರವಿ

**ಬೆಂಗಳೂರು, ಮೇ.14–** ದೇಶದ ವಿಚಾರದಲ್ಲೂ ಕಾಂಗ್ರೆಸ್ಸಿಗರು ಪಾಕಿಸ್ತಾನಕ್ಕೆ ಸಹಾಯ ಆಗುವಂತೆ ಮಾತನಾಡುತ್ತಾರೆ. ಯಾಕೆ ಹೀಗೆ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಅವರು ಪ್ರಶ್ನಿಸಿದ್ದಾರೆ.

ಸುದ್ದಿಗಾರರ ಜೊತೆ ಮಾತನಾಡಿದ ಅವರು, ನಮಗೆ ನಮ್ಮ ಸೈನಿಕರ ಬಗ್ಗೆ ಹೆಮ್ಮೆ ಇದೆ. ನಾವು ಯಾವತ್ತೂ ನಮ್ಮ ಸೈನಿಕರ ಕುರಿತು ಅಪನಂಬಿಕೆ ವ್ಯಕ್ತಪಡಿಸಿಲ್ಲ. ಸೈನಿಕರ ಕ್ರೆಡಿಟ್ ಕಿತ್ತುಕೊಳ್ಳುವ ಕೆಲಸವನ್ನು ಯಾರೂ ಮಾಡಿಲ್ಲ; ಯುದ್ಧರಂಗಕ್ಕೆ ಹೋದವರು ಸೈನಿಕರೇ. ಕಾಂಗ್ರೆಸ್ಸಿನವರು ಹಿಂದೆ ಸರ್ಜಿಕಲ್ ಸ್ಟ್ರೈಕ್ ಆದಾಗ ಸಾಕ್ಷಿ ಕೇಳಿದ್ದೀರಲ್ಲವೇ? ಆಗ ಸೈನಿಕರ ಕುರಿತು ಅಪನಂಬಿಕೆ ವ್ಯಕ್ತಪಡಿಸಿದ್ದೀರಲ್ಲವೇ ಎಂದು ಪ್ರಶ್ನೆಯನ್ನು ಮುಂದಿಟ್ಟರು.

ನಿಮಗೆ ಆಗ ಸೈನಿಕರ ಬಗ್ಗೆ ನಂಬಿಕೆ ಎಲ್ಲಿ ಹೋಗಿತ್ತು? ಎಂದರಲ್ಲದೆ, ನಾವು ನಮ್ಮ ಸೈನಿಕರನ್ನು ನಂಬುತ್ತೇವೆ; ಅವರ ಬಗ್ಗೆ ನಮಗೆ ಹೆಮ್ಮೆಯೂ ಇದೆ ಎಂದು ನುಡಿದರು. 1962ರ ಭಾರತ– ಚೀನಾ ಯುದ್ಧವನ್ನು ಹೊರತುಪಡಿಸಿ ಇನ್ಯಾವುದೇ ಯುದ್ಧದಲ್ಲಿ ನಮ್ಮ ಸೈನಿಕರು ಯುದ್ಧಭೂಮಿಯಲ್ಲಿ ಸೋತಿಲ್ಲ ಎಂದು ವಿವರಿಸಿದರು.

1948ರಲ್ಲಿ ಯುದ್ಧದ ವೇಳೆ ಕೇವಲ 48 ಗಂಟೆಗಳಲ್ಲಿ ಪಾಕ್ ಆಕ್ರಮಿತ ಕಾಶ್ಮೀರವನ್ನು (ಪಿಒಕೆ) ವಶಕ್ಕೆ ಪಡೆಯುತ್ತೇವೆ ಎಂದು ಸೈನಿಕರು ಕೇಳಿದ್ದರು. ಯಾಕೆ ಆಗ ಯುದ್ಧ ನಿಲ್ಲಿಸಿದಿರಿ?. ಪರಿಣಾಮ ಏನಾಯಿತು, ನಮ್ಮ ಕಾಶ್ಮೀರದ ಮೂರನೇ ಒಂದು ಭಾಗ ಪಾಕಿಸ್ತಾನದ ಕೈವಶವಾಯಿತು. ಇವತ್ತಿಗೂ ಪಾಕಿಸ್ತಾನದ ಕೈಯಲ್ಲೇ ಇದೆ. ಇದಕ್ಕೆ ಕಾರಣ ಯಾರು ನಮ್ಮ ಸೈನಿಕರಲ್ಲ; ಆಗ, ಯುದ್ಧವಿರಾಮ ಬೇಡವೆಂದು ಜನರಲ್ ತಿಮ್ಮಯ್ಯನವರು ಹೇಳಿದ್ದರು; ಹಾಗೂ ಸಾಹಸ ಪ್ರದರ್ಶನ ಮಾಡಿದ್ದರು ಎಂದು ಸಿ.ಟಿ.ರವಿ ಅವರು ತಿಳಿಸಿದರು.

1965ರ ಯುದ್ಧದಲ್ಲಿ ನಮ್ಮ ಸೈನ್ಯ ಕರಾಚಿ, ಲಾಹೋರ್‌ವರೆಗೆ ಹೋಗಿತ್ತು. ಅದು ನಮಗೆ ಹೆಮ್ಮೆಯ ವಿಚಾರ. ತಾಷ್ಕೆಂಟ್ ಸಂಧಾನದ ಮೇಜಿನಲ್ಲಿ ನಾವು ಗೆದ್ದಿದ್ದನ್ನೆಲ್ಲ ಕಳಕೊಳ್ಳ ಬೇಕಾಯಿತು. ಅಷ್ಟು ಮಾತ್ರವಲ್ಲ; ನಮ್ಮ ಹೆಮ್ಮೆಯ ಪ್ರಧಾನಮಂತ್ರಿ ಲಾಲ್ ಬಹದ್ದೂರ್ ಶಾಸ್ತ್ರಿಯವರನ್ನೂ ಕಳಕೊಂಡೆವು ಎಂದು ಮಾಹಿತಿ ನೀಡಿದರು. ಪ್ರಧಾನಿಯ ಸಂಶಯಾಸ್ಪದ ಸಾವು ಆಗಿದ್ದರೂ ಮರಣೋತ್ತರ ಪರೀಕ್ಷೆಯೂ ನಡೆಯಲಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು. ಫಲಾನುಭವಿ ಯಾರು ಎಂದು ಕೇಳಿದರು.

ಕಾಂಗ್ರೆಸ್ಸಿಗರ ಹೇಳಿಕೆಯ ಧಾಟಿಯನ್ನು ಗಮನಿಸಿದರೆ, ಅವರು ಬಿಜೆಪಿ ಮತ್ತು ಪಾಕಿಸ್ತಾನದ ನಡುವೆ ಯುದ್ಧ ಎಂದು ಭಾವಿಸಿದಂತೆ ಕಾಣುತ್ತಿದೆ. ಭಯೋತ್ಪಾದಕರು ರಾಜಕೀಯ ಪಕ್ಷಗಳನ್ನು ಗುರಿಯಾಗಿಸಿ ದಾಳಿ ಮಾಡಿಲ್ಲ. ರಾಜಕೀಯ ಪಕ್ಷಕ್ಕೆ ಮೀರಿ ಭಾರತದ ಸಾರ್ವಭೌಮತೆ, ನಮ್ಮ ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು, ಇಲ್ಲಿನ ಸರ್ವಧರ್ಮ, ಸಮಭಾವ, ಸಹಬಾಳ್ವೆಯನ್ನು ಪ್ರಶ್ನಿಸಿ ಹತ್ಯೆ ನಡೆಸಿದ್ದಾರೆ. ಈ ಮೂಲಕ ಯುದ್ಧಕ್ಕೆ ಪ್ರಚೋದನೆ ನೀಡಿದ್ದಾರೆ ಎಂದು ಟೀಕಿಸಿದರು.



1971ರಲ್ಲಿ ಬಾಂಗ್ಲಾ ವಿಮೋಚನೆ ಆಯಿತು. 93 ಸಾವಿರ ಪಾಕಿಸ್ತಾನಿ ಸೈನಿಕರನ್ನು ನಮ್ಮ ಹೆಮ್ಮೆಯ ಸೈನಿಕರು ಸೆರೆ ಹಿಡಿದಿದ್ದರು. ಪ್ರಧಾನಿ, ರಕ್ಷಣಾ ಸಚಿವರು, ರಾಜಕೀಯ ನೇತಾರರು ಯುದ್ಧಭೂಮಿಗೆ ಹೋಗಿರಲಿಲ್ಲ. ಶಿಮ್ಲಾ ಒಪ್ಪಂದ ಆಗಿ ಬೇಷರತ್ತಾಗಿ ಬಿಡುಗಡೆ ಮಾಡಿದ್ದರು. ನಮ್ಮ 54 ಜನ ಸೈನಿಕರ ಬಿಡುಗಡೆ ಆಗಲಿಲ್ಲ. ಅವರು ಏನಾದರು? ಇವತ್ತಿಗೂ ಪತ್ತೆ ಇಲ್ಲ ಎಂದು ಸಿ.ಟಿ.ರವಿ ಅವರು ಕಳವಳ ವ್ಯಕ್ತಪಡಿಸಿದರು.

**ಪಿಒಕೆ ವಾಪಸ್ ಸಿಗಲಿಲ್ಲ;** ಎಲ್‌ಒಸಿ ಒಪ್ಪಬೇಕಾಯಿತು. ಸೈನಿಕರು ಗೆದ್ದಿದ್ದನ್ನು ಸಂಧಾನ ಮೇಜಿನಲ್ಲಿ ಸೋತದ್ದನ್ನು ಏನೆನ್ನಬೇಕು? ಯಾರು ಸೋತವರು ಎಂದರು.

ಇನ್ನೊಂದೆರಡು ದಿನ ಹಣ್ಣುಗಾಯಿ ನೀರುಗಾಯಿ ಮಾಡಿ ಪಾಕಿಸ್ತಾನ ಇರುವವರೆಗೆ ಭಾರತದ ಕಡೆ ಕೆಂಗಣ್ಣಿನಿಂದ ನೋಡಬಾರದೆಂದು ನಮಗೂ ಅನಿಸಿತ್ತು. ನಾಯಿ ಬಾಲ ಡೊಂಕು. ಆ ಬಾಲವನ್ನೇ ಕತ್ತರಿಸಬೇಕೆಂದು ಅನಿಸಿತ್ತು. ಯುದ್ಧವೆಂದರೆ ಬಾಲಿವುಡ್ ಸಿನಿಮಾದಂತಲ್ಲ ಎಂದು ಸೇನಾಧಿಕಾರಿಗಳು ಉತ್ತರ ಕೊಟ್ಟರು. ಪ್ರಧಾನಿ, ರಾಷ್ಟ್ರಪತಿಗಳು ಸೇನೆಗೆ ಪೂರ್ಣ ಸ್ವಾತಂತ್ರ್ಯ ಕೊಟ್ಟಿದ್ದಾರೆ. ಈಗ ಟೀಕೆ ಮಾಡುತ್ತಿರುವ ಕಾಂಗ್ರೆಸ್ ಸ್ನೇಹಿತರೇ, ಮುಂಬೈನಲ್ಲಿ ದಾಳಿ ನಡೆಯಿತಲ್ಲವೇ ನೀವು ಆಗ ಪ್ರತಿದಾಳಿಗೆ ಸೈನ್ಯಕ್ಕೆ ಸ್ವಾತಂತ್ರ್ಯ ನೀಡಿದ್ದೀರಾ ಎಂದು ಕೇಳಿದರು.

ಹಲವು ಬಾರಿ ಭಯೋತ್ಪಾದಕ ದಾಳಿಗಳಾದಾಗ ನೀವು ಸೈನ್ಯಕ್ಕೆ ಸ್ವಾತಂತ್ರ್ಯ ಕೊಟ್ಟಿದ್ದೀರಾ ಕಲ್ಲು ಹೊಡೆದವರಿಗೆ ವಾಪಸ್ ಗುಂಡು ಹೊಡೆಯುವ ಅಧಿಕಾರವನ್ನೂ ನೀವು ಕೊಟ್ಟಿಲ್ಲವಲ್ಲ ಎಂದು ಪ್ರಶ್ನೆಯನ್ನು ಮುಂದಿಟ್ಟರು. ಭಾರತಕ್ಕೆ, ಭಾರತದ ಧ್ವಜಕ್ಕೆ ಅಪಮಾನ ಮಾಡಿ ಪಾಕಿಸ್ತಾನಕ್ಕೆ ಜೈಕಾರ ಕೂಗಿದರೂ ನಮ್ಮ ಸೈನಿಕರು ಅಪಮಾನ ಸಹಿಸಿಕೊಂಡಿರಬೇಕಿತ್ತು. ಇದೆಂಥ ದೋಸ್ತಿ ಎಂದು ಕೇಳಿದರು.

ಇಡೀ ದೇಶವು ಯುದ್ಧ ಮಾಡಬೇಕೆಂದು ಹೇಳುತ್ತಿದ್ದಾಗ ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಯುದ್ಧ ಬೇಡ, ಶಾಂತಿ ಬೇಕು ಎಂದಿದ್ದರು. ಇವರ ಹೇಳಿಕೆ ಪಾಕಿಸ್ತಾನದಲ್ಲಿ ಸಿದ್ದರಾಮಯ್ಯ ಸಾಹಬ್ ಐಸಾ ಕಹಾ ಎಂದು ಲೀಡ್ ಸುದ್ದಿಯಾಗಿತ್ತು. ಇದಕ್ಕೂ ಮುಂಚೆ ಪುಲ್ವಾಮಾದಲ್ಲಿ ನಮ್ಮ 58ಕ್ಕೂ ಹೆಚ್ಚು ಸೈನಿಕರು ಹುತಾತ್ಮರಾಗಿದ್ದರು. ಆಗ, ಆ ಭಯೋತ್ಪಾದಕರ ದಾಳಿಯ ಬಗ್ಗೆಯೇ ಸಂಶಯ ವ್ಯಕ್ತಪಡಿಸಿದ್ದ ಕಾಂಗ್ರೆಸ್ಸಿಗರು ಇದೊಂದು ಆಂತರಿಕ ಪಿತೂರಿ ಎಂಬಂತೆ ಮಾತನಾಡಿದ್ದರು ಎಂದು ಆಕ್ಷೇಪಿಸಿದರು. ಪಾಕಿಸ್ತಾನದವರು ವಿಶ್ವ ಸಂಸ್ಥೆಯಲ್ಲಿ ಭಾರತದ ವಿರುದ್ಧ ಇವರ ಮಾತುಗಳನ್ನೇ ಬಳಸಿದ್ದರು ಎಂದು ವಿವರಿಸಿದರು.



ಧಾರವಾಡದ ಕೃಷಿ ವಿಜ್ಞಾನ ವಿಶ್ವವಿದ್ಯಾಲಯದ (ಯುಎಎಸ್) 38 ನೇ ಘಟಿಕೋತ್ಸವ ಸಮಾರಂಭದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಅವರು ಮುತ್ತಣ್ಣ ಪೂಜಾರ್, ಶಂಕರ್ ಲಂಗತಿ ಮತ್ತು ದ್ಯಾಮನಗೌಡ ಪಾಟೀಲ್ ಅವರಿಗೆ ಗೌರವ ಡಾಕ್ಟರೇಟ್ ಪ್ರದಾನ ಮಾಡಿದರು.

## ಪಾಕ್ ವಿರುದ್ಧ ಭಾರತದಿಂದ ಆಪರೇಷನ್ ಸಿಂಧೂರ

# ಪಾಕಿಸ್ತಾನಿಗಳಿಗಿಂತ ಕಾಂಗ್ರೆಸ್ ಪಕ್ಷದ ನಾಯಕರಿಗೆ ಹೆಚ್ಚು ನೋವು: ಬಿಜೆಪಿ ವ್ಯಂಗ್ಯ

**ಬೆಂಗಳೂರು, ಮೇ.14–** ಪಹಲ್ಗಾಮ್ ದಾಳಿಗೆ ಪ್ರತೀಕಾರವಾಗಿ ಭಾರತ ಪಾಕಿಸ್ತಾನದ ವಿರುದ್ಧ ನಡೆಸಿದ ಅಪರೇಷನ್ ಸಿಂಧೂರ್ ಕಾರ್ಯಾಚರಣೆ ಪಾಕಿಸ್ತಾನಿ ಗಳಿಗಿಂತ ಕಾಂಗ್ರೆಸ್ ಪಕ್ಷದ ನಾಯಕರಿಗೆ ಹೆಚ್ಚು ನೋವು ಮಾಡಿರುವಂತೆ ಕಾಣಿಸುತ್ತಿದೆ ಎಂದು ಬಿಜೆಪಿ ತಿರುಗೇಟು ನೀಡಿದೆ.

ಈ ಬಗ್ಗೆ ಎಕ್ಸ್ ಪೋಸ್ಟ್‌ನಲ್ಲಿ ಬರೆದು ಕೊಂಡಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು, ಇದು ತುಂಬಾ ವಿಪರ್ಯಾಸ. ಕೆಲವು ಕಾಂಗ್ರೆಸ್ ನಾಯಕರು ಮಾಡಿದ ಹೇಳಿಕೆಗಳು ಪಾಕಿಸ್ತಾನ ಮಿಲಿಟರಿಯ ಅಧಿಕೃತ ಮಾಹಿತಿಗಳಲ್ಲಿ ಕಾಣಿಸಿ ಕೊಂಡಿವೆ. ಇದನ್ನು ಅದರ ನಿರೂಪಣೆಯನ್ನು ದೃಢೀಕರಿಸಲು ಮತ್ತು ಪುಷ್ಟಿಕರಿಸಲು ಬಳಸಲಾಗುತ್ತದೆ. ಸಿಎಂ ಸಿದ್ದರಾಮಯ್ಯ ಕೂಡ ಭಾರತದ ಮಿಲಿಟರಿ ಕ್ರಮಗಳನ್ನು ವಿರೋಧಿಸಿದ್ದಕ್ಕಾಗಿ ಪಾಕಿಸ್ತಾನಿ ಮಾಧ್ಯಮ ಗಳಿಂದ ಪ್ರಶಂಸೆಯನ್ನು ಪಡೆದರು. ಆದರೆ, ಹಿರಿಯ ಕಾಂಗ್ರೆಸ್ ನಾಯಕರೊಬ್ಬರು ಪಾಕಿಸ್ತಾನವು ಬಿಜೆಪಿಯ ಶತ್ರು, ಕಾಂಗ್ರೆಸ್ ನದ್ದಲ್ಲ ಎಂದು ತೋರಿಸುವಷ್ಟು ದೂರ ಹೋಗಿದ್ದಾರೆಂದು ಹೇಳಿದ್ದಾರೆ.

ಪಾಕಿಸ್ತಾನದ ಬಗ್ಗೆ ಕಾಂಗ್ರೆಸ್ ಪಕ್ಷದ ಮೃದು ನಿಲುವನ್ನು ಗಮನಿಸಿದರೆ, ನಮ್ಮ ಸಶಸ್ತ್ರ ಪಡೆಗಳ ನಿಸ್ಸಂದಿಗ್ಧ ವಿಜಯವನ್ನು ದುರ್ಬಲ ಗೊಳಿಸುವ ಮೂಲಕ ಅವರು ನಿಖರವಾಗಿ ಏನನ್ನು ಸಾಧಿಸಲು ಪ್ರಯತ್ನಿಸುತ್ತಿದ್ದಾರೆ ಪ್ರಧಾನಿ ಮೋದಿ ವಿರುದ್ಧದ ತಮ್ಮ ನಿರಂತರ ಪ್ರಚಾರದಲ್ಲಿ, ನಮ್ಮ ಪಡೆಗಳು ಪ್ರದರ್ಶಿಸಿದ ಅಪ್ರತಿಮ ಶೌರ್ಯ ಮತ್ತು ಕಾರ್ಯತಂತ್ರದ ಪ್ರತಿಭೆಯನ್ನು ಕಾಂಗ್ರೆಸ್ ನಿರ್ಲಕ್ಷಿಸಿದಂತೆ ತೋರುತ್ತದೆ. ನಮ್ಮ ಸಾಧನೆಗಳ ಪ್ರಮಾಣವನ್ನು ಅವರು ಅರಿತುಕೊಂಡಿದ್ದಾರೆಯೇ ಎಂದು ಪ್ರಶ್ನಿಸಿದರು.



ಆಪರೇಷನ್ ಸಿಂಧೂರ್ ಅದ್ಭುತ ಯಶಸ್ಸನ್ನು ಕಂಡಿದೆ. ಭಾರತೀಯ ಸಶಸ್ತ್ರ ಪಡೆಗಳು ಪಾಕಿಸ್ತಾನ ದೊಳಗಿನ ಭಯೋತ್ಪಾದಕ ಮೂಲ ಸೌಕರ್ಯಗಳ ಮೇಲೆ ಆಳವಾಗಿ ದಾಳಿ ಮಾಡಿ, ಹೆಚ್ಚಿನ ಮೌಲ್ಯದ ಗುರಿಗಳನ್ನು ನಿರ್ಮೂಲನೆ ಮಾಡಿದೆ.

## ಖಾಸಗಿ ಹಿಡಿತದಿಂದ 108 ಅಂಬ್ಯುಲೆನ್ಸ್ ಮುಕ್ತ

# ರಾಜ್ಯ ಸರ್ಕಾರದಿಂದಲೇ ಅಂಬ್ಯುಲೆನ್ಸ್ ಸೇವೆ: ಸಚಿವ ದಿನೇಶ್ ಗುಂಡೂರಾವ್

**ಬೆಂಗಳೂರು, ಮೇ.14–** 108 ಅಂಬ್ಯುಲೆನ್ಸ್ ಗಳ ನಿರ್ವಹಣೆಯನ್ನ ಖಾಸಗಿ ಏಜನ್ಸಿಗಳ ಹಿಡಿತದಿಂದ ತಪ್ಪಿಸಿ ರಾಜ್ಯ ಸರ್ಕಾರ ತನ್ನ ಹಿಡಿತಕ್ಕೆ ತೆಗೆದುಕೊಳ್ಳಲಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 108 ಅಂಬ್ಯುಲೆನ್ಸ್‌ಗಳನ್ನು ಇಲ್ಲಿಯ ವರೆಗೆ ಖಾಸಗಿ ಏಜನ್ಸಿಗಳು ನಿರ್ವಹಿಸುತ್ತಿದ್ದವು. ಈ ವ್ಯವಸ್ಥೆಯಲ್ಲಿ ಸಾಕಷ್ಟು ಸಮಸ್ಯೆ ಗಳಿದ್ದವು. ಹೀಗಾಗಿ ಇನ್ಮುಂದೆ ರಾಜ್ಯ ಸರ್ಕಾರವೇ 108 ಅಂಬ್ಯುಲೆನ್ಸ್‌ಗಳ ನಿರ್ವಹಣೆಗೆ ಸಕಲ ಸಿದ್ಧತೆಗಳನ್ನು ಮಾಡಿಕೊಂಡಿದ್ದು, ಈಗಾಗಲೇ ಚಾಮರಾಜ ನಗರ ಜಿಲ್ಲೆಯಲ್ಲಿ ಪ್ರಾಯೋಗಿಕ ಕಾರ್ಯಾಚರಣೆ ಯಶಸ್ವಿಯಾಗಿ ನಡೆಸಲಾಗಿದೆ. 108 ಅಂಬ್ಯುಲೆನ್ಸ್‌ಗಳ ಸೇವೆ ಸಾರ್ವಜನಿಕರ ಆರೋಗ್ಯ ರಕ್ಷಣೆಯಲ್ಲಿ ಬಹು ಮುಖ್ಯವಾದದ್ದು. ಖಾಸಗಿ ಏಜನ್ಸಿ ಯಿಂದ ಇದರ ನಿರ್ವಹಣೆ ಸಮರ್ಪಕ ವಾಗಿ ನಡೆಯುತ್ತಿರಲಿಲ್ಲ. ಸರ್ಕಾರದಿಂದ ಏಜನ್ಸಿಗೆ ಹಣ ಪಾವತಿಯಾದರೂ, ಅಂಬ್ಯುಲೆನ್ಸ್ ಸಿಬ್ಬಂದಿಗಳಿಗೆ ಸರಿಯಾದ ಸಮಯಕ್ಕೆ ವೇತನ ಪಾವತಿಯಾಗುತ್ತಿರಲಿಲ್ಲ. ಸರ್ಕಾರ ಹಲವು ಬಾರಿ ಮದ್ಯಪ್ರವೇಶಿಸಿ ಅಂಬ್ಯುಲೆನ್ಸ್ ಡ್ರೈವರ್ ಗಳ ಸಮಸ್ಯೆಯನ್ನ ಬಗೆಹರಿಸಬೇಕಾಗಿತ್ತು. ಸರ್ಕಾರವೇ ನಿರ್ವಹಣೆ ಮಾಡುವುದರಿಂದ ಇನ್ಮುಂದೆ ಈ ಎಲ್ಲ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

108 ಅಂಬ್ಯುಲೆನ್ಸ್ ಗಳ ಮಾಲಿಕತ್ವ ಸರ್ಕಾರದ ಬಳಿ ಇದೆ. ಅಂಬ್ಯುಲೆನ್ಸ್ ಗಳಿಗೆ ಡಿಸೇಲ್, ಪೆಟ್ರೋಲ್‌ನಿಂದ ಹಿಡಿದು ವಾಹನ ಚಾಲಕರ ವೇತನವನ್ನು ಕೂಡಾ ಸರ್ಕಾರವೇ ನೀಡುತ್ತಿತ್ತು. ಕೇವಲ ಒಂದು ಕಮಾಂಡ್ ಸೆಂಟರ್ ಮೂಲಕ ಖಾಸಗಿ ಏಜನ್ಸಿಯವರು ನಿರ್ವಹಣೆ ಮಾಡುತ್ತಿದ್ದರು.

ಅಲ್ಲದೇ ವ್ಯವಸ್ಥೆಯಲ್ಲೂ ಸುಧಾರಣೆ ತರಬಹುದು ಎಂಬ ಕಾರಣಕ್ಕೆ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಈಗಾಗಲೇ ಚಾಮರಾಜ ನಗರ ಜಿಲ್ಲೆಯಲ್ಲಿ ಪ್ರಾಯೋಗಿಕವಾಗಿ 108 ಅಂಬ್ಯುಲೆನ್ಸ್ ನಿರ್ವಹಣೆಯನ್ನು ಆರೋಗ್ಯ ಇಲಾಖೆ ಯಶಸ್ವಿಯಾಗಿ ನಡೆಸಿದೆ. ಮುಂದಿನ ತಿಂಗಳಲ್ಲಿ ರಾಜ್ಯದ ಎಲ್ಲ ಸ್ಟೇಟ್ ಅಂಬ್ಯುಲೆನ್ಸ್ ಗಳನ್ನ ಇಲಾಖೆ ತನ್ನ ನಿರ್ವಹಣೆಯ ವ್ಯಾಪ್ತಿಗೆ ತೆಗೆದು ಕೊಳ್ಳಲಿದೆ. ಇದಾದ ಬಳಿಕ ಮೂರು ತಿಂಗಳ ಒಳಗಾಗಿ 108 ಅಂಬ್ಯುಲೆನ್ಸ್ ಗಳನ್ನು ಆರೋಗ್ಯ ಇಲಾಖೆ ತನ್ನ ಕಮಾಂಡ್ ಕಂಟ್ರೋಲ್ ಸೆಂಟರ್ ವ್ಯಾಪ್ತಿಗೆ ತೆಗೆದುಕೊಂಡು ನಿರ್ವಹಣೆ ಕಾರ್ಯ ಕೈಗೆತ್ತಿಕೊಳ್ಳಲಿದೆ.

## ರಾಷ್ಟ್ರೀಯ ಆರೋಗ್ಯ ಅಭಿಯಾನ

# ವೈದ್ಯರು, ದಾದಿಯರ ವೇತನ ಶೇ.25ರಷ್ಟು ಹೆಚ್ಚಳ

**ಬೆಂಗಳೂರು, ಮೇ.14–**ರಾಜ್ಯ ಸರ್ಕಾರದಿಂದ ಹೊಸದಾಗಿ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಗುತ್ತಿಗೆಯಾಧಾರದ ಮೇಲೆ ನೇಮಕಗೊಳ್ಳುವಂತ ವೈದ್ಯರು, ಸ್ಟಾಫ್ ನರ್ಸ್‌ಗಳಿಗೆ ಭರ್ಜರಿ ಸಿಹಿ ಸುದ್ದಿ ನೀಡಿದೆ. ಅದೇ ಈ ಹಿಂದೆ ಇದ್ದಂತ ವೇತನವನ್ನು ಪರಿಷ್ಕರಿಸಿದೆ. ಶೇ.25ರಷ್ಟು ವೇತನವನ್ನು ಹೆಚ್ಚಳ ಮಾಡಿದೆ. ರಾಜ್ಯ ಆರೋಗ್ಯ ಇಲಾಖೆಯಿಂದ ಇಂದು ಪತ್ರಿಕಾ ಪ್ರಕಟಣೆಯಲ್ಲಿ ಮಾಹಿತಿ ಹಂಚಿಕೊಂಡಿದ್ದು, ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮದಡಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಂಬಿಬಿಎಸ್ ವೈದ್ಯರು, ತಜ್ಞ ವೈದ್ಯರು ಹಾಗೂ SNCU ಮತ್ತು ICU ದಲ್ಲಿ ಕಾರ್ಯ ನಿರ್ವಹಿಸುವ ಸ್ಟಾಫ್ ನರ್ಸ್ ಗಳ ವೇತನ ಪರಿಷ್ಕರಿಸಿ ಗಣನೀಯವಾಗಿ ಹೆಚ್ಚಳ ಮಾಡಲಾಗಿದೆ ಎಂದಿದೆ.



621 ನೇ ಹಜರತ್ ಖ್ವಾಜಾ ಬಂದೇ ನವಾಜ್ ಉರುಸ್ ಅಂಗವಾಗಿ ಬುಧವಾರ ಕಲಬುರಗಿಯಲ್ಲಿ ಮುಸ್ಲಿಂ ಸಮುದಾಯದವರಿಂದ ಬೃಹತ್ ಮೆರವಣಿಗೆ ನಡೆಯಿತು.

# ಕದನ ವಿರಾಮ ಅತ್ಯಂತ ಸೂಕ್ಷ್ಮ ವಿಚಾರ, ಬಹಿರಂಗವಾಗಿ ಚರ್ಚೆ ಮಾಡಲ್ಲ: ಖರ್ಗೆ

**ಕಲಬುರಗಿ, ಮೇ.14–** ಕದನ ವಿರಾಮ ದೇಶದ ರಕ್ಷಣಾ ವಿಷಯಕ್ಕೆ ಸಂಬಂಧಿಸಿದ ಅತ್ಯಂತ ಸೂಕ್ಷ್ಮ ವಿಚಾರವಾಗಿದ್ದು, ನಾನು ಈ ಬಗ್ಗೆ ಬಹಿರಂಗವಾಗಿ ಚರ್ಚಿಸುವುದಿಲ್ಲ, ಸರ್ವಪಕ್ಷ ಸಭೆಯಲ್ಲಿ ಪ್ರಸ್ತಾಪ ಮಾಡುತ್ತೇನೆ ಎಂದು ರಾಜ್ಯಸಭೆ ವಿರೋಧ ಪಕ್ಷದ ನಾಯಕರೂ ಆದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸಂಧಾನಕ್ಕೆ ಮಣಿದಿದ್ದಾರೆ ಎಂಬ ಚರ್ಚೆಗಳ ಬಗ್ಗೆ ತಾವು ಯಾವುದೇ ಪ್ರತಿಕ್ರಿಯೆ ನೀಡಲು ಬಯಸುವುದಿಲ್ಲ. ಟ್ರಂಪ್ ಕದನ ವಿರಾಮದ ಕ್ರೆಡಿಟ್ ತೆಗೆದುಕೊಳ್ಳಲು ಮಾತನಾಡುತ್ತಿದ್ದಾರೆ. ಇಲ್ಲ ಎಂದು ಮೋದಿಯವರು ಹೇಳುತ್ತಿದ್ದಾರೆ. ಇದು ಸೂಕ್ಷ್ಮ ವಿಚಾರ. ಆದ್ದರಿಂದ ಇಂಥ ವಿಷಯಗಳನ್ನು ಸರ್ವಪಕ್ಷಗಳ ಚರ್ಚೆಗೆ ಸಭೆ ಕರೆಯುತ್ತಾರೆ. ಅಲ್ಲಿ ನಾವು ಮಾತನಾಡುತ್ತೇವೆ. ದೂರವಾಣಿ ಸಂಭಾಷಣೆ ನೀಡಲು ಏನೆಲ್ಲಾ ಚರ್ಚೆಗಳಾಗಿವೆ ಎಂಬುದನ್ನು ನಾವು ಬಹಿರಂಗವಾಗಿ ಚರ್ಚೆ ಮಾಡಲಾಗುವುದಿಲ್ಲ. ಏನೆಲ್ಲಾ ನಡೆದಿದೆ ಎಂಬುದನ್ನು ಸರ್ವಪಕ್ಷ ಸಭೆಯಲ್ಲೇ ಮಾತನಾಡುತ್ತೇವೆ. ಇಂದು ನಮ ಪಕ್ಷದ ಸಭೆಯೂ ಇದೆ. ಅಲ್ಲಿ ಚರ್ಚೆ ಮಾಡುತ್ತೇವೆ. ಕೇಂದ್ರ ಸರ್ಕಾರ ಸರ್ವಪಕ್ಷ ಸಭೆ ಕರೆಯಬೇಕು ಎಂದು ಈಗಾಗಲೇ ಒತ್ತಾಯಿಸಿದ್ದೇವೆ. ಆಪರೇಷನ್ ಸಿಂಧೂರ ಕುರಿತು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಕರೆದ ಸರ್ವಪಕ್ಷ ಸಭೆಗೆ ಮೋದಿ ಗೈರು ಹಾಜರಾಗುವ ಬಗ್ಗೆಯೂ ಖರ್ಗೆ ಯಾವುದೇ ಪ್ರತಿಕ್ರಿಯೆ ನೀಡದೇ ತಟಸ್ಥರಾದರು.

'ಕದನ ವಿರಾಮ' ಸೇರಿದಂತೆ ಭಾರತ ಮತ್ತು ಪಾಕಿಸ್ತಾನ ನಡುವಿನ ಉದ್ವಿಗ್ನತೆಗೆ ಸಂಬಂಧಿಸಿದಂತೆ ಇತ್ತೀಚಿನ ಬೆಳವಣಿಗೆಗಳ ಬಗ್ಗೆ ಚರ್ಚಿಸಲು ಶೀಘ್ರದಲ್ಲೇ ಸರ್ವಪಕ್ಷ ಸಭೆ ಕರೆಯುವಂತೆ ಸರ್ಕಾರವನ್ನು ಒತ್ತಾಯಿಸಿದ್ದು, ಅಲ್ಲಿ ನಮಗೆ ಅನುಮಾನವಿರುವ ಎಲ್ಲ ಪ್ರಶ್ನೆಗಳನ್ನೂ ಕೇಳಿ ಪರಿಹರಿಸಿಕೊಳ್ಳುತ್ತೇವೆ. ಇಂಥ ವಿಷಯಗಳನ್ನು ಸಾರ್ವಜನಿಕವಾಗಿ ಚರ್ಚಿಸುವಂಥದ್ದಲ್ಲ ಎಂದು ಹೇಳಿದರು.

ಭಾರತ ಮತ್ತು ಪಾಕಿಸ್ತಾನ ನಡುವಿನ ಉದ್ವಿಗ್ನತೆ ವಿಚಾರದಲ್ಲಿ ಕ್ರೆಡಿಟ್ ಪಡೆಯಲು ಟ್ರಂಪ್ ಹೇಳಿಕೆ ನೀಡುತ್ತಿದ್ದಾರೆ. ಆದರೆ, ಇವರು (ಪ್ರಧಾನಿ ಮತ್ತು ಕೇಂದ್ರ ಸರ್ಕಾರ) ಇಲ್ಲ. ಭಾರತ–ಪಾಕ್ ವಿಷಯದಲ್ಲಿ ಮೂರನೇ ವ್ಯಕ್ತಿಯ ಮಧ್ಯಸ್ಥಿಕೆ ಇಲ್ಲ ಎಂದು ಹೇಳುತ್ತಿದ್ದಾರೆ. ಇದೆಲ್ಲವೂ ಸೂಕ್ಷ್ಮ ವಿಷಯ. ಸರ್ವಪಕ್ಷ ಸಭೆ ಕರೆದಾಗ, ಅಲ್ಲೇ ನಾವು ಈ ಬಗ್ಗೆ ಕೂಲಂಕಷವಾಗಿ ಚರ್ಚಿಸುತ್ತೇವೆ ಮತ್ತು ಈ ಎಲ್ಲ ವಿಷಯಗಳ ಬಗ್ಗೆ ಸರ್ಕಾರವನ್ನು ಪ್ರಶ್ನಿಸಿ ನಮ್ಮ ಸಂಶಯ ನಿವಾರಣೆ ಮಾಡಿಕೊಳ್ಳುತ್ತೇವೆ. ನಾವು ಪ್ರಮುಖ ವಿರೋಧ ಪಕ್ಷವಾಗಿದ್ದರಿಂದ ನಮಗೂ ಜವಾಬ್ದಾರಿ ಇದೆ. ಆದ್ದರಿಂದಲೇ ಪಹಲ್ಗಾಮ್ ದಾಳಿಯಾದಾಗ, ಸರ್ಕಾರದ ಎಲ್ಲ ಕ್ರಮಕ್ಕೆ ನಮ್ಮ ಬೆಂಬಲವಿದೆ ಎಂದು ಹೇಳಿದ್ದೆವು.

ಟ್ರಂಪ್ ಅವರ ಮಧ್ಯಸ್ಥಿಕೆಗೆ ಪ್ರಧಾನಿ ಮೋದಿ ಮಣಿದಿದ್ದಾರೆಯೇ? ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಇದು ಎರಡು ದೇಶಗಳ ವಿಷಯ. ನಾನು ಈಗ ಅದರ ಬಗ್ಗೆ ಮಾತನಾಡುವುದು ಸರಿಯಲ್ಲ. ನಮಗೆ ಇಂದು ನಮ್ಮ ಪಕ್ಷದ ಸಭೆ ಇದೆ. ನಾನು ಅದಕ್ಕಾಗಿ ಹೋಗುತ್ತಿದ್ದೇನೆ. ನಾನು ಸರ್ವಪಕ್ಷ ಸಭೆ ಕರೆಯುವಂತೆ ಕೇಂದ್ರವನ್ನು ಒತ್ತಾಯಿಸಲು ನಿರ್ಣಯ ಕೈಕೊಳ್ಳುತ್ತ್ರತೇವೆ. ಅವರು ಏನು ಮಾಡುತ್ತಾರೆಂದು ನೋಡೋಣ ಎಂದು ಹೇಳಿದರು.



ನಾಲ್ಕು ದಿನಗಳ ಕಾಲ ನಡೆದ ಗಡಿಯಾಚೆಗಿನ ಡ್ರೋನ್ ಮತ್ತು ಕ್ಷಿಪಣಿ ದಾಳಿಯ ನಂತರ, ಮಿಲಿಟರಿ ಸಂಘರ್ಷವನ್ನು ಕೊನೆಗೊಳಿಸಲು ಭಾರತ ಮತ್ತು ಪಾಕಿಸ್ತಾನ ಶನಿವಾರ ಕದನ ವಿರಾಮ ಒಪ್ಪಂದ ಮಾಡಿಕೊಂಡವು. ಪಹಲ್ಗಾಮ್ ಭಯೋತ್ಪಾದಕ ದಾಳಿ, ಆಪರೇಷನ್ ಸಿಂಧೂರ ಮತ್ತು ಇತ್ತೀಚೆಗೆ ಘೋಷಿಸಲಾದ 'ಕದನ ವಿರಾಮ' ಸೇರಿದಂತೆ ಗಡಿಯಾಚೆಗಿನ ಗುಂಡಿನ ದಾಳಿಯ ಇತ್ತೀಚಿನ ಬೆಳವಣಿಗೆಗಳ ಕುರಿತು ಚರ್ಚೆ ನಡೆಸಲು ಕೇಂದ್ರ ಸರ್ಕಾರವು ಸಂಸತ್ತಿನ ವಿಶೇಷ ಅಧಿವೇಶನವನ್ನು ಕರೆಯಬೇಕೆಂದು ನಮ್ಮ ಪಕ್ಷವು ಈಗಾಗಲೇ ಒತ್ತಾಯಿಸಿದೆ ಎಂದೂ ಹೇಳಿದರು.

## ಅವಧಿಪೂರ್ವ ಮುಂಗಾರು ಪ್ರವೇಶ

# ರೈತರಿಗೆ ಬಿತ್ತನೆ ಬೀಜ ನೀಡಲು ಕೃಷಿ ಇಲಾಖೆ ತಯಾರಿ: ಚಲುವರಾಯಸ್ವಾಮಿ

**ಧಾರವಾಡ, ಮೇ.14–** ರಾಜ್ಯದಲ್ಲಿ ಈ ವರ್ಷ ಅವಧಿ ಪೂರ್ವ ಮುಂಗಾರು ಪ್ರವೇಶ ಆಗಿದ್ದು, ಮುಂಗಾರು ಬಿತ್ತನೆಗೆ ಈಗಾಗಲೇ ತಯಾರು ಮಾಡಿಕೊಳ್ಳಲಾಗಿದೆ. ಈ ಹಿನ್ನೆಲೆಯಲ್ಲಿ ಸಕಾಲಕ್ಕೆ ರೈತರಿಗೆ ಬಿತ್ತನೆ ಬೀಜ ವಿತರಣೆ ಮಾಡಲು ಕೃಷಿ ಇಲಾಖೆ ಸಜ್ಜಾಗಿದೆ ಎಂದು ಕೃಷಿ ಸಚಿವ ಚಲುವರಾಯ ಸ್ವಾಮಿ ಹೇಳಿದರು.

ಧಾರವಾಡದಲ್ಲಿ ಸುದ್ದಿಗಾರರ ಜೊತೆಗೆ ಮಾತನಾಡಿದ ಸಚಿವರು, ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಬರಗಾಲ ಅಂತ ಬಿಜೆಪಿ–ಜೆಡಿಎಸ್‌ನವರು ಹೇಳಿದ್ರು. ಕಳೆದ ವರ್ಷ ಕೃಷಿ ಕ್ಷೇತ್ರದಲ್ಲಿ ಯಶಸ್ಸು ಕಂಡಿದ್ದು,1.48 ಲಕ್ಷ ಮೆಟ್ರಿಕ್ ಟನ್ ಆಹಾರ ಉತ್ಪಾದನೆ ಆಗಿದೆ. ಇದು ದೇಶದಲ್ಲೇ ಅತಿ ಹೆಚ್ಚು ಆದ ಉತ್ಪಾದನೆ ಎಂದು ಸಮರ್ಥಿಸಿಕೊಂಡಿದ್ದಾರೆ.

ಈ ವರ್ಷವೂ ಕೃಷಿಯಲ್ಲಿ ಹೆಚ್ಚಿನ ಉತ್ಪಾದನೆ ಗುರಿ ಹೊಂದಲಾಗಿದೆ. ಅದಕ್ಕಾಗಿ ಮುಂಗಾರಿಗೆ ತಯಾರಿ ಮಾಡಿಕೊಂಡಿದ್ದೇವೆ. ಮುಂಚಿತವಾಗಿಯೇ ಮುಂಗಾರು ಪ್ರಾರಂಭ ಆಗುತ್ತಿದೆ

ಆದರೆ ಎಲ್ಲ ಕಡೆ ಮೇ ನಂತರವೇ ಬಿತ್ತನೆ ಆಗುತ್ತದೆ. ಕೃಷಿ ಇಲಾಖೆ ಎಲ್ಲ ಜಿಲ್ಲೆಯಲ್ಲಿ ತಯಾರಿ ಮಾಡಿಕೊಂಡಿದೆ. ಇದಕ್ಕಾಗಿಯೇ ಬೆಳಗಾವಿ ವಿಭಾಗದ ಸಭೆ ಮಾಡುತ್ತಿದ್ದೇವೆ. ಇನ್ನು ಏಳು ಜಿಲ್ಲೆಗಳ ಸಭೆ ಇಂದು ಧಾರವಾಡದಲ್ಲಿ ಮಾಡುತ್ತೇವೆ ಎಂದರು.

ಕೃಷಿ ಪರಿಕರ ಸಬ್ಸಿಡಿ ಇಳಿಕೆ ವಿಚಾರವಾಗಿ ಪ್ರತಿಕ್ರಿಯೆ ನೀಡಿದ ಅವರು, ಯಾವುದೇ ಸಬ್ಸಿಡಿ ಕಡಿಮೆಯಾಗಿಲ್ಲ ಕೆಲವೊಂದು ಬೆಲೆ ಜಾಸ್ತಿ ಆಗಿವೆ. ಹೀಗಾಗಿ ರೈತರು ಸಬ್ಸಿಡಿ ಜಾಸ್ತಿ ಮಾಡಿ ಅಂತಾ ಹೇಳಿದ್ದಾರೆ. ಎಲ್ಲರಿಗೂ ಸಬ್ಸಿಡಿ ಕೊಡುತ್ತಿದ್ದೇವೆ. ಸ್ವಲ್ಪ ಹೆಚ್ಚು ಮಾಡಿ ಅಂತಾ ಕೇಳಿದ್ದಾರೆ. ಎಲ್ಲಿ ಬೇಡಿಕೆ ಇದೆ, ಅಲ್ಲಿ ಸಬ್ಸಿಡಿ ಜಾಸ್ತಿ ಮಾಡುತ್ತೇವೆ ಎಂದರು.



ಇನ್ನು, ರಾಜ್ಯದ ಎಲ್ಲ ವಿಶ್ವವಿದ್ಯಾನಿಲಯಗಳ ಖಾಲಿ ಹುದ್ದೆ ನೇಮಕಾತಿ ನಡೆದಿದ್ದು, ಈ ಸಂಬಂಧಿತ ಪ್ರಸ್ತಾವನೆ ಹಣಕಾಸು ಇಲಾಖೆಗೆ ಕಳುಹಿಸಲಾಗಿದೆ ಎಂದು ಕೃಷಿ ಸಚಿವ ಚಲುವರಾಯಸ್ವಾಮಿ ತಿಳಿಸಿದರು.

## ರಾಜಧಾನಿಯಿಂದ ಟರ್ಕಿ, ಅಜರ್‌ಬೈಜಾನ್ ಪ್ರವಾಸ-ವ್ಯಾಪಾರ ರದ್ದು

# ಸರ್ಕಾರ, ರೈತರಿಂದ, ಸಾಮಾನ್ಯ ವರ್ತಕರಿಂದ ಸರ್ಕಾರ ಪಾಠ ಕಲಿಯಲಿ: ಬಸನಗೌಡ ಯತ್ನಾಳ್

**ವಿಜಯಪುರ, ಮೇ.14–** ಪಾಕಿಸ್ತಾನದ ಮೇಲೆ ಮುಗಿಬಿದ್ದ ಭಾರತ, ಹಿಗ್ಗಾಮುಗ್ಗ ಗುಮ್ಮಾ ಇತ್ತು. ಪಾಕ್‌ನೊಳಗೆ ನುಗ್ಗಿ ಪಾಕ್‌ಗೆ ತಕ್ಕ ಶಾಸ್ತಿ ಮಾಡಲಾಯ್ತು. ಆದರೆ ಶಸ್ತ್ರಾಸ್ತ್ರಗಳಿಲ್ಲದೇ ಕಂಗಾಲಾಗಿದ್ದ ಪಾಕ್‌ಗೆ ಟರ್ಕಿ ದೇಶ, ಅಜರ್‌ಬೈಜಾನ್ ನೆರವಿಗೆ ಬಂದಿತ್ತು. ಪ್ರವಾಸೋದ್ಯಮವನ್ನೇ ನಂಬಿರುವ ಟರ್ಕಿಯನ್ನ ರಿಗೆ ಭಾರತೀಯರು ಬಾಯ್ಕಾಟ್ ಟರ್ಕಿ ಅಭಿಯಾನ ಆರಂಭಿಸಿದ್ದಾರೆ. ಬೆಂಗಳೂರಿನಿಂದ ಬುಕ್ ಆಗಿದ್ದ ಟರ್ಕಿ, ಅಜರ್‌ಬೈಜಾನ್ ಪ್ರವಾಸ ರದ್ದುಗೊಳಿಸಲಾಗುತ್ತಿದೆ.

ಇನ್ನೂ ಟ್ರಾವೆಲ್ ಏಜೆಂಟುಗಳೇ ಬಾಯ್ಕಾಟ್ ಟರ್ಕಿ ಅಭಿಯಾನ ಶುರುಮಾಡಿದ್ದಾರೆ. ಇನ್ನೂ CAIT ಕೂಡ ವ್ಯಾಪಾರ ವಹಿವಾಟು ಮಾಡಲು ನಿರ್ಧರಿಸಿದೆ. ಪುಣೆ ವರ್ತಕರು ಆಪಲ್ ಆಮದಿಗೆ ಬ್ರೇಕ್ ಹಾಕಲು ನಿರ್ಧರಿಸಿದ್ದಾರೆ.

> ಆರ್ಥಿಕ ಬಹಿಷ್ಕಾರದಿಂದ ಶತ್ರುಗಳನ್ನು ಮೂಲೆಗುಂಪು ಮಾಡ ಬಹುದು ಎಂಬುದನ್ನು ನಮ್ಮ ರೈತಾಪಿ ವರ್ಗ ತೋರಿಸಿಕೊಟ್ಟಿದೆ. ಕಳ್ಳಮಾರ್ಗದ ಮೂಲಕ ಟರ್ಕಿ ದೇಶದ ಸಂಸ್ಥೆಗೆ 4.7 ಕೋಟಿಯನ್ನು ನೀಡಿದ ಕಾಂಗ್ರೆಸ್ ಸರ್ಕಾರ ರೈತರಿಂದ, ಸಾಮಾನ್ಯ ವರ್ತಕರಿಂದ ಪಾಠ ಕಲಿಯಲಿ.

ಹೌದು, ಟರ್ಕಿ ಆಪಲ್ ಭಾರತದಲ್ಲಿ ಅತೀ ಹೆಚ್ಚು ಮಾರಾಟವಾಗುತ್ತಿತ್ತು. ಇದರಿಂದ 1,000 ದಿಂದ 2,000 ಕೋಟಿ ರೂಪಾಯಿವರೆಗಿನ ವಹಿವಾಟನ್ನು ಟರ್ಕಿ ಮಾಡುತ್ತಿತ್ತು. ಆದರೆ ಟರ್ಕಿ, ಪಾಕಿಸ್ತಾನಕ್ಕೆ ನೆರವು ನೀಡಿದ ಕಾರಣ ಪುಣೆ ಸೇಬುಹಣ್ಣಿನ ವರ್ತಕರು ಟರ್ಕಿ ಆಪಲ್ ಹಣ್ಣು ನಿಷೇಧಿಸಿದ್ದಾರೆ. ಹಿಮಾಚಲ ಪ್ರದೇಶ, ಇರಾನ್‌ನಿಂದ ಆಪಲ್ ತರಿಸಿಕೊಳ್ಳಲಾಗುತ್ತದೆ ಎಂದು ಪುಣೆ ವ' ತ' ್ ಕ' ರ' ು ಹೇಳಿದ್ದಾರೆ.



ರೈತರ ಈ ನಡೆಯನ್ನು ಬಿಜೆಪಿ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮುಕ್ತ ಕಂಠದಿಂದ ಸ್ವಾಗತಿಸಿದ್ದಾರೆ. ಜೊತೆಗೆ ಕಾಂಗ್ರೆಸ್‌ಗೂ ಟ್ವೀಟ್ ಮೂಲಕ ಚಾಟಿ ಬೀಸಿದ್ದಾರೆ. ಹರಿಹರದ ರೈತರು ವೀಳ್ಯದೆಲೆಯನ್ನು ಪಾಕಿಸ್ತಾನಕ್ಕೆ ರಫ್ತು ಮಾಡೋದಿಲ್ಲ ಎಂದು ತಮ್ಮ ಬದ್ಧತೆ, ರಾಷ್ಟ್ರ ಪ್ರೇಮವನ್ನು ಪ್ರದರ್ಶಿಸಿದ್ದಾರೆ. ಕೋಲಾರದ ರೈತರು ನಷ್ಟ ಆದರೂ ಪರವಾಗಿಲ್ಲ, ಪಾಕಿಸ್ತಾನಕ್ಕೆ ಟೊಮ್ಯಾಟೋ ರಫ್ತಾಗೋದಿಲ್ಲ ಎಂದು ಶಪಥಗೈದಿದ್ದಾರೆ.

ಮಹಾರಾಷ್ಟ್ರದ ವರ್ತಕರು ಹಾಗೂ ರೈತರು ಟರ್ಕಿ ದೇಶಕ್ಕೆ ಆಪಲ್ ರಫ್ತಿಗೆ ನಿರಾಕರಿಸಿದ್ದಾರೆ. ಆರ್ಥಿಕ ಹೊಡೆತ ಆದರೂ ಪರವಾಗಿಲ್ಲ, ದೇಶಕ್ಕಿಂತ ದೊಡ್ಡದು ಯಾವುದೂ ಇಲ್ಲ ಎಂದು ಜನಸಾಮಾನ್ಯರು ರಾಷ್ಟ್ರದ ಪರವಾಗಿ ನಿಂತಿದ್ದಾರೆ.

ಆರ್ಥಿಕ ಬಹಿಷ್ಕಾರದಿಂದ ಶತ್ರುಗಳನ್ನು ಮೂಲೆಗುಂಪು ಮಾಡ ಬಹುದು ಎಂಬುದನ್ನು ನಮ್ಮ ರೈತಾಪಿ ವರ್ಗ ತೋರಿಸಿಕೊಟ್ಟಿದೆ. ಕಳ್ಳಮಾರ್ಗದ ಮೂಲಕ ಟರ್ಕಿ ದೇಶದ ಸಂಸ್ಥೆಗೆ 4.7 ಕೋಟಿಯನ್ನು ನೀಡಿದ ಕಾಂಗ್ರೆಸ್ ಸರ್ಕಾರ ರೈತರಿಂದ, ಸಾಮಾನ್ಯ ವರ್ತಕರಿಂದ ಪಾಠ ಕಲಿಯಲಿ ಎಂದು ಯತ್ನಾಳ್ ಅವರು ಕುಟುಕಿದ್ದಾರೆ.

# ನನ್ನ ಭದ್ರತೆ ವಾಪಸ್ ಪಡೆದದ್ದೇಕೆ: ನನಗೇನಾದರೂ ಆದರೆ ಪೊಲೀಸರೇ ಹೊಣೆ: ಖೂಬಾ

**ಬೀದರ್, ಮೇ.14–** ಸರ್ಕಾರ ನನ್ನ ಮನೆ ಹಾಗೂ ಗೃಹ ಕಚೇರಿಗೆ ನೀಡಿದ್ದ ಭದ್ರತೆ ವಾಪಸ್ ಪಡೆದದ್ದೇಕೆ? ಒಂದು ವೇಳೆ ನನಗೇ ಹಾಗೂ ನನ್ನ ಕುಟುಂಬದವರು, ಕಚೇರಿಯ ಸಿಬ್ಬಂದಿಗೆ ಏನಾದರೂ ಆದರೆ ಪೊಲೀಸ್ ಇಲಾಖೆಯೇ ಹೊಣೆ ಎಂದು ಕೇಂದ್ರದ ಮಾಜಿ ಸಚಿವ ಭಗವಂತ ಖೂಬಾ ತಿಳಿಸಿದ್ದಾರೆ. ಈ ಸಂಬಂಧ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಅವರಿಗೆ ಪತ್ರ ಬರೆದಿದ್ದು, ಈ ಸಂಬಂಧ ಹೊರಡಿಸಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಎಸ್‌ಪಿ ಆದವರು ಸಮಾಜಘಾತುಕ ಘಟನೆಗಳ ವಿರುದ್ಧ ಕೆಲಸ ಮಾಡಬೇಕು. ಅದು ಬಿಟ್ಟು ಪ್ರಕ್ಷುಬ್ಧ ಸಂದರ್ಭದಲ್ಲಿ ನನ್ನ ವಿರುದ್ಧ ಹಗೆತನ ಸಾಧಿಸುತ್ತಿರುವುದು ಎಷ್ಟು ಸರಿ ನನ್ನ ಗಮನಕ್ಕೆ ತರದೇ ಏಪ್ರಿಲ್ 27ರಂದು ನನಗೆ ಒದಗಿಸಿದ್ದ ಪೊಲೀಸ್ ಭದ್ರತೆ ವಾಪಸ್ ಪಡೆದಿರು ವುದರ ಹಿಂದಿನ ಉದ್ದೇಶ ವಾದರೂ ಏನು? ನನಗೆ ಕಲ್ಪಿಸಿದ್ದ ಭದ್ರತೆ ಸಮಾಜ ಘಾತುಕರಿಗೆ ಒದಗಿಸಲು ಹೊರಟಿದ್ದೀರಾ ಎಂದು ಪ್ರಶ್ನಿಸಿದ್ದಾರೆ. ಮಾಜಿ ಕೇಂದ್ರ ಸಚಿವನ ವಿರುದ್ಧ ತಮ್ಮ ಅಧಿಕಾರ ದುರ್ಬಳಕೆ ಮಾಡಿಕೊಂಡು ಇಂತಹ ಕ್ರಮಕ್ಕೆ ಮುಂದಾಗಿರುವುದು ಸರಿಯಲ್ಲ. 10 ವರ್ಷ ಸಂಸದನಾಗಿ, ಮೂರು ವರ್ಷ ಕೇಂದ್ರ ಸಚಿವನಾಗಿ ಕೆಲಸ ನಿರ್ವಹಿಸಿದ್ದೇನೆ. ಮುಲಾಜಿಲ್ಲದೇ ಸಮಾಜಘಾತುಕ ಶಕ್ತಿಗಳ ವಿರುದ್ಧ ಧ್ವನಿ ಎತ್ತುತ್ತ ಬಂದಿರುವೆ. ಮುಂದೆಯೂ ಎತ್ತುವೆ. ನನ್ನ ವಿರುದ್ಧ ಹಲ್ಲೆ ಯತ್ನ, ಪಿತೂರಿಗಳು ನಡೆದಿವೆ. ಈ ಕಾರಣಕ್ಕಾಗಿ ನಾಲ್ಕು ವರ್ಷಗಳಿಂದ ನನಗೆ ಭದ್ರತೆ ಒದಗಿಸಲಾಗಿತ್ತು ಎಂದು ತಿಳಿಸಿದ್ದಾರೆ.

ಸಮಾಜ ಕಲ್ಯಾಣ ಇಲಾಖೆ
ಗೌರವಾನ್ವಿತ ನ್ಯಾಯಮೂರ್ತಿ
ಡಾ. ಹೆಚ್.ಎನ್.ನಾಗಮೋಹನ ದಾಸ್
ಏಕ ಸದಸ್ಯ ಆಯೋಗ
ಯವನಿಕಾ, ನೃಪತುಂಗ ರಸ್ತೆ, ಬೆಂಗಳೂರು.


ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು


ಶ್ರೀ ಡಿ ಕೆ ಶಿವಕುಮಾರ್
ಮಾನ್ಯ ಉಪಮುಖ್ಯಮಂತ್ರಿಗಳು



ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ - 2025
ಮಾಹಿತಿ ಇನ್ನೂ ನೀಡಿಲ್ಲವೇ ?
ತಡಮಾಡದೆ ತಕ್ಷಣ ನೀಡಿ. ಸಮೀಕ್ಷೆ ಇನ್ನು ಕೆಲವೇ ದಿನಗಳು ಉಳಿದಿವೆ.
ನಿಮ್ಮ ಸಾಮಾಜಿಕ ಜವಾಬ್ದಾರಿಯಲ್ಲಿ ಪಾಲ್ಗೊಳ್ಳಲು ಒಂದು ಸುವರ್ಣಾವಕಾಶ
ಸಮೀಕ್ಷೆ ಈಗಾಗಲೇ ಪ್ರಾರಂಭವಾಗಿದೆ
(ಸಮೀಕ್ಷೆಯ ಅವಧಿ 05.05.2025 ರಿಂದ 23.05.2025 ರ ವರೆಗೆ. ಬೆಳಿಗ್ಗೆ 6.30 ರಿಂದ ಪ್ರಾರಂಭ )

- ಮನೆ ಮನೆಗೂ ಭೇಟಿ ನೀಡುತ್ತಿದ್ದಾರೆ ಸಮೀಕ್ಷಾದಾರರು.
- ಸಮೀಕ್ಷಾದಾರರಿಗೆ ನಿಮ್ಮ ಮೂಲ ಜಾತಿಯ ಬಗ್ಗೆ ಮಾಹಿತಿ ನೀಡಿ, ಮೀಸಲಾತಿ ಸೌಲಭ್ಯ ಪಡೆಯಿರಿ.
- ಸಾಮಾಜಿಕವಾಗಿ, ಆರ್ಥಿಕವಾಗಿ ಮತ್ತು ಶೈಕ್ಷಣಿಕವಾಗಿ ಹಿಂದುಳಿದವರನ್ನು ಗುರುತಿಸಲು ಪರಿಶಿಷ್ಟ ಜಾತಿಗಳಲ್ಲಿ (ಎಸ್‌ಸಿ) ಆಂತರಿಕ ಮೀಸಲಾತಿಯ ಬೇಡಿಕೆಗಳನ್ನು ಪರಿಹರಿಸಲು ಸರ್ಕಾರ ಕೈಗೊಂಡ ಒಂದು ಮಹತ್ವಾಕಾಂಕ್ಷಿ ಹಾಗೂ ದಿಟ್ಟ ಹೆಜ್ಜೆಯಾಗಿದೆ.
- ಸಮೀಕ್ಷೆಗೆ ಸಹಕರಿಸಿ, ನಿಖರವಾದ ಮಾಹಿತಿಗಳನ್ನು ನೀಡಿ.
- ನಿಮ್ಮ ಮುಂದಿನ ಪೀಳಿಗೆ ಮೀಸಲಾತಿ ಸೌಲಭ್ಯಗಳಿಂದ ವಂಚಿತರಾಗದಿರಲಿ.
- ನ್ಯಾಯಯುತ ಮೀಸಲಾತಿ ಹಂಚಿಕೆಗಾಗಿ ಸಮೀಕ್ಷಾದಾರರಿಗೆ ಪರಿಶಿಷ್ಟ ಜಾತಿಗೆ ಸೇರಿದವರು ತಮ್ಮ ಮೂಲ ಜಾತಿ, ಶಿಕ್ಷಣ, ವರಮಾನ, ಉದ್ಯೋಗ ಮತ್ತು ಇನ್ನಿತರ ನಿಖರ ಮಾಹಿತಿ ನೀಡುವುದು ನಿಮ್ಮೆಲ್ಲರ ಆದ್ಯ ಕರ್ತವ್ಯ.

| ನಿಮ್ಮ ಜಾತಿ, |
| --- |
| ಆದಿ ಕರ್ನಾಟಕ |
| ಆದಿ ದ್ರಾವಿಡ |
| ಆದಿ ಆಂಧ್ರ |
| ಎಂದು ಇದ್ದಲ್ಲಿ ಮೂಲ ಜಾತಿಯನ್ನು ಸಮೀಕ್ಷೆಗೆ ಒದಗಿಸುವುದು |

| ಹಂತ | ವಿವರ | ಅವಧಿ |
| --- | --- | --- |
| 1. | ಸಮೀಕ್ಷಾದಾರರಿಂದ ಮನೆ-ಮನೆ ಭೇಟಿ ನೀಡಿ ಸಮೀಕ್ಷೆ | 05-05-2025 ರಿಂದ 17-05-2025 |
| 2. | ಸಮೀಕ್ಷಾದಾರರಿಂದ ವಿಶೇಷ ಶಿಬಿರಗಳಲ್ಲಿ ಸಮೀಕ್ಷೆ | 19-05-2025 ರಿಂದ 21-05-2025 |
| 3. | ಸ್ವಯಂ ಘೋಷಣೆ (ಆನ್‌ಲೈನ್ ಮೂಲಕ) | 19-05-2025 ರಿಂದ 23-05-2025 |


ಮಾನ್ಯ ಸಮಾಜ ಕಲ್ಯಾಣ ಸಚಿವರಾದ ಡಾ. ಹೆಚ್.ಸಿ. ಮಹದೇವಪ್ಪ ರವರು ಕಾರ್ಯಕ್ರಮವೊಂದರಲ್ಲಿ ಮಾತನಾಡುತ್ತಿರುವುದು.

ನಮ್ಮ ಕರ್ನಾಟಕ
ಗ್ಯಾರಂಟಿ ಕರ್ನಾಟಕ

ಸಹಾಯವಾಣಿ : 9481359000

ಸಾರ್ವಜನಿಕ ಆಸ್ತಿ ಪಾಸ್ತಿ ರಕ್ಷಿಸುವುದು ಮತ್ತು ಹಿಂಸೆಯನ್ನು ತ್ಯಜಿಸುವುದು - ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

## ಕಲಬುರಗಿ ನಗರಕ್ಕೆ ನಿರಂತರ ಕುಡಿಯುವ ನೀರು ಪ್ರಗತಿ ಪರಿಶೀಲನೆ

# ಎಲ್ ಅಂಡ್ ಟಿ ಕಂಪನಿ ಕಪ್ಪುಪಟ್ಟಿಗೆ ಶಿಫಾರಸು: ವರದಿಗೆ ಪ್ರಿಯಾಂಕ್ ಖರ್ಗೆ ಸೂಚನೆ

**ಕಲಬುರಗಿ, ಮೇ.14–** ಕಲಬುರಗಿ ನಗರಕ್ಕೆ ನಿರಂತರ 24*7 ಕುಡಿಯುವ ನೀರು ಯೋಜನೆ ಕಾಮಗಾರಿ ಕಾಲಮಿತಿಯಲ್ಲಿ ಪೂರ್ಣಗೊಳಿಸದೇ ವಿಳಂಬ ಧೋರಣೆ ತಾಳುತ್ತಿರುವ ಎಲ್ ಅಂಡ್ ಟಿ ಕಂಪನಿಯನ್ನು ಕಪ್ಪು ಪಟ್ಟಿಗೆ ಸೇರಿಸಲು ಕೂಡಲೆ ವರದಿ ಸಲ್ಲಿಸುವಂತೆ ಮಹಾನಗರ ಪಾಲಿಕೆ ಅಯುಕ್ತ ಅವಿನಾಶ ಶಿಂಧೆ ಅವರಿಗೆ ರಾಜ್ಯದ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್, ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಗರದಲ್ಲಿ 24*7 ನಿರಂತರ ಕುಡಿಯುವ ನೀರು ಯೋಜನೆ ಪ್ರಗತಿ ಪರಿಶೀಲನೆ ನಡೆಸಿದ ಅವರು, ಕಾಮಗಾರಿ ಆಮೆಗತಿಯಲ್ಲಿ ಸಾಗುತ್ತಿರುವುದಕ್ಕೆ ತೀವ್ರ ಅಸಮಾಧಾನ ವ್ಯಕ್ತಪಡಿಸಿ, ಎಲ್ & ಟಿ ಕಂಪನಿ ಕೆಲಸಗಳು ಕಾಲಮಿತಿಯಲ್ಲಿ ಪೂರ್ಣವಾಗುತ್ತಿಲ್ಲ. ಇದರ ಮೇಲುಸ್ತುವಾರಿ ಮಾಡಬೇಕಾದ ಪಾಲಿಕೆ ಮತ್ತು ಕೆ.ಯು.ಐ.ಡಿ.ಎಫ್.ಸಿ ಇಂಜಿನೀಯರ್‌ಗಳು ನೀವೇನು ಮಾಡುತ್ತಿದ್ದೀರಿ? ಎಂದು ಇಂಜಿನೀಯರ್‌ಗಳನ್ನು ತರಾಟೆಗೆ ತೆಗೆದುಕೊಂಡರು.

ಸರ್ಕಾರ ಸಾವಿರಾರು ಕೋಟಿ ರೂ. ಖರ್ಚು ಮಾಡಿ ನಗರದ ಜನರಿಗೆ ಶುದ್ಧ ಕುಡಿಯುವ ನೀರು ಪೂರೈಕೆ ಉದ್ದೇಶ ಹೊಂದಿದೆ.



ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಗರದ 24*7 ನಿರಂತರ ನೀರು ಸರಬರಾಜು ಕಾಮಗಾರಿಗಳ ಪರಿಶೀಲನಾ ಸಭೆಯ ಅದ್ಯಕ್ಷತೆ ವಹಿಸಿ ಜ ಇಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಮಾತನಾಡಿದರು. ಸಚಿವ ಡಾ.ಶರಣಪ್ರಕಾಶ ಪಾಟೀಲ್, ಸಂಸದ ರಾಧಾಕೃಷ್ಣ, ಶಾಸಕ ಅಲ್ಲಮಪ್ರಭು, ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್, ಪಾಲಿಕೆ ಮಹಾಪೌರ ಯಲ್ಲಪ್ಪ ನಾಯ್ಕೋಡಿ, ಪಾಲಿಕೆ ಆಯುಕ್ತ ಅವಿನಾಶ ಶಿಂಧೆ ಅವರಿದ್ದರು.

ಸಾವಿರಾರು ಸಂಖ್ಯೆಯಲ್ಲಿ ಇರಬೇಕಾದ ಕಾರ್ಮಿಕರ ಸಂಖ್ಯೆ ಇಲ್ಲಿರುವುದು 170 ರಿಂದ 300 ಅಷ್ಟೇ. ಇದರ ಮೇಲೆ ತೀವ್ರ ನಿಗಾ ಇರಿಸಬೇಕಾದ ಪಾಲಿಕೆ ಮತ್ತು ಕೆ.ಯು.ಐ.ಡಿ.ಎಫ್.ಸಿ ಇಂಜಿನೀಯರ್ ಗಳು ಎಲ್ ಅಂಡ್ ಟಿ ಅವರು ಕೆಲಸ ಮಾಡುತ್ತಾರೆ ನಮ್ಮದ್ದೇನಿಲ್ಲ ಎಂದು ಕೈಕಟ್ಟಿ ಕುಳಿತುಕೊಳ್ಳುವುದು ಸರಿಯಲ್ಲ. ಇದು ನಡೆಯೋದಿಲ್ಲ ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದ ಅವರು, ಸಂಬಂಧಪಟ್ಟ ಅಧಿಕಾರಿಗಳಿಗೆ ನೋಟಿಸ್ ಜಾರಿಗೊಳಿಸುವಂತೆ ಪಾಲಿಕೆ ಆಯುಕ್ತರಿಗೆ ಆದೇಶ ಮಾಡಿದ್ದರು.

ಕಾಮಗಾರಿ ಸ್ಥಳಕ್ಕೆ ಎಂದಾದರು ಭೇಟಿ ನೀಡಿದ್ದೀರಾ, ನಿಗದಿಯಂತೆ ಕಾರ್ಮಿಕರು ಕೆಲಸ ಮಾಡುತ್ತಿರುವ ಬಗ್ಗೆ ವೀಕ್ಷಿಸಿದ್ದೀರಾ ಎಂದು ಇಂಜಿನೀಯರ್‌ಗಳನ್ನು ಪ್ರಶ್ನಿಸಿದ ಸಚಿವ ಪ್ರಿಯಾಂಕ್ ಖರ್ಗೆ ಅವರು, ಕಾಮಗಾರಿ ವಿಳಂಬ ಸಂಬಂಧ ಕಂಪನಿಗೆ ಪಾಲಿಕೆಯಿಂದ ನೀಡಿದ ನೋಟಿಸ್, ಶಿಸ್ತು ಕ್ರಮ ಸೇರಿದಂತೆ ಇಂಜಿನೀಯರ್ ಗಳಿಗೆ ನೀಡಲಾದ ಜವಾಬ್ದಾರಿ ಕುರಿತು ಸಹ ಸಮಗ್ರ ವರದಿ ಸಲ್ಲಿಸುವಂತೆ ಸೂಚಿಸಿದರು.

ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ ಪಾಟೀಲ ಮಾತನಾಡಿ ನಗರದ ಚರಂಡಿ ನೀರು ಸರಡಗಿ ಬ್ಯಾರೇಜ್ ಸೇರುತ್ತಿದೆ ಎಂಬ ದೂರಿದ್ದು, ಕಲುಷಿತ ನೀರು ಹೋಗದಂತೆ ಎಚ್ಚರ ವಹಿಸಬೇಕು. ಶಾಸಕ ಅಲ್ಲಮಪ್ರಭು ಪಾಟೀಲ, ತಮ್ಮ ಮನೆ ಇರುವ ಶಾಂತಿ ನಗರದಲ್ಲಿಯೇ ಪೈಪ್ ಲೈನ್ ಹಾಕಲು ರಸ್ತೆ ಅಡ್ಡಿ 15 ದಿನಗಳಾಗಿವೆ, ಇನ್ನು ಮುಚ್ಚಿಲ್ಲ. ರಸ್ತೆ ಸಂಚಾರಕ್ಕೆ ಕಷ್ಟವಾಗುತ್ತಿದೆ. ಎಲ್ ಅಂಡ್ ಟಿ ಅಧಿಕಾರಿಗಳು ಜನಪ್ರತಿನಿಧಿಗಳಿಗೂ ಸರಿಯಾಗಿ ಸ್ಪಂದನೆ ಮಾಡುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಕಾಮಗಾರಿ ವಿಳಂಬಕ್ಕೆ ಉಪ ಗುತ್ತಿಗೆ ಕಾರಣ: ಕಲಬುರಗಿ ಮಹಾನಗರ ಪಾಲಿಕೆ ಮಹಾಪೌರರಾದ ಯಲ್ಲಪ್ಪ ನಾಯ್ಕೊಡಿ ಮಾತನಾಡಿ ಎಲ್ ಅಂಡ್ ಟಿ ಕಂಪನಿಯು ಉಪ ಗುತ್ತಿಗೆ ನೀಡಿದೆ. ಇನ್ನು ಸದರಿ ಗುತ್ತಿಗೆದಾರರಿಗೆ ಸರಿಯಾಗಿ ಪೇಮೆಂಟ್ ಮಾಡದ ಕಾರಣ ಕಾಮಗಾರಿ ನಿಧಾನಗತಿಯಲ್ಲಿ ಸಾಗಿದೆ. ಕಾಮಗಾರಿ ಮಾತ್ರ ಕಂಪನಿಗೆ ನೀಡಿ ನಿರ್ವಹಣೆ ಜವಾಬ್ದಾರಿ ಕರ್ನಾಟಕ ನಗರ ನೀರು ಸರಬರಾಜು ಮಂಡಳಿಗೆ ನೀಡಿದರೆ ಅನುಕೂಲವಾಗಲಿದೆ. ಇದು ಹೀಗೆ ಸಾಗಿದ್ದರೆ ಇನ್ನು 2 ವರ್ಷವಾದರು ಕಾಮಗಾರಿ ಮುಗಿಯುವ ಲಕ್ಷಣ ಗೋಚರಿಸುತ್ತಿಲ್ಲ ಎಂದರು.

# ಬಹುತ್ವ ಸಂಸ್ಕೃತಿ ಭಾರತದ ಬೆನ್ನೆಲುಬು– ಡಾ ಸೋಮಶೇಖರ್



**ಬಳ್ಳಾರಿ ಮೇ.14–** ಜಾತ್ಯಾತೀತ ಹಾಗೂ ಬಹುತ್ವ ಸಂಸ್ಕೃತಿಯ ಭಾರತದ ಬೆನ್ನೆಲುಬಾಗಿದೆ ಆದರೆ ಅದನ್ನೀಗ ಏಕರೂಪದ ಭಾರತವನ್ನಾಗಿ ಪರಿವರ್ತಿಸುವ ಹುನ್ನಾರ ದೇಶದಲ್ಲಿ ನಡೆಯುತ್ತಿದೆ. ನಾವು ಬುದ್ಧ, ಬಸವ ಹಾಗೂ ಅಂಬೇಡ್ಕರ್‌ರವರ ನೀಡಿರುವ ಸಂವಿಧಾನದ ಋಣದ ಮಕ್ಕಳಾಗಿದ್ದೇವೆ ಎಂದು ಕಲಬುರಗಿ ಕೇಂದ್ರೀಯ ವಿಶ್ವವಿದ್ಯಾಲಯದ ಕನ್ನಡ ಪ್ರಾಧ್ಯಾಪಕರಾದ ಡಾ ಅಪ್ಪಗೆರೆ ಸೋಮಶೇಖರ್ ಹೇಳಿದರು.

"ಬುದ್ಧ, ಬಸವ, ಅಂಬೇಡ್ಕರ್ ವಿಚಾರೋತ್ಸವ" ಕಾರ್ಯಕ್ರಮವನ್ನು ಅವರುಗಳ ಭಾವಚಿತ್ರಕ್ಕೆ ಗಣ್ಯರೊಂದಿಗೆ ಬುದ್ಧ, ಬಸವ, ಅಂಬೇಡ್ಕರ್‌ರವರ ತತ್ವಗಳಿಂದ ಭಾರತದ ಸಂವಿಧಾನ ರಚಿತವಾಗಿದೆ. ಸಂವಿಧಾನವು ದೇಶದಲ್ಲಿರುವ ಎಲ್ಲ ವರ್ಗದವರಿಗೆ ಅನ್ವಯಿಸುತ್ತದೆ ಆದರೆ ಸಂವಿಧಾನಕ್ಕೆ ಅಪಚಾರ ನಡೆದಾಗ ಅದನ್ನು ಖಂಡಿಸುವುದು ದಲಿತರು ಮಾತ್ರ. ವ್ಯಕ್ತಿ ಮತ್ತು ಸಮುದಾಯ ಪ್ರಗತಿ ಹೊಂದಲು ನಮ್ಮಲ್ಲಿರುವ ಕೀಳರಿಮೆ ಮನಸ್ಥಿತಿಯಿಂದ ಹೊರಬರಬೇಕು. ಈ ಮೂರು ಮಹಾನ್ ವ್ಯಕ್ತಿಗಳ ಆಶಯಗಳು ಭಾರತದ ಸಂವಿಧಾನದ ರೂಪದಲ್ಲಿ ಮೂಡಿ ಬಂದಿವೆ ಎಂದು ಹೇಳಿದರು.

# ನಮಗೆ ಯಾರೇ ತೊಂದರೆ ಕೊಟ್ಟರೆ, ಸುಮ್ಮನೆ ಬಿಡಲ್ಲ: ಪಾಕ್ ವಿರುದ್ಧ ಗುಡುಗಿದ ಸಿಎಂ ಯೋಗಿ

**ಲಖನೌ ಮೇ 14:** ನಮಗೆ ಯಾರಾದ್ರು ತೊಂದರೆ ಕೊಟ್ಟರೆ, ನಾವು ಸುಮ್ಮನೆ ಬಿಡಲ್ಲ ಎಂದು ಪಾಕಿಸ್ತಾನಕ್ಕೆ ಉತ್ತರ ಪ್ರದೇಶ ಸಿಎಂ ಯೋಗಿ ಆದಿತ್ಯನಾಥ್ ಎಚ್ಚರಿಕೆ ನೀಡಿದ್ದಾರೆ. ಆಪರೇಷನ್ ಸಿಂಧೂರ ಕಾರ್ಯಾಚರಣೆಯಲ್ಲಿ ಭಾರತೀಯ ಸಶಸ್ತ್ರ ಪಡೆಗಳ ಶೌರ್ಯವನ್ನು ಶ್ಲಾಘಿಸಲು ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಬುಧವಾರ ಲಖನೌದಲ್ಲಿ ಭಾರತ್ ಶೌರ್ಯ ತಿರಂಗ ಯಾತ್ರೆಯನ್ನು ಪ್ರಾರಂಭಿಸಿದ್ದಾರೆ. ಸಾರ್ವಜನಿಕರನ್ನುದ್ದೇಶಿಸಿ ಮಾತನಾಡಿದ ಯೋಗಿ ಆದಿತ್ಯನಾಥ್, ಭಯೋತ್ಪಾದಕರನ್ನು ಬೆಂಬಲಿಸುತ್ತಿರುವ ಪಾಕಿಸ್ತಾನದ ವಿರುದ್ಧ ವಾಗ್ದಾಳಿ ನಡೆಸಿ, ಅವರಿಗೆ ಕಠಿಣ ಸಂದೇಶ ರವಾನಿಸಿದ್ದಾರೆ.

ನಮ್ಮ ಸೈನಿಕರು ನಾವು ಯಾರಿಗೂ ತೊಂದರೆ ನೀಡುವುದಿಲ್ಲ. ಆದರೆ ಯಾರಾದರೂ ನಮಗೆ ತೊಂದರೆ ನೀಡಿದರೆ ನಾವು ಅವರನ್ನು ಬಿಡುವುದಿಲ್ಲ ಎಂಬ ಸ್ಪಷ್ಟ ಸಂದೇಶವನ್ನು ರವಾನಿಸಿದ್ದಾರೆ ಎಂದು ಸಿಎಂ ತಿಳಿಸಿದ್ದಾರೆ. ಅಮಾನವೀಯ ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತೀಕಾರವಾಗಿ ಆಪರೇಷನ್ ಸಿಂಧೂರ ಮಾಡಿದ್ದಕ್ಕಾಗಿ



ಪ್ರಧಾನಿ ನರೇಂದ್ರ ಮೋದಿಯವರಿಗೆ ಸಿಎಂ ಯೋಗಿ ಕೃತಜ್ಞತೆ ಸಲ್ಲಿಸಿದ್ದಾರೆ. ಇಡೀ ಜಗತ್ತು ಈಗ ಭಾರತೀಯ ಸೈನಿಕರ ಶೌರ್ಯವನ್ನು ಗುರುತಿಸಿದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ. ಆಪರೇಷನ್ ಸಿಂಧೂರಗಾಗಿ ನಾವು ಪ್ರಧಾನಿಗೆ ಧನ್ಯವಾದ ಹೇಳುತ್ತೇವೆ. ಏಪ್ರಿಲ್ 22 ರಂದು ಪಹಲ್ಗಾಮ್‌ನಲ್ಲಿ ಪಾಕಿಸ್ತಾನ ಬೆಂಬಲಿತ ಭಯೋತ್ಪಾದಕರ ಅನಾಗರಿಕ ಕೃತ್ಯವನ್ನು ಇಡೀ ದೇಶ ಮತ್ತು ಜಗತ್ತು ಖಂಡಿಸಿತ್ತು.

ಭಯೋತ್ಪಾದನೆಯನ್ನು ಪೋಷಿಸುವ ಪಾಕಿಸ್ತಾನ ಈ ಇಡೀ ಘಟನೆಯಲ್ಲಿ ಮೌನವಾಗಿತ್ತು. ಪಾಕಿಸ್ತಾನ ತನ್ನ ಕ್ರಮದಿಂದ ಪಾಠ ಕಲಿಯದ ನಂತರ ಭಾರತ ಆಪರೇಷನ್ ಸಿಂಧೂರ ಕಾರ್ಯಾಚರಣೆ ಪ್ರಾರಂಭಿಸಿತು. ಮೊದಲ ದಿನ 100 ಕ್ಕೂ ಹೆಚ್ಚು ಭಯೋತ್ಪಾದಕರು ಹತ್ಯೆಯಾದರು. ಈ ಭಯೋತ್ಪಾದಕರಿಗೆ ಅವರ ದುಷ್ಕೃತ್ಯಗಳಿಗೆ ಶಿಕ್ಷೆ ವಿಧಿಸಿದ ರೀತಿಯನ್ನು ಇಡೀ ಜಗತ್ತು ನೋಡಿದೆ. ಭಾರತೀಯ ಸೈನಿಕರ ಶೌರ್ಯವನ್ನು ಒಪ್ಪಿಕೊಂಡಿದೆ ಎಂದು ಸಿಎಂ ತಿಳಿಸಿದ್ದಾರೆ.

ಬಿಜೆಪಿ ಇಡೀ ದೇಶದಲ್ಲಿ ತಿರಂಗ ಯಾತ್ರೆಯನ್ನು ಆಯೋಜಿಸುತ್ತಿದೆ. ಈ ತಿರಂಗ ಭಾರತದ ಗೌರವ, ಪ್ರತಿಷ್ಠೆ ಮತ್ತು ಹೆಮ್ಮೆಯ ಸಂಕೇತವಾಗಿದೆ. ಈ ತಿರಂಗ ಭಾರತದ ಶೌರ್ಯ ಮತ್ತು ಧೈರ್ಯದ ಸಂಕೇತವಾಗಿದೆ. ಈ ತಿರಂಗ ಮತ್ತು ನಮ್ಮ ಸೈನಿಕರಿಗೆ ನಮ್ಮ ಗೌರವವನ್ನು ತೋರಿಸಲು, ಪ್ರಧಾನಿ ಮೋದಿಜಿಗೆ ಕೃತಜ್ಞತೆಯನ್ನು ವ್ಯಕ್ತಪಡಿಸಲು ವೇದಿಕೆಯಾಗಲಿದೆ ಎಂದು ಮಾತನಾಡಿದ್ದಾರೆ

# ಅಕ್ರಮ ಮದ್ಯ ಮಾರಾಟ ತಡೆಗೆ ಕ್ರಮ ಕೈಗೊಳ್ಳಿ: ಬೀದರ್ ಜಿಲ್ಲಾಧಿಕಾರಿ ಸೂಚನೆ



ಬೀದರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕಳ್ಳಭಟ್ಟಿ ಸಾರಾಯಿ, ಸೇಂದಿ , ಅಕ್ರಮ ಮದ್ಯ ಮತ್ತು ಮಾದಕ ವಸ್ತುಗಳ ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಜಿಲ್ಲಾ ಮಟ್ಟದ ಸ್ಥಾಯಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಜಿಲ್ಲಾಧಿಕಾರಿ ಶಿಲ್ಪ ಶರ್ಮಾ ಮಾತನಾಡಿದರು.

**ಬೀದರ್, ಮೇ.14–** ಜಿಲ್ಲೆಯಲ್ಲಿ ಅಕ್ರಮ ಅಬಕಾರಿ ಚಟುವಟಿಕೆಗಳನ್ನು ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಅಬಕಾರಿ ಇಲಾಖೆ ಅಧಿಕಾರಿಗಳು ಎಲ್ಲಾ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ, ಇನ್ನಷ್ಟು ಕಾರ್ಯಕ್ಷಮತೆ ವಹಿಸಿ ಹೆಚ್ಚಿನ ಗುಣಮಟ್ಟದ ಪ್ರಕರಣಗಳನ್ನು ದಾಖಲಿಸುಂತೆ ಅಬಕಾರಿ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ನಿರ್ದೇಶನ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕಳ್ಳಭಟ್ಟಿ ಸಾರಾಯಿ, ಸೇಂದಿ , ಅಕ್ರಮ ಮದ್ಯ ಮತ್ತು ಮಾದಕ ವಸ್ತುಗಳ ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಜಿಲ್ಲಾಮಟ್ಟದ ಸ್ಥಾಯಿಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜಿಲ್ಲೆಯಲ್ಲಿ ರೂಢಿಗತ ಆರೋಪಿಗಳ ವಿರುದ್ಧ ಭಾರತೀಯ ನಾಗರಿಕ ನ್ಯಾಯ ಸಂಹಿತೆ ಕಲಂ129 ರಂತೆ ಕ್ರಮ ವಹಿಸಲು ಅಬಕಾರಿ ಇಲಾಖೆಯ ಅಧಿಕಾರಿಗಳಿಗೆ ಸಹಕಾರ ನೀಡಲು ಜಿಲ್ಲೆಯ ಎಲ್ಲ ತಹಶೀಲ್ದಾರ್‌ಗಳಿಗೆ ಸೂಚಿಸಿದರು.

ಪೋಲಿಸ್ ಅಧಿಕಾರಿಗಳು ಕಳ್ಳಭಟ್ಟಿ ಮತ್ತು ಸೇಂದಿ ದಾಸ್ತಾನು ಬಗ್ಗೆ ಮೊಕದ್ದಮೆಗಳನ್ನು ದಾಖಲಿಸುವಾಗ ಅಬಕಾರಿ ಕಾಯ್ದೆಯೊಂದಿಗೆ ಭಾರತೀಯ ನಾಗರಿಕ ನ್ಯಾಯ ಸಂಹಿತೆ ಕಲಂ 123 ರಡಿಯೂ ಪ್ರಕರಣ ದಾಖಲಿಸುವಂತೆ ಪೊಲೀಸ್ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ತಹಶೀಲ್ದಾರ್‌ಗಳು ಕಳ್ಳಭಟ್ಟಿ, ಸೇಂದಿ ಮತ್ತು ಅಕ್ರಮ ಮದ್ಯ,ಮತ್ತು ಮಾದಕ ವಸ್ತುಗಳ ನಿರ್ಮೂಲನೆ ಬಗ್ಗೆ ತಾಲೂಕ ಮಟ್ಟದ ಸ್ಥಾಯಿ ಸಮಿತಿಯ ಸದಸ್ಯರುಗಳ ಸಭೆಯನ್ನು ಪ್ರತಿ ತಿಂಗಳು ನಡೆಸಿ ವಿವಿಧ ಇಲಾಖೆಗಳ ಸಾಧನೆಗಳ ಬಗ್ಗೆ ಪರಾಮರ್ಶಿಸಿ ಮಾಸಿಕ ವರದಿಯನ್ನು ಸಲ್ಲಿಸಲು ಜಿಲ್ಲೆಯ ಎಲ್ಲಾ ತಹಶೀಲ್ದಾರ್‌ಗಳಿಗೆ ಸೂಚಿಸಿದರು ಹಾಗೂ ಅಬಕಾರಿ ಪ್ರಕರಣಗಳಲ್ಲಿ ಮುಟ್ಟುಗೋಲು ಹಾಕಿಕೊಳ್ಳಲಾದ ವಾಹನಗಳನ್ನು ಇತರರಿಗೆ ಪರಭಾರೆ ಮಾಡದಂತೆ ಆರ್.ಟಿ.ಓ. ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಅಬಕಾರಿ ಮತ್ತು ಪೊಲೀಸ್ ಅಧಿಕಾರಿಗಳು ಮುಂಬರುವ ದಿನಗಳಲ್ಲಿ ಹೆಚ್ಚಿನ ಪ್ರಕರಣಗಳನ್ನು ದಾಖಲಿಸಿ ಕಳ್ಳಭಟ್ಟಿ, ಸೇಂದಿ, ನಕಲಿ ಮದ್ಯ ಮತ್ತು ಮಾದಕ ವಸ್ತುಗಳ ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ

## ಇಂಧನ ಉಳಿತಾಯ, ವಿದೇಶಿ ವಿನಿಮಯ ತಪ್ಪಿಸಲು

# 55 ಸಾವಿರ ರೂ. ವೆಚ್ಚದಲ್ಲಿ ಎಲೆಕ್ಟ್ರಿಕ್ ಬೈಕ್ ಸಂಶೋಧನೆ

**ರಾಯಚೂರು, ಮೇ. 14–**ಕೇಂದ್ರ ಸರ್ಕಾರದ ಇಂಧನ ಉಳಿತಾಯ ಮತ್ತು ವಿದೇಶಿ ವಿನಿಮಯ ತಪ್ಪಿಸಲು ಹೆಚ್ಚು ಹೆಚ್ಚು ವಿದ್ಯುತ್ ಚಾಲಿತ ವಾಹನ ಬಳಕೆಯನ್ನು ಜಾರಿಗೆ ತರಲು ನಿರ್ದೇಶಿಸಿರುವ ಹಿನ್ನೆಲೆಯಲ್ಲಿ ವಇವಿಧ ಕಂಪನಿಗಳು ವಿದ್ಯುತ್ ಚಾಲಿತ ದ್ವಿಚಕ್ರ ಮತ್ತು ನಾಲ್ಕು ಚಕ್ರದ ವಾಹನಗಳನ್ನು ತಯಾರಿಸುತ್ತದೆ.



ಆದರೆ, ಇವೆಲ್ಲವೂ ಮಧ್ಯಮ ಮತ್ತು ಬಡ ವರ್ಗದವರ ಕೈಗೆಟುಕುವ ದರದಲ್ಲಿಲ್ಲ. ಈಗ ನಗರದ ಕೈಗಾರಿಕಾ ತರಬೇತಿ ಸಂಸ್ಥೆಯ ವಿದ್ಯಾರ್ಥಿಗಳು ತಮ್ಮ ಪ್ರಾಜೆಕ್ಟ್‌ಗಾಗಿ ಅತ್ಯಂತ ಕಡಿಮೆ ವೆಚ್ಚದ ಸುಧಾರಿತ ಬಿ–ಎಲೆಕ್ಟ್ರಿಕಲ್ ಇಎಂ–25 ಬ್ರಾಂಡ್‌ನೊಂದಿಗೆ ಎಲೆಕ್ಟ್ರಿಕಲ್ ಇ ಬೈಕ್ ತಯಾರಿಸುವ ಮೂಲಕ ಗಮನ ಸೆಳೆದಿದ್ದಾರೆ.

ಮಾರುಕಟ್ಟೆಯಲ್ಲಿ ದೊರೆಯುವ ವಿವಿಧ ಮಾದರಿಯ ಎಲೆಕ್ಟ್ರಿಕಲ್ ಇ–ಬೈಕ್‌ಗಳ ಬೆಲೆ ಒಂದೂವರೆಯಿಂದ ಎರಡು ಲಕ್ಷಗಳ ವರೆಗೆ ಇದೆ. ಆದರೆ ನಾವು ಸ್ಥಳೀಯವಾಗಿ ದೊರೆ ಯುವ ದ್ವಿಚಕ್ರ ವಾಹನದ ಬಿಡಿ ಭಾಗಗಳನ್ನೇ ಬಳಸಿ, ಕೇವಲ 55 ಸಾವಿರ ರೂ. ವೆಚ್ಚದಲ್ಲಿ ಎಲೆಕ್ಟ್ರಿಕಲ್ ಇ–ಬೈಕ್ ತಯಾರಿಸಿದ್ದು, ಇ–ಬೈಕ್‌ಗೆ ಬಳಸಿರುವ ಲೀಥಿಯಮ್ ಬ್ಯಾಟರಿ ನಮ್ಮ ಕಾಲೇಜಿನಲ್ಲಿಯೇ ಮಾಡಿದ್ದರಿಂದ ತಯಾರಿಕೆಗೆ ಆಗಿರುವ ವೆಚ್ಚ ಕಡಿಮೆಯಾಗಿದೆ ಎಂದು ಬಸವ ಕೈಗಾರಿಕಾ ತರಬೇತಿ ಸಂಸ್ಥೆ ವಿದ್ಯಾರ್ಥಿ ತಂಡದ ನಾಯಕ ಕಾಳಿ ಪ್ರಸಾದ್ ತಿಳಿಸಿದ್ದಾರೆ.

ಇ–ಬೈಕ್‌ಗೆ 18 ಇಂಚು ಹಬ್ ಮೋಟಾರ್, 1,500 ವ್ಯಾಟ್ಸ್ ಪವರ್, 18 ಎಎಚ್, 60 ವೋಲ್ಟೇಜ್ ಲೀಥಿಯಂ ಬ್ಯಾಟರಿ, ಇದಕ್ಕೆ 50 ಬಿಎಂಎಸ್, ವಿತ್ ಓವರ್ ಲೋಡ್ ಹಾಗೂ ಶಾರ್ಟ್ ಸರ್ಕ್ಯೂಟ್, ಟೆಂಪರೇಚರ್ ಪ್ರೊಟೆಕ್ಷನ್ ಅಳವಡಿಸಲಾಗಿದೆ. 2 ಗಂಟೆ ಚಾರ್ಜ್ ಮಾಡಿದರೆ ಗಂಟೆಗೆ 60 ರಿಂದ 70 ಕಿ.ಮೀ. ಚಲಾಯಿಸಬಹುದು. 200 ಕೆಜಿ ಭಾರ ಹೊರುವ ಸಾಮರ್ಥ್ಯವಿದೆ. ಹೆಡ್ ಲೈಟ್, ಹಾರ್ನ್, ಇಂಡಿಕೇಟರ್, ಟೈಲ್ ಲ್ಯಾಂಪ್, ಬೈಕ್ 3 ಡಿಜಿಟಲ್ ಗೇರ್ ಹೊಂದಿದ್ದು ಅದರಲ್ಲಿ ರಿವರ್ಸ್ ಗೇರ್ ಕೂಡ ಇದೆ. ಮೊಬೈಲ್ ಮೂಲಕವೂ ಬೈಕ್ ನಿಯಂತ್ರಿಸುವ ವ್ಯವಸ್ಥೆ ಅಳವಡಿಸಲಾಗಿದೆ

# ಸಾಹಿತ್ಯ ಪರಿಷತ್ತು ಕನ್ನಡದ ಅಸ್ಮಿತೆ: ಬಾಬು ವಾಲಿ ಅಭಿಮತ



**ಬೀದರ್, ಮೇ. 14–** ಕನ್ನಡ ಸಾಹಿತ್ಯ ಪರಿಷತ್ ಕನ್ನಡ ನಾಡು ಹಾಗೂ ನುಡಿಯ ಅಸ್ಮಿತೆಯಾಗಿದೆ ಎಂದು ಭಾರತೀಯ ಬಸವ ಬಳಗದ ರಾಜ್ಯ ಅಧ್ಯಕ್ಷ ಬಾಬುವಾಲಿ ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ವತಿಯಿಂದ ನಗರದ ಬಸವ ಕೇಂದ್ರದಲ್ಲಿ ಈಚೆಗೆ ನಡೆದ ಕನ್ನಡ ಸಾಹಿತ್ಯ ಪರಿಷತ್ತಿನ 111ನೇ ಸಂಸ್ಥಾಪನಾ ದಿನ, ಬುದ್ಧ, ಬಸವ ಹಾಗೂ ಅಂಬೇಡ್ಕರ್ ಜಯಂತಿ ಆಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.ಪರಿಷತ್ ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿ, ನೆಲ, ಜಲದ ಸಮೃದ್ಧಿಗೆ ಶ್ರಮಿಸುತ್ತಿರುವ ಸಂಸ್ಥೆಯಾಗಿದೆ ಎಂದು ಬಣ್ಣಿಸಿದರು.

ಅಧ್ಯಕ್ಷತೆ ವಹಿಸಿದ್ದ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಸುರೇಶ ಚನಶೆಟ್ಟಿ ಮಾತನಾಡಿ, ಪರಿಷತ್ ಸಂಶೋಧನೆ, ಪ್ರಕಟಣೆ, ಸಮ್ಮೇಳನ, ಸಮಾವೇಶ, ವಿಚಾರ ಸಂಕಿರಣಗಳ ಮೂಲಕ ರಾಜ್ಯದಲ್ಲಿ ನುಡಿ ಸಂವರ್ಧನೆಗೆ ಟೊಂಕ ಕಟ್ಟಿ ನಿಂತಿದೆ. ರಾಜ್ಯದಲ್ಲಿ ಪರಿಷತ್ ಅಜೀವ ಸದಸ್ಯರ ಸಂಖ್ಯೆ 4 ಲಕ್ಷ ದಾಟಿದೆ ಎಂದು ಹೇಳಿದರು.

ಪರಿಷತ್ ರಾಜ್ಯ ಅಧ್ಯಕ್ಷ ಡಾ. ಮಹೇಶ ಜೋಶಿ ಅವರು ಪರಿಷತ್ ಅನ್ನು ಜನಸಾಮಾನ್ಯರ ಪರಿಷತ್ ಆಗಿಸಲು ಹಾಗೂ ಸದಸ್ಯರ ಸಂಖ್ಯೆ ಹೆಚ್ಚಿಸಲು ಶ್ರಮಿಸುತ್ತಿದ್ದಾರೆ ಎಂದು ತಿಳಿಸಿದರು. ಈಚೆಗೆ ಮಂಡ್ಯ ಸಮ್ಮೇಳನದಲ್ಲಿ ಆದ ಕೆಲ ಗೊಂದಲ, ಚುನಾಯಿತ ಅಧ್ಯಕ್ಷರ ನಿಧನ, ರಾಜೀನಾಮೆ, ಅನರ್ಹತೆ ಸಂದರ್ಭದಲ್ಲಿ ಆ ಹುದ್ದೆಗಳನ್ನು ತುಂಬಲು ಯಾರಿಗೆ ಅಧಿಕಾರ ನೀಡಬೇಕು ಎಂಬ ವಿಷಯಗಳನ್ನು ನಿಬಂಧನೆಗಳಲ್ಲಿ ಸೇರಿಸುವ ಉದ್ದೇಶದಿಂದ ಬೈಲಾ ತಿದ್ದುಪಡಿಗೆ ಮುಂದಾಗಿದ್ದು, ಕಾರ್ಯಕಾರಿ ಸಮಿತಿ ಸಭೆಯಲ್ಲಿ ಚರ್ಚಿಸಿಯೇ ಅದನ್ನು ವಿಶೇಷ ಸಾಮಾನ್ಯ ಸಭೆಗೆ ಒಯ್ಯಲಾಗುತ್ತಿದೆ. ಕೆಲವರು ಇದನ್ನೇ ಸರ್ವಾಧಿಕಾರಿ ಧೋರಣೆ ಎಂದು ಬಿಂಬಿಸುತ್ತಿರುವುದು ಸರಿಯಲ್ಲ ಎಂದು ತಿಳಿಸಿದರು.

ಕೆಲವರು ಉದ್ದೇಶಪೂರ್ವಕವಾಗಿ ಮಹೇಶ ಜೋಶಿ ಅವರನ್ನು ವಿರೋಧಿಸುತ್ತಿದ್ದಾರೆ. ಜೋಶಿ ಅವರು ಪರಿಷತ್ ಜಿಲ್ಲಾ ಘಟಕಗಳ ಅಭಿಪ್ರಾಯ ಕ್ರೋಢೀಕರಿಸಿಯೇ ನಿರ್ಣಯ ತೆಗೆದುಕೊಳ್ಳಲಿದ್ದಾರೆ ಎಂದು ಹೇಳಿದರು.

## ಸರ್ಕಾರದ ಹಣ ದುರುಪಯೋಗ ಆರೋಪ

# ಪೌರಾಯುಕ್ತ ಮಂಜುನಾಥ ಗುಂಡೂರು ಅಮಾನತು

**ರಾಯಚೂರು, ಮೇ.14–** ಜಿಲ್ಲೆಯ ಸಿಂಧನೂರು ನಗರಸಭೆಯ ಪೌರಾಯುಕ್ತ ಮಂಜುನಾಥ ಗುಂಡೂರ ಅವರನ್ನು ಗಂಭೀರ ಆರೋಪದ ಹಿನ್ನೆಲೆಯಲ್ಲಿ ಪೌರಾಡಳಿತ ನಿರ್ದೇಶನಾಲಯ ಸೇವೆಯಿಂದ ಅಮಾನತುಗೊಳಿಸಿ ಆದೇಶ ಹೊರಡಿಸಿದೆ.

ವಿವಿಧ ಯೋಜನೆಗಳಲ್ಲಿ ಅವ್ಯವಹಾರ, ಸರ್ಕಾರದ ಹಣ ದುರುಪಯೋಗ, ಅನಧಿಕೃತ ಕಟ್ಟಡಗಳಿಗೆ ಸಂಬಂಧಿಸಿದ ದೂರು ಗಳು ಹಾಗೂ ತೆರಿಗೆ ವಸೂಲಾತಿ ದುರುಪಯೋಗ ಆರೋಪಗಳು ಇವರ ವಿರುದ್ಧ ಕೇಳಿ ಬಂದಿದೆ.

ಈ ಸಂಬಂಧ ತುಮಕೂರು ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರ ನೇತೃತ್ವದಲ್ಲಿ ನಡೆದ ತನಿಖೆಯಲ್ಲಿ ಮಂಜುನಾಥ ಗುಂಡೂರು ಅವರು ಸರ್ಕಾರದ ನಿಯಮಗಳನ್ನು ಉಲ್ಲಂಘಿಸಿದ್ದು ಮತ್ತು ಕರ್ತವ್ಯಲೋಪಕ್ಕೆ ಒಳಗಾಗಿ ರುವುದು ಸಾಬೀತಾದ ಹಿನ್ನೆಲೆ ಅವರಿಗೆ 7 ದಿನಗಳ ಒಳಗೆ ಸಮಜಾಯಿಷಿ ಸಲ್ಲಿಸುವಂತೆ ನೋಟೀಸ್ ಜಾರಿಗೊಳಿಸಲಾಗಿದ್ದು, ತಕ್ಷಣದಿಂದ ಅಮಾನತುಗೊಳಿಸ ಲಾಗಿದೆ. ತನಿಖೆಯ ಮುಂದಿನ ಹಂತದಲ್ಲಿ ಈ ಆರೋಪಗಳ ಬಗ್ಗೆ ಇನ್ನಷ್ಟು ವಿವರಗಳು ಬಹಿರಂಗ ಗೊಳ್ಳುವ ಸಾಧ್ಯತೆಯಿದೆ.

ಒಣಗಲು ಹಾಕಿದ್ದ ಭತ್ತ ಹಾಳು: ಜಿಲ್ಲೆಯ ಸಿಂಧನೂರು ಮತ್ತು ಮಸ್ಕಿ ತಾಲೂಕುಗಳಲ್ಲಿ ಭಾರೀ ಅಕಾಲಿಕ ಮಳೆಯಿಂದಾಗಿ ರೈತರ ಜಮೀನುಗಳಲ್ಲಿ ಒಣಗಲು ಹಾಕಿದ್ದ ಭತ್ತಕ್ಕೆ ವ್ಯಾಪಕ ಹಾನಿಯಾಗಿದೆ. ಮಳೆನೀರಿನಿಂದ ಭತ್ತ ಕೊಳೆತು, ರೈತರು ಭಾರೀ ನಷ್ಟ ಅನುಭವಿಸಿದ್ದಾರೆ.

ಈ ಘಟನೆಯಿಂದ ಕಂಗಾಲಾದ ರೈತರು, ಹಾನಿಯಾದ ಭತ್ತಕ್ಕೆ ಸೂಕ್ತ ಪರಿಹಾರ ನೀಡುವಂತೆ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ. ರೈತ ಸಂಘವು ಸರ್ಕಾರಕ್ಕೆ ತಕ್ಷಣದ ಕ್ರಮಕ್ಕಾಗಿ ಆಗ್ರಹಿಸಿ ಮನವಿ ಸಲ್ಲಿಸಿದೆ. ಸರ್ಕಾರದಿಂದ ತಕ್ಷಣದ ಸಹಾಯ ಮತ್ತು ಪರಿಹಾರದ ಕುರಿತು ರೈತರು ಕಾಯುತ್ತಿದ್ದಾರೆ.

# 'ಜಗತ್ತಿಗೆ ಭಾರತ ಕೊಟ್ಟ ಅತಿದೊಡ್ಡ ಆರೋಗ್ಯ ಭಾಗ್ಯವೇ ಯೋಗ'

**ಕಲಬುರಗಿ, ಮೇ. 14–** ಜಗತ್ತಿಗೆ ಭಾರತ ಕೊಟ್ಟ ಅತಿ ದೊಡ್ಡ ಆರೋಗ್ಯ ಭಾಗ್ಯವೆ ಯೋಗ. ಇದು ಜಗತ್ತು ಕಣ್ಣು ಬಿಡುವ ಮುಂಚೆಯೆ 5,000 ವರ್ಷಗಳ ಹಿಂದೆಯೇ ಭಾರತದಲ್ಲಿ ಹುಟ್ಟಿಕೊಂಡ ದೈಹಿಕ ಮತ್ತು ಆಧ್ಯಾತ್ಮಿಕ ಅಭ್ಯಾಸವಾಗಿದೆ ಎಂದು ಹಿಂಗುಲಾಂಬಿಕಾ ಆಯುರ್ವೇದ ಕಾಲೇಜಿನ ದ್ರವ್ಯಗುಣ ವಿಭಾಗದ ಮುಖ್ಯಸ್ಥೆ ಯೋಗ ತರಬೇತುದಾರರಾದ ಡಾ.ನಿರ್ಮಲಾ ಕೆಳಮನಿ ಹೇಳಿದರು.

ನಗರದ ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಪೂಜ್ಯ ಡಾ ಶಿವಕುಮಾರ ಸ್ವಾಮೀಜಿ ಸ್ಕೂಲ್ ಆಫ್ ಆರ್ಕಿಟೆಕ್ಚರ್ ಹಾಗೂ ಭಾರತ ಸರ್ಕಾರದ ಆಯುಷ್ ಸಚಿವಾಲಯದ ಸಹಯೋಗದಲ್ಲಿ ನಡೆದ ನಮಸ್ತೆ ಯೋಗ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತಿದ್ದರು.

ಮನುಷ್ಯನ ಬೆಳವಣಿಗೆಗೆ ಆಹಾರ ಪದ್ಧತಿ ಹಾಗೂ ಯೋಗಾಭ್ಯಾಸ ಅತೀ ಮುಖ್ಯವಾದುದು. ಆಹಾರಕ್ಕೂ ಆರೋಗ್ಯಕ್ಕೂ ನಂಟಿದೆ. ಇತ್ತೀಚೆಗಿನ ನಮ್ಮ ಜೀವನ ಕ್ರಮ ನಾವು ಸೇವಿಸುವ ಆಹಾರದ ಮೇಲೆ ಪ್ರಭಾವ ಬೀರಿದೆ ಎಂದು ಹೇಳಿದರು

ಗಡಿಬಿಡಿಯ ಜೀವನದಿಂದ ಥಟ್ಟೆಂದು ತಯಾರಿಸುವ ಆಹಾರದ ಕಡೆಗೆ, ಜಂಕ್ ಫುಡ್ ಕಡೆಗೆ, ಟೆಲಿವಿಷನ್ ನೋಡುತ್ತ



ಕಲಬುರಗಿ ನಗರದ ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಪೂಜ್ಯ ಡಾ ಶಿವಕುಮಾರ ಸ್ವಾಮೀಜಿ ಸ್ಕೂಲ್ ಆಫ್ ಆರ್ಕಿಟೆಕ್ಚರ್ ಹಾಗೂ ಭಾರತ ಸರ್ಕಾರದ ಆಯುಷ್ ಸಚಿವಾಲಯದ ಸಹಯೋಗದಲ್ಲಿ ನಡೆದ ನಮಸ್ತೆ ಯೋಗ ತರಬೇತಿ ಕಾರ್ಯಕ್ರಮ ಡಾ.ನಿರ್ಮಲಾ ಕೆಳಮನಿ ಉದ್ಘಾಟಿಸಿದರು.

ಉಣ್ಣುವುದರ ಕಡೆಗೆ ವಾಲಿದ್ದೇವೆ. ಬಾಯಿ ಇರುವುದೇ ತಿನ್ನುವುದಕ್ಕಾಗಿ ಎನ್ನುವ ಜನರಿದ್ದಾರೆ. ಆದರೆ ನಾಲಿಗೆ ಚಪಲ ಬರೀ ಚಪಲವಾಗದೆ ಅನಾರೋಗ್ಯಕ್ಕೆ ಮೂಲವಾಗಿ ಅವರನ್ನು ರೋಗಿಯನ್ನಾಗಿ ಮಾಡಿ ಬಿಡುತ್ತದೆ. ಅಲ್ಲದೆ ಅಜೀ ರ್ಣತೆಯಿಂದ ಹಿಡಿದು ಸಿಡಿಟಿ, ಬೊಜ್ಜು, ಸಕ್ಕರೆಕಾಯಿಲೆ, ಬಿ.ಪಿ., ಕ್ಯಾನ್ಸರ್‌ನಂತಹ ಮಹಾರೋಗಗಳ ತವರೂರಾಗಿ ಬಿಡುತ್ತದೆ ಈ ದೇಹ ಎಂದು ಹೇಳಿದರು.

ಇಡಿ ಜಗತ್ತೇ ಆರೋಗ್ಯವಾಗಿರ ಬೇಕೆಂದು ಬಯಸಿದ ನಮ್ಮ ಪ್ರಧಾನಿ ಮಾನ್ಯ ನರೇಂದ್ರ ಮೋದಿಜಿಯವರು ಈ ಬಾರಿಯ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಒಂದು ಭೂಮಿಗಾಗಿ ಒಂದು ಯೋಗ ಎಂದು ಘೋಷಣೆ ಮಾಡಿದ್ದಾರೆ ಅಂದ್ರೆ ಇಡಿ ವಿಶ್ವದ ಆರೋಗ್ಯಕ್ಕಾಗಿ ಈ ದಿನವನ್ನು ಮಿಸಲಿಟ್ಟಿದ್ದಾರೆ ಎಂದು ಹೇಳಿದರು.

ಸಂಸ್ಥೆಯ ಉಪಾಧ್ಯಕ್ಷರಾದ ರಾಜಾ ಭಿ ಭೀಮಳ್ಳಿ ಮಾತನಾಡಿ ಆಧುನಿಕತೆಯತ್ತ ಹೆಜ್ಜೆ ಹಾಕುತ್ತಿರುವ ಮಾನವನಿಗೆ ಒತ್ತಡದ ಜೀವನದ ನಡುವೆ ಆರೋಗ್ಯ ಕಾಪಾಡಿಕೊಳ್ಳಬೇಕಾದ ಸನ್ನಿವೇಶ ಬಂದೊದಗಿದೆ. ಒತ್ತಡದಿಂದ ಮಾನಸಿಕ,ದೆ?ಹಿಕ ತೊಂದರೆಗಳು ಕಾಣಿಸಿಕೊಂಡು ಆಸ್ಪತ್ರೆ ಬಾಗಿಲು ತಟ್ಟುವ ಬದಲು ಯೋಗದ ಮೂಲಕ ಸದಾಕಾಲ ಆರೋಗ್ಯ ಕಾಪಾಡಿ ಕೊಳ್ಳಬೇಕು.

ಅನಾರೋಗ್ಯಕ್ಕೆ ತುತ್ತಾಗಿ ಆಸ್ಪತ್ರೆಗೆ ತರಳಿ ಸಾವಿರಾರು ರೂ.ಖರ್ಚು ಮಾಡಿ ಔಷಧ ಖರೀದಿಸಿ ಅದನ್ನು ಸೇವನೆ ಮಾಡಿದಾಗಲೂ ಆರೋಗ್ಯ ಸುಧಾರಿಸುತ್ತಿಲ್ಲ ಎಂದರೆ, ಅದಕ್ಕೆ ಪರಿಹಾರ ಯೋಗ. ಪ್ರಾಚೀನ ಕಾಲದಿಂದ ಬಂದಿರುವ ಯೋಗದಿಂದ ಆರೋಗ್ಯ ಕಾಪಾಡಿಕೊಳ್ಳಲು ಸಾಧ್ಯ ಎಂಬುದು ಈಗ ಎಲ್ಲರ ಅರಿವಿಗೂ ಬಂದಿದೆ. ಯೋಗವೆಂಬುದು ಆರೋಗ್ಯ ವಂತರನ್ನಾಗಿಸಿ ಔಷಧಿಯಿಂದ ದೂರವಿಡುವ ಮಹಾನ್ ಅಸ್ತ್ರ ಎಂದರು.

# ವಯನಾಡ್ ಹವಾಮಾನ ಮುನ್ಸೂಚನೆ ವ್ಯವಸ್ಥೆ ನಿರ್ಧರಿಸಲು ಮಂಗಳೂರಿನ ರೇಡಾರ್‌ನ ನೆರವಿಗೆ ಮುಂದಾದ ಐಎಂಡಿ

**ತಿರುವನಂತಪುರ, ಮೇ 14:** ವಯನಾಡ್‌ನಲ್ಲಿ ಕಳೆದ ವರ್ಷ ಭಾರಿ ಮಳೆಗೆ ಭೂಕುಸಿತ ಸಂಭವಿಸಿ ಅಪಾರ ಹಾನಿಯಾಗಿದ್ದು ಜನರ ಮನದಿಂದ ಇನ್ನೂ ಮಾಸಿಲ್ಲ. ಭವಿಷ್ಯದಲ್ಲಿ ಇಂತಹ ಅವಘಡಗಳನ್ನು ತಡೆಯುವ ಉದ್ದೇಶದಿಂದ ಕರ್ನಾಟಕದ ಮಂಗಳೂರಿನಲ್ಲಿ ಹೊಸದಾಗಿ ಸ್ಥಾಪಿಸಿರುವ ರೇಡಾರ್‌ನ ನೆರವು ಪಡೆಯಲು ಭಾರತೀಯ ಹವಾಮಾನ ಇಲಾಖೆ(ಐಎಂಡಿ) ಮುಂದಾಗಿದೆ. ವಯನಾಡ್ ಹಾಗೂ ಸುತ್ತಮುತ್ತಲ ಪ್ರದೇಶಕ್ಕೆ ಸಂಬಂಧಿಸಿ ಹವಾಮಾನ ಮುನ್ಸೂಚನೆ ವ್ಯವಸ್ಥೆಯನ್ನು ಮತ್ತಷ್ಟು ಉತ್ತಮಗೊಳಿಸುವುದು ಮಂಗಳೂರಿನಲ್ಲಿರುವ ರೇಡಾರ್ ಅನ್ನು ಬಳಸುವ ಉದ್ದೇಶವಾಗಿದೆ ಎಂದು ಇಲಾಖೆ ಮೂಲಗಳು ಹೇಳಿವೆ. ಸದ್ಯ ನೌಕಾಸ್ಟ್ ವ್ಯವಸ್ಥೆಯಡಿ ಹವಾಮಾನ ಕುರಿತು ಮಾಹಿತಿ ನೀಡಲಾಗುತ್ತಿದೆ. ಆಯಾ ಜಿಲ್ಲೆಗೆ ಸಂಬಂಧಪಟ್ಟಂತೆ ಮುನ್ಸೂಚನೆ ಗಳನ್ನು ನೀಡಲಾಗುವುದು. ಈ ನೂತನ ವ್ಯವಸ್ಥೆಯಿಂದ ನಿರ್ದಿಷ್ಟ ಸ್ಥಳ ಕುರಿತ ನಿಖರ ಮುನ್ಸೂಚನೆ ಸಾಧ್ಯವಾಗಲಿದೆ ಎಂದು ಐಎಂಡಿಯ ಪ್ರಾದೇಶಿಕ ನಿರ್ದೇಶಕಿ ನೀತಾ ಕೆ.ಗೋಪಾಲ್ ಹೇಳಿದ್ದಾರೆ. ಕಾಸರ ಗೋಡು, ಕಣ್ಣೂರು, ಕೋಯಿಕ್ಕೋಡ್ ಹಾಗೂ ವಯನಾಡ್‌ನ ಕೆಲ ಭಾಗಗಳು ಸೇರಿ ಇಡೀ ಕೇರಳದ ಉತ್ತರ ಭಾಗದ ಜಿಲ್ಲೆಗಳಿಗೆ ಸಂಬಂಧಿಸಿದ ಹವಾಮಾನ ವೈಪರೀತ್ಯ ಕುರಿತ ಮುನ್ಸೂಚನೆಯನ್ನು ಮಂಗಳೂರಿನಲ್ಲಿನ ರೇಡಾರ್ ಬಳಸಿ ಮಾಹಿತಿಯನ್ನು ನೀಡಲಾಗುವುದು ಎಂದೂ ಅವರು ಹೇಳಿದ್ದಾರೆ.


15 ಮೇ 2025
ಕಾಂಗ್ರೆಸ್ ಪಕ್ಷದ ರಾಜ್ಯಾಧ್ಯಕ್ಷರು ಹಾಗೂ
ಉಪಮುಖ್ಯಮಂತ್ರಿಗಳಾದ ಸನ್ಮಾನ್ಯಶ್ರೀ
ಡಿ.ಕೆ.ಶಿವಕುಮಾರ್ ಅವರಿಗೆ
ಜನ್ಮದಿನದ
ಶುಭಾಶಯಗಳು
ಶುಭಕೋರುವವರು:
ಡಿ.ಕೆ.ಶಿವಕುಮಾರ್ ಅವರ ಅಭಿಮಾನಿಗಳು,
ಹಿತೈಷಿಗಳು ಹಾಗೂ ಸ್ನೇಹಿತರು
ನವದೆಹಲಿ, ಬೆಂಗಳೂರು, ಸಾತನೂರು, ಕನಕಪುರ